22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 129 | ನವದೆಹಲಿ | ಬೆಲೆ ₹ 10 | ನವಂಬರ್ 9, 2024 ಶನಿವಾರ

## ಒಳಪುಟಗಳಲ್ಲಿ

ಮಣಿಪುರದಲ್ಲಿ ಮತ್ತೆ ಹಿಂಸಾಚಾರ, ಮನೆಗಳಿಗೆ ಬೆಂಕಿ - ಪು.4

ಛಾಯಾಚಿತ್ರಗ್ರಹಣವೂ ಪ್ರತಿಭಾನ್ವಿತ ಕಲೆ: ಮೈಕೆಲ್ ಡಿಸೋಜಾ - ಪು.4

## ನನ್ನ ವಿರುದ್ಧ ರಾಜಕೀಯ ಷಡ್ಯಂತ್ರ ಸಿಎಂ ಸಿದ್ದರಾಮಯ್ಯ ಆಕ್ರೋಶ

**ಬೆಂಗಳೂರು, ನ.8:** ಸಿಬಿಐ, ಇ.ಡಿ., ಐಟಿ ಮೂಲಕ ನನ್ನನ್ನು ರಾಜಕೀಯವಾಗಿ ಮುಗಿಸಲು ಕೇಂದ್ರದ ಎನ್‌ಡಿಎ ಸರ್ಕಾರ ಮುಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತೆ ಆರೋಪಿಸಿದ್ದಾರೆ. ನಾನು, ಅಧಿಕಾರಲ್ಲಿದ್ದರೆ ಬಿಜೆಪಿ ಕರ್ನಾಟಕದಲ್ಲಿ ಮತ್ತೆ ಅಧಿಕಾರಕ್ಕೆ ಬರುವುದು ಕನಸಿನ ಮಾತು ಎಂಬ ಒಂದೇ ಉದ್ದೇಶಕ್ಕೆ ನನ್ನ ವಿರುದ್ಧ ಕೇಂದ್ರ ತನಿಖಾ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಂಡು ಕಟ್ಟಿಹಾಕುವ ಪ್ರಯತ್ನ ಮಾಡುತ್ತಿದೆ ಎಂದರು. ಬಡವರ ಪರವಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದು ಬಿಜೆಪಿಗೆ ಸಹಿಸಲು ಆಗುತ್ತಿಲ್ಲ, ಆದ್ದರಿಂದ ನನ್ನ ಮೇಲೆ ಸುಳ್ಳು ಮೊಕದ್ದಮೆ ಹಾಕಿಸಿದ್ದಾರೆ.



ನಾನು ಹಳ್ಳಿಯಿಂದ ಬಂದವನು ಇಂತಹದ್ದಕ್ಕೆಲ್ಲಾ ಹೆದರುವ ಮಗ ನಾನಲ್ಲ. ರಾಜ್ಯದಲ್ಲಿ ನಡೆಯುತ್ತಿರುವ ವಿಧಾನಸಭಾ ಉಪಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿ, ಕೇಂದ್ರ ತಮ್ಮ ವಿರುದ್ಧ ಷಡ್ಯಂತ್ರಗಳನ್ನು ಮಾಡುತ್ತಿದೆ ಎಂದು ಅವರು ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು, ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾಡುತ್ತಿರುವ ಎಲ್ಲಾ ಆರೋಪಗಳು ಸುಳ್ಳಿನಕಂತೆ ಎಂದು ಬಣ್ಣಿಸಿದ ಅವರು, ನನ್ನ ಬಳಿ ಸರ್ಕಾರಿ ನೌಕರರಿಗೆ ವೇತನ ನೀಡಲೂ ಹಣವಿಲ್ಲ ಎಂಬ ಹಸಿಸುಳ್ಳು ಹೇಳುತ್ತಾರೆ.

ಐದು ಗ್ಯಾರಂಟಿಗಳಿಗೆ 56,000 ಕೋಟಿ ರೂ. ನೀಡಿರುವುದಲ್ಲದೆ, ಅಭಿವೃದ್ಧಿಗಾಗಿ 1.20 ಲಕ್ಷ ಕೋಟಿ ರೂ. ನೀಡಿದ್ದೇನೆ, ಇದೆಲ್ಲಾ ಎಲ್ಲಿಂದ ಬಂತು ಮಿಸ್ಟರ್ ಮೋದಿ ಎಂದು ಖಾರವಾಗಿ ಪ್ರಶ್ನಿಸಿದ್ದಾರೆ. 15ನೇ ಹಣಕಾಸು ಆಯೋಗದ ಶಿಫಾರಸಿನಂತೆ 11,495 ಕೋಟಿ ರೂ. ಕೇಂದ್ರದಿಂದ ನಮಗೆ ಕೊಡಬೇಕಿತ್ತು, ಇದು ನಮ್ಮದೇ ಪಾಲಿನ ಹಣ, ಇದನ್ನು ರಾಜ್ಯಕ್ಕೆ ಕೊಡದೆ ನಮಗೆ ವಂಚಿಸಿದ್ದಾರೆ, ಇದೂ ಸೇರಿ ಒಟ್ಟು 17,000 ಕೋಟಿ ರೂ. ವಂಚನೆಯಾಗಿದೆ. ನಮ್ಮ ಪಾಲಿನ 17,000 ಕೋಟಿ ರೂ. ಬಂದಿದ್ದರೆ, ರಾಜ್ಯದಲ್ಲಿ ಮತ್ತಷ್ಟು ಅಭಿವೃದ್ಧಿ ಮಾಡಿಬಿಡುತ್ತಾರೆ ಎನ್ನುವ ಕಾರಣಕ್ಕೆ ನಮಗೆ ವಂಚಿಸಿ ರಾಜ್ಯದ ಅಭಿವೃದ್ಧಿಗೆ ಮೋದಿ ಕಂಟಕರಾಗಿದ್ದಾರೆ. ಕಲ್ಯಾಣ ಕರ್ನಾಟಕಕ್ಕೆ 371ಜೆ ಜಾರಿಗೆ ಬಿಜೆಪಿ ವಿರೋಧಿಸಿತ್ತು, ಯಾವುದೇ ಕಾರಣಕ್ಕೂ ಕೊಡಬಾರದು ಎಂದಿತ್ತು. ಆಗ ಕೇಂದ್ರದಲ್ಲಿದ್ದ ಪ್ರಧಾನಿ ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರ 371ಜೆ ಜಾರಿ ಮಾಡಿತು, ಸೋನಿಯಾಗಾಂಧಿ, ಮಲ್ಲಿಕಾರ್ಜುನ ಖರ್ಗೆ ಸಹಕಾರದಿಂದ 371ಜೆ ಜಾರಿಯಾಯಿತು. ಜಾರಿಯಾಗುತ್ತಿದ್ದಂತೆ ಬಳ್ಳಾರಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ 5,000 ಕೋಟಿ ರೂ. ವಿಶೇಷ ಅನುದಾನ ನಾನು ನೀಡಿದೆ, ಬಿಜೆಪಿ ಏನು ಕೊಟ್ಟಿದೆ ಎಂದು ಪ್ರಶ್ನಿಸಿದರು.

### ಆದಾಯಮೀರಿ ಆಸ್ತಿ ಗಳಿಕೆ ಪ್ರಕರಣ


## ಸಿಬಿಐ ಅರ್ಜಿ ವಿಚಾರಣೆ: ಡಿ.ಕೆ.ಶಿ.ಗೆ ಸುಪ್ರೀಂಕೋರ್ಟ್ ನೋಟೀಸ್ ಜಾರಿ

**ನವದೆಹಲಿ, ನ.8:** ಆದಾಯ ಮೀರಿದ ಆಸ್ತಿ ಗಳಿಕೆ ಆರೋಪಕ್ಕೆ ಸಂಬಂಧಿಸಿದಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಈ ಹಿಂದಿನ ಬಿಜೆಪಿ ಸರ್ಕಾರ ಸಿಬಿಐ ತನಿಖೆಗೆ ನೀಡಿದ್ದ ಅನುಮತಿಯನ್ನು ಹಿಂಪಡೆದಿದ್ದ ಈಗಿನ ಕಾಂಗ್ರೆಸ್ ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಸಿಬಿಐ ಸಲ್ಲಿಸಿದ್ದ ಅರ್ಜಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹಾಗೂ ಶಿವಕುಮಾರ್‌ಗೆ ಸುಪ್ರೀಂ ಕೋರ್ಟ್ ಶುಕ್ರವಾರ ನೋಟಿಸ್ ಜಾರಿ ಮಾಡಿದೆ. ನ್ಯಾ. ಸೂರ್ಯಕಾಂತ್ ಹಾಗೂ ನ್ಯಾ. ಉಜ್ಜಲ್ ಭುಯನ್ ಅವರಿದ್ದ ಪೀಠವು ಸೋಮವಾರ ಅರ್ಜಿಯ ವಿಚಾರಣೆ ನಡೆಸಿತು. ಕರ್ನಾಟಕ ಹೈಕೋರ್ಟ್ನ ತೀರ್ಪಿನ ವಿರುದ್ಧ ಸಿಬಿಐ ಮೇಲ್ಮನವಿ ಸಲ್ಲಿಸಿದೆ ಎಂದು ಸಿಬಿಐ ಪರ ವಕೀಲರು ಪೀಠದ ಗಮನಕ್ಕೆ ತಂದರು. ಇದನ್ನು ಪುರಸ್ಕರಿಸಿದ ಪೀಠ, ರಾಜ್ಯ ಸರ್ಕಾರ ಮತ್ತು ಡಿ.ಕೆ. ಶಿವಕುಮಾರ್‌ಗೆ ನೋಟಿಸ್ ಜಾರಿ ಮಾಡಿ ಪ್ರತಿಕ್ರಿಯಿಸುವಂತೆ ನಿರ್ದೇಶಿಸಿದೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಕೆಗೆ ಸಂಬಂಧಿಸಿದಂತೆ ತನಿಖೆ ನಡೆಸುವಂತೆ 2019ರಲ್ಲಿದ್ದ ಬಿಜೆಪಿ ಸರ್ಕಾರ ಸಿಬಿಐಗೆ ವಹಿಸಿತ್ತು. 2023ರ ನ. 23ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಸಿಬಿಐಗೆ ನೀಡಿದ್ದ ತನಿಖೆಯನ್ನು ಹಿಂಪಡೆದಿತ್ತು.

ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಿಬಿಐ ಹಾಗೂ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಆದರೆ ಕರ್ನಾಟಕ ಹೈಕೋರ್ಟ್ ಈ ಅರ್ಜಿಗಳನ್ನು ವಜಾಗೊಳಿಸಿತ್ತು.

ಸಿಬಿಐ ಕೇಂದ್ರ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತದೆ. ಅರ್ಜಿಯಲ್ಲಿ ದೆಹಲಿ ವಿಶೇಷ ಪೊಲೀಸ್ ಕಾಯ್ದೆ–1946 ಮತ್ತು ಅಕ್ರಮ ಹಣ ವರ್ಗಾವಣೆ ಕಾಯ್ದೆ–2002ರ ಅನ್ವಯ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಾಂವಿಧಾನಿಕ ಅಧಿಕಾರದ ಕುರಿತಾದ ನಿಬಂಧನೆಗಳಿಗೆ ಸಂಬಂಧಿಸಿದ ವಿಚಾರಗಳು ಇಲ್ಲಿ ಉದ್ಭವವಾಗಿವೆ. ಅರ್ಜಿಯಲ್ಲಿನ ಎಲ್ಲ ಪಕ್ಷಗಾರರ ವಾದ ಮತ್ತು ಕಾನೂನಿನ ನಿಬಂಧನೆಗಳನ್ನು ಸೂಕ್ಷ್ಮವಾಗಿ ಆಲಿಸಿದಾಗ ಇದು ಮನದಟ್ಟಾಗಿದೆ ಎಂದು ನ್ಯಾಯಪೀಠ ಹೇಳಿತ್ತು. ಕೇಂದ್ರ ಸರ್ಕಾರವು ಎಲ್ಲಿಯವರೆಗೆ ರಾಜ್ಯವೊಂದರಲ್ಲಿ ಸಿಬಿಐ ಅನ್ನು ಕಾರ್ಯನಿರ್ವಹಣೆಗೆ ಹಚ್ಚಬಹುದು ಎಂಬುದು ಕಾನೂನಿನ ವಿಚಾರಕ್ಕೆ ಒಳಪಟ್ಟಿದೆ. ಈ ಪ್ರಕರಣದಲ್ಲಿನ ಕಾನೂನಿನ ವಿಚಾರಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವ್ಯಾಪ್ತಿಗೆ ಸಂಬಂಧಿಸಿವೆ. ಈ ಪ್ರಕರಣದಲ್ಲಿ ರಾಜ್ಯ ಸರ್ಕಾರ ಮತ್ತು ಸಿಬಿಐ ನಡುವೆ ಸಂಘರ್ಷ ಇದ್ದು ಪ್ರಕರಣವನ್ನು ಸಂವಿಧಾನದ 131ನೇ ವಿಧಿಯಡಿ ಸುಪ್ರೀಂ ಕೋರ್ಟ್ ನಿರ್ಧರಿಸುವುದೇ ಸೂಕ್ತವಾಗಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿತ್ತು.

## ಜಾಗತಿಕ ಶಕ್ತಿಶಾಲಿ ರಾಷ್ಟ್ರಗಳ ಪಟ್ಟಿಯಲ್ಲಿ ಸ್ಥಾನ ಪಡೆಯಲು ಭಾರತ ಅರ್ಹ: ಪುಟಿನ್ ಸ್ಪಷ್ಟನೆ



**ಮಾಸ್ಕೋ, ನ.8:** ಜಾಗತಿಕ ಶಕ್ತಿಶಾಲಿ ರಾಷ್ಟ್ರಗಳ ಪಟ್ಟಿಯಲ್ಲಿ ಸ್ಥಾನ ಪಡೆಯಲು ಭಾರತ ಅರ್ಹವಾಗಿದೆ. ಏಕೆಂದರೆ ಪ್ರಸ್ತುತ ಅದರ (ಭಾರತ)ಆರ್ಥಿಕತೆ ಇತರ ದೇಶಗಳಿಗಿಂತ ವೇಗವಾಗಿ ಬೆಳೆಯುತ್ತಿದೆ ಎಂದು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ. ಗುರುವಾರ ಸೋಚಿಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು, ರಷ್ಯಾ ಭಾರತದೊಂದಿಗೆ ಎಲ್ಲಾ ದಿಕ್ಕುಗಳಲ್ಲಿ ಸಂಬಂಧವನ್ನು ಅಭಿವೃದ್ಧಿಪಡಿಸುತ್ತಿದೆ.

ದ್ವಿಪಕ್ಷೀಯ ಬಾಂಧವ್ಯಗಳಲ್ಲಿ ಗಾಢವಾದ ನಂಬಿಕೆಯಿದೆ ಎಂದು ಹೇಳಿದ್ದಾರೆ. ಭಾರತ ಶ್ರೇಷ್ಠ ದೇಶ. ನಿಸ್ಸಂದೇಹವಾಗಿ ಶಕ್ತಿಶಾಲಿ ರಾಷ್ಟ್ರಗಳ ಪಟ್ಟಿಯಲ್ಲಿ ಸೇರಿಸಬೇಕು. ಆರ್ಥಿಕ ಬೆಳವಣಿಗೆಯಲ್ಲಿಯೂ ವಿಶ್ವದಲ್ಲಿ ಮುಂಚೂಣಿಯಲ್ಲಿದೆ. ಈಗ ಜನಸಂಖ್ಯೆಯ ದೃಷ್ಟಿಯಿಂದಲೂ ಬೃಹತ್ ರಾಷ್ಟ್ರ ಎಂದು ಅಭಿಪ್ರಾಯಪಟ್ಟಿದ್ದಾರೆ.

## ಬಿಜೆಪಿ ಶಾಸಕರು ಮಾರ್ಷಲ್ ಔಟ್ ಆಗುತ್ತಿದ್ದಂತೆ ಜಮ್ಮು–ಕಾಶ್ಮೀರ ವಿಧಾನಸಭೆಯಲ್ಲಿ ನಿಲ್ಲದ ಗದ್ದಲ

**ಶ್ರೀನಗರ, ನ.8:** ವಿಶೇಷ ಸ್ಥಾನಮಾನ ನಿರ್ಣಯದ ಕುರಿತು ನಡೆಯುತ್ತಿರುವ ಅಧಿವೇಶನದ ಅಂತಿಮ ಕೆಲಸದ ದಿನದಂದು ಜೆ ಮತ್ತು ಕೆ ಅಸೆಂಬ್ಲಿ ಗದ್ದಲಕ್ಕೆ ಸಾಕ್ಷಿಯಾಯಿತು. ಶುಕ್ರವಾರ ಬೆಳಗ್ಗೆ ಅಧಿವೇಶನ ಆರಂಭವಾಗುತ್ತಿದ್ದಂತೆ, ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಶಾಸಕ ಫಯಾಜ್ ಮಿರ್ ಅವರು ಆರ್ಟಿಕಲ್ 370 ಅನ್ನು ಬೆಂಬಲಿಸುವ ಬ್ಯಾನರ್ ಪ್ರದರ್ಶಿಸಲು ಪ್ರಯತ್ನಿಸಿದರು.

ಪೀಪಲ್ಸ್ ಕಾನ್ಫರೆನ್ಸ್ ಶಾಸಕ ಸಜಾದ್ ಲೋನ್ ಮತ್ತು ಎಐಪಿಯ ಶೇಖ್ ಖುರ್ಷೀದ್ ಈ ಕ್ರಮವನ್ನು ಬೆಂಬಲಿಸಿದರು,



ಸ್ಪೀಕರ್ ಅಬ್ದುಲ್ ರಹೀಮ್ ರಾಥರ್ ಅವರ ನಿರ್ದೇಶನದ ಮೇರೆಗೆ ಮಾರ್ಷಲ್‌ಗಳು ಸಮಸ್ಯೆಗಳನ್ನು ಪ್ರಸ್ತಾಪಿಸಲು ಮತ್ತು ಸದಸ್ಯರನ್ನು ಎಳೆದಾಡಲು ಅವಕಾಶ ನೀಡದ ಕಾರಣ ಸದನದ ಹೊರಗೆ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದೇವೆ ಎಂದು ಬಿಜೆಪಿಯ ಹಿರಿಯ ನಾಯಕ ಮತ್ತು ವಿರೋಧ ಪಕ್ಷದ ನಾಯಕ (ಎಲ್‌ಒಪಿ) ಸುನಿಲ್ ಶರ್ಮಾ ಹೇಳಿದ್ದಾರೆ.


ಬಿಜೆಪಿ ಶಾಸಕರಿಂದ ಪ್ರತಿಭಟನೆಗೆ ಕಾರಣವಾಯಿತು. ನಂತರದ ಕೋಲಾಹಲದಲ್ಲಿ ಖುರ್ಷೀದ್ ಅವರನ್ನು ಸದನದಿಂದ ಹೊರ ಹಾಕಲಾಯಿತು. ಸಜಾದ್ ಲೋನ್ ಅವರು ಗುರುವಾರ ಸಲ್ಲಿಸಿದ ಆರ್ಟಿಕಲ್ 370 ರ ಮರುಸ್ಥಾಪನೆ ಗಾಗಿ ತಮ್ಮ ನಿರ್ಣಯದ ಪ್ರತಿಯನ್ನು ಹಿಡಿದಿದ್ದರು. ನ್ಯಾಷನಲ್ ಕಾನ್ಫರೆನ್ಸ್ ಶಾಸಕ ಜಾವಿದ್ ಬೇಗ್ ಅವರು ಲೆಫ್ಟಿನೆಂಟ್ ಗವರ್ನರ್ ಅವರ ಭಾಷಣದ ಮೇಲೆ ಮಾತನಾಡಲು ಎದ್ದಾಗ, ಬಿಜೆಪಿ ಶಾಸಕರು ವಿಶೇಷ ಸ್ಥಾನಮಾನ ನಿರ್ಣಯದ ವಿರುದ್ಧ ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದರು.

ನಿರ್ಣಯವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ ಅವರು ಭಾರತ್ ಮಾತಾ ಕಿ ಜೈ, ಪಾಕಿಸ್ತಾನ ಅಜೆಂಡಾ ನಹೀ ಚಲೇಗಾ, ಮತ್ತು ಪ್ರತ್ಯೇಕತಾವಾದಿ ಅಜೆಂಡಾ ನಹೀ ಚಲೇಗಾ ಎಂಬ ಘೋಷಣೆಗಳನ್ನು ಕೂಗಿದರು. ಕೆಲ ಬಿಜೆಪಿ ಸದಸ್ಯರು ಬಾವಿಗೆ ಮುತ್ತಿಗೆ ಹಾಕಲು ಮುಂದಾದಾಗ, ಪ್ರತಿಭಟನೆಯ ನಡುವೆಯೇ ಅವರನ್ನು ಸದನದಿಂದ ಹೊರ ಹಾಕಲಾಯಿತು.

ಉಳಿದ ಬಿಜೆಪಿ ಶಾಸಕರು ಪಾದಯಾತ್ರೆ ನಡೆಸಿದರು. ನಂತರ ಸದನವು ಸಾಮಾನ್ಯವಾಗಿ ಕಾರ್ಯನಿರ್ವಹಿಸಿತು ಮತ್ತು ಹಲವಾರು ಶಾಸಕರಾದ ಮುಜಾಫರ್ ಇಕ್ಬಾಲ್ ಖಾನ್, ಸ್ವತಂತ್ರ ಶಾಸಕ, ಕಾಂಗ್ರೆಸ್ನ ನಿಜಾಮ್ ಭಟ್, ಪಿಡಿಪಿಯ




## ಭಾವಪೂರ್ಣ ಶ್ರದ್ಧಾಂಜಲಿ



ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ


ನಿವೃತ್ತ ಪ್ರೊ. **ವಿ.ವಿ.ಸುಲ್ಲದ್‌ಮಠ್**

ಇದೇ ತಾರೀಖು 7-11-2024ರ ಗುರುವಾರದಂದು ಬೆಂಗಳೂರಿನ ಪದ್ಮನಾಭನಗರದಲ್ಲಿರುವ ತಮ್ಮ ಸ್ವಗೃಹದಲ್ಲಿ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಅವರ ಆತ್ಮಕ್ಕೆ ಶಾಂತಿ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇವೆ.

**ದುಃಖತಪ್ತರು,**

ಶ್ರೀಮತಿ ಅನ್ನಪೂರ್ಣ ಸುಲ್ಲದ್‌ಮಠ್
ಪುತ್ರ ಶ್ರೀ ಚೇತನ್ ಸುಲ್ಲದ್‌ಮಠ್
ಪುತ್ರಿ ಶ್ರೀಮತಿ ಮೇನಕ ಸುಲ್ಲದ್‌ಮಠ್
ಹಾಗೂ ಮೊಮ್ಮಗ ಚಿ|| ಶಿವಂ

## ನಿತ್ಯ ಪಂಚಾಂಗ 9.11.2024 ಶನಿವಾರ




ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯನ–ಶರದ್ ಋತು, ಚಾಂದ್ರಮಾನ, ಕಾರ್ತಿಕ ಶುದ್ಧ

ಅಷ್ಟಮಿ, ಶ್ರವಣ ನಕ್ಷತ್ರ, ಆನಧ್ಯಯನ, ಗೋಪಾಷ್ಟಮಿ, ಕಾನೂನು ಸೇವೆಗಳ ದಿನ, ಮೇಲುಕೋಟೆ ರಾಜಮುಡೀ ಉತ್ಸವ, 2ನೇ ಶನಿವಾರ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಮಕ್ಕಳು ಪಠ್ಯದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಭಾಗವಹಿಸಲಿ– ಹೊರಟ್ಟಿ ಕಿವಿಮಾತು



**ಕೋಲಾರ, ನ.8–** ಮಕ್ಕಳು ಪಠ್ಯದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಹ ಸಕ್ರಿಯವಾಗಿ ಭಾಗವಹಿಸುವುದರಿಂದ ಸದೃಢ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯ ಪಟ್ಟರು. ಇಂದು ನಗರದ ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ಪ್ರೌಢಶಾಲಾ ವಿಭಾಗದ ರಾಜ್ಯಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡಾಕೂಟವನ್ನು ಅತ್ಯಂತ ಅಚ್ಚುಕಟ್ಟಾಗಿ ಆಯೋಜಿಸಿರುವ ಜಿಲ್ಲಾಆಡಳಿತಕ್ಕೆ, ಆಯೋಜಕರನ್ನು ಶ್ಲಾಘಿಸಿದ ಅವರು ಎಲ್ಲಾ ಕ್ರೀಡೆಗಳಲ್ಲಿ ಶಿಸ್ತಿನಿಂದ ಪಾಲ್ಗೊಂಡು ಕ್ರೀಡಾ ಸ್ಫೂರ್ತಿ ಮೆರೆಯಬೇಕು.

ಇಲ್ಲಿ ಭಾಗವಹಿಸಿದ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ ಆದರೆ ಎಲ್ಲರೂ ಭಾಗವಹಿಸಬಹುದು ಮುಖ್ಯ. ಎಲ್ಲರೂ ಸ್ಫೂರ್ತಿಯಿಂದ ಆಟವಾಡಿ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಜಿಲ್ಲಾಧಿಕಾರಿ ಅಕ್ರಂ ಪಾಷ ಮಾತನಾಡಿ ರಾಜ್ಯ ಮಟ್ಟದ ಕ್ರೀಡಾ ಕೂಟ 3 ದಿನಗಳ ಕಾಲ ಆಯೋಜಿಸಲಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಸುಮಾರು 4 ಸಾವಿರ ಮಂದಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಹಾಜರಿದ್ದಾರೆ, ಯಾವುದೇ ಗೊಂದಲಗಳಿಗೆ ಅವಕಾಶವಾಗದಂತೆ ಎಚ್ಚರ ವಹಿಸಿ ಎಂದು ತಿಳಿಸಿದರು.

ರಾಜ್ಯಮಟ್ಟದ ಕ್ರೀಡಾ ಕೂಟವನ್ನು ಜಿಲ್ಲೆಯಲ್ಲಿ ನಡೆಸಲು ಅವಕಾಶ ಸಿಕ್ಕಿದೆ, ಈಗಾಗಲೇ ಸೂಕ್ತ ವ್ಯವಸ್ಥೆಗಳನ್ನು ಮಾಡಲಾಗಿದೆ.ರಾಜ್ಯದ ಶೈಕ್ಷಣಿಕ ಜಿಲ್ಲೆಗಳು ಸೇರಿದಂತೆ 35 ಜಿಲ್ಲೆಗಳಿಂದ ಬಂದಿರುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ನಗರದ ಎಲ್ಲಾ ಪ್ರಮುಖ ಶಾಲೆಗಳಲ್ಲಿ ವಸತಿ ಸೌಲಭ್ಯ ಕಲ್ಪಿಸಲು ಕ್ರಮಕೈಗೊಳ್ಳಲಾಗಿದೆ ಎಂದರು.

# ಸಿದ್ದರಾಮಯ್ಯ ಜೈಲಿಗೆ ಹೋಗುವುದು ಶತಸಿದ್ಧ: ಬಿ.ಎಸ್.ಯಡಿಯೂರಪ್ಪ



**ಬೆಂಗಳೂರು, ನ.8–** ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜೈಲಿಗೆ ಹೋಗುವ ಕಾಲ ದೂರವಿಲ್ಲ ಎಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಕೇಂದ್ರ ಸಂಸದೀಯ ಸಮಿತಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರು ತಿಳಿಸಿದರು.

ಸಂಡೂರು ಕ್ಷೇತ್ರದಲ್ಲಿ ಇಂದು ರೋಡ್‌ಶೋದಲ್ಲಿ ಭಾಗವಹಿಸಿದ್ದ ಅವರು, ಸಿದ್ದರಾಮಯ್ಯನವರು ಮತ್ತು ಅವರ ಪತ್ನಿ ಮುಡಾ ಹಗರಣ ದಲ್ಲಿ ಸಿಲುಕಿಕೊಂಡಿದ್ದಾರೆ. ಲೋಕಾಯುಕ್ತ ತನಿಖೆ ಎದುರಿಸಿದ್ದಾರೆ ಎಂದು ವಿವರಿಸಿದರು.

ಮೈಸೂರು ಮುಡಾ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಲು ನಾವು ಒತ್ತಾಯಿಸಿದ್ದೇವೆ. ಸಿಬಿಐ ತನಿಖೆಗೆ ವಹಿಸಿದ 24 ಗಂಟೆಗಳಲ್ಲಿ ಮುಖ್ಯಮಂತ್ರಿಯನ್ನು ಬಂಧನ ಮಾಡಿ ಜೈಲಿಗೆ ಕಳುಹಿಸುವುದು ನಿಶ್ಚಿತ ಎಂದು ಹೇಳಿದರು. ಹಣ, ಹೆಂಡ, ಅಧಿಕಾರದ ಬಲದಿಂದ ಹಾಗೂ ಜಾತಿ ವಿಷಬೀಜ ಬಿತ್ತಿ ರಾಜಕಾರಣ ಮಾಡುವ ಕಾಲ ಹೋಗಿದೆ. ಸಿದ್ದರಾಮಯ್ಯನವರೇ, ಇವತ್ತು ಜನ ಜಾಗೃತರಾಗಿದ್ದಾರೆ. ನಿಮ್ಮ ಮೋಸಕ್ಕೆ ಬಲಿ ಆಗುವುದಿಲ್ಲ. ರಾಜ್ಯದಲ್ಲಿ ಉಪ ಚುನಾವಣೆ ನಡೆಯುವ 3ಕ್ಕೆ 3 ಕ್ಷೇತ್ರಗಳನ್ನು ಗೆದ್ದೇ ಗೆಲ್ಲುತ್ತೇವೆ. ಬಂಗಾರು ಹನುಮಂತು ಅವರ ಚಿಹ್ನೆ ಕಮಲದ ಹೂವಿನ ಗುರುತಿಗೆ ಮತ ಕೊಡಿ. ಹಳ್ಳಿಗಳಿಗೆ ತೆರಳಿ ಬಿಜೆಪಿ ಪರವಾಗಿ ಪ್ರಚಾರ ಮಾಡಬೇಕೆಂದು ಮನವಿ ಮಾಡಿದರು. ಬಂಗಾರು ಹನುಮಂತು ಅವರನ್ನು ಗೆಲ್ಲಿಸುವ ಉದ್ದೇಶದಿಂದ ಯಡಿಯೂರಪ್ಪ ಇಲ್ಲಿಗೆ ಬಂದಿದ್ದು, ಅದಕ್ಕಾಗಿ ನಮ್ಮೆಲ್ಲ ಬಂಧುಗಳು ಮನೆ ಮನೆಗೆ ಹೋಗಿ ಪ್ರಚಾರ ಮಾಡಬೇಕು ಎಂದು ವಿನಂತಿಸಿದರು. ನರೇಂದ್ರ ಮೋದಿಯವರ ಗುರುತು, ಬಂಗಾರು ಹನುಮಂತು ಅವರ ಗುರುತು, ಬಿಜೆಪಿ ಗುರುತು ಕಮಲ –ಕಮಲ–ಕಮಲ ಎಂದು ನೆನಪಿಸಿದರು.

# ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮಕ್ಕೆ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ




**ಬೆಂಗಳೂರು, ನ.8–** ಕರ್ನಾಟಕ ಶಾಸ್ತ್ರೀಯ ಸಂಗೀತದ ದಾಸ ಪರಂಪರೆ ಕುರಿತ ಮೂರು ದಿನಗಳ ಕಾಲ ಆಯೋಜಿಸಲಾಗಿರುವ 'ಮೈಸೂರು ಸಂಗೀತ ಸುಗಂಧ' ಕಾರ್ಯಕ್ರಮಕ್ಕೆ ಇಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ ನೀಡಿದರು.

ಈ ವೇಳೆ ಕೇಂದ್ರ ಪ್ರವಾಸೋದ್ಯಮ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್. ಸಿ. ಮಹದೇವಪ್ಪ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಶ್ರೀವತ್ಸ ಸೇರಿದಂತೆ ಮತ್ತಿತರ ಉಪಸ್ಥಿತರಿದ್ದರು.

ಬಳಿಕ ನಿರ್ಮಲಾ ಸೀತಾರಾಮನ್ ಮಾತನಾಡಿ, ದೇಶ ವೈವಿಧ್ಯಮಯ ಭಾಷೆ, ಸಂಗೀತ , ಸಂಸ್ಕೃತಿಯನ್ನು ಹೊಂದಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 'ವಿಕಾಸ್ ಬೀ' ವಿರಾಸತ್ ಬೀ' ಆಶಯಕ್ಕೆ ಆದ್ಯತೆ ನೀಡಿದ್ದಾರೆ. ದೇಶವನ್ನು ಆರ್ಥಿಕವಾಗಿ ಬಲಿಷ್ಠ ಗೊಳಿಸುವ ಜೊತೆಗೆ ಕಲೆ ,ಪರಂಪರೆ, ಸಂಸ್ಕೃತಿಯ ಉಳಿವಿಗಾಗಿ ಒತ್ತು ನೀಡಲಾಗಿದೆ ಎಂದು ತಿಳಿಸಿದರು.

'ಏಕ ಭಾರತ– ಶ್ರೇಷ್ಠ ಭಾರತ' ಪರಿಕಲ್ಪನೆಗೂ ಪ್ರಧಾನಿ ನರೇಂದ್ರ ಮೋದಿ ಅವರು ಒತ್ತು ನೀಡಿದ್ದು, ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ಪ್ರತಿಯೊಂದು ರಾಜ್ಯಗಳ ಭಾಷೆ, ಸಂಸ್ಕೃತಿ, ಶ್ರೀಮಂತವಾಗಿರುವ ಜೊತೆಗೆ ಶ್ರೇಷ್ಠತೆ ಹೊಂದಿವೆ. ವಿವಿಧತೆಯಲ್ಲಿ ಏಕತೆಗೆ ಭಾರತ ಒಂದು ಉತ್ತಮ ಉದಾಹರಣೆಯಾಗಿದೆ ಎಂದು ಹೇಳಿದರು.

ದಾಸ ಸಂಗೀತಕ್ಕೆ ಮೈಸೂರು ಅಪಾರ ಕೊಡುಗೆ ನೀಡಿದೆ. ಜೊತೆಗೆ ಕರ್ನಾಟಕ ಸಂಗೀತಕ್ಕೂ ಕೂಡ . ಇದರಿಂದ ಸಂಗೀತ ಮತ್ತು ಸಂಸ್ಕೃತಿ ದೇಶದ ಪರಂಪರೆಯನ್ನು ಶ್ರೀಮಂತಗೊಳಿಸಲು ಮತ್ತಷ್ಟು ಪ್ರೋತ್ಸಾಹ ಒದಗಿಸಲಾಗುತ್ತಿದೆ. ಎಲ್ಲ ರಾಜ್ಯಗಳ ಸಂಗೀತ ಪ್ರಾಕಾರಗಳನ್ನು ಒಂದೆಡೆ ತರುವ ಮೂಲಕ ಒಂದು ದೇಶ– ಒಂದು ಸಂಸ್ಕೃತಿಗೆ ಪೂರಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಚಿವ ಸುರೇಶ್ ಗೋಪಿ ಮಾತ 'ನಾಡಿ, ಕರ್ನಾಟಕ, ಆಂಧ್ರಪ್ರದೇಶ, ಕೇರಳ ಸೇರಿದಂತೆ ವಿವಿಧ ರಾಜ್ಯಗಳ ಸಂಗೀತ ಪ್ರಾಕಾರ, ಸಂಸ್ಕೃತಿಗೆ ಹೆಚ್ಚಿನ ಒತ್ತು ನೀಡುವ ಜೊತೆಗೆ ವಿನಿಮಯ ಮಾಡಿಕೊಳ್ಳಲಾಗುವುದು. ಈ ರೀತಿಯ ಕಾರ್ಯಕ್ರಮಗಳು ಮತ್ತಷ್ಟು ಶಕ್ತಿ ತುಂಬಲಿವೆ. ಮೈಸೂರು ಕರ್ನಾಟಕದ ಸಾಂಸ್ಕೃತಿಕ ಪರಂಪರೆಯ ಆತ್ಮವಾಗಿದೆ. ಇಲ್ಲಿ ಸಂಗೀತ ಸುಗಂಧ ಕಾರ್ಯಕ್ರಮ ಆಯೋಜಿಸಿರುವುದು ಮತ್ತಷ್ಟು ಮೆರುಗು ತಂದಿದೆ ಎಂದರು.

### ಗ್ಯಾರಂಟಿಗಳ ಬಗ್ಗೆ ಶ್ವೇತಪತ್ರ ಹೊರಡಿಸಲಿ ರಾಜ್ಯ ಸರ್ಕಾರ: ಸಂಡೂರಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸವಾಲು

# ಸುಳ್ಳು ಹೇಳೋದ್ರಲ್ಲಿ ಕಾಂಗ್ರೆಸ್ಸಿಗರೇ ನಿಸ್ಸೀಮರು; ಸಿಎಂಗೆ ತಿರುಗೇಟು ಕೊಟ್ಟ ಜೋಶಿ




**ಸಂಡೂರು, ನ.8–** ಸುಳ್ಳು ಹೇಳೋದರಲ್ಲಿ ಕಾಂಗ್ರೆಸ್ಸಿಗರೇ ನಿಸ್ಸೀಮರು. ಅಷ್ಟು ಸತ್ಯವಂತರಾಗಿದ್ದರೆ ಗ್ಯಾರಂಟಿ ಯೋಜನೆಗಳ ಬಗ್ಗೆ ರಾಜ್ಯ ಸರ್ಕಾರ ಶ್ವೇತ ಪತ್ರ ಹೊರಡಿಸಲಿ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸವಾಲು ಹಾಕಿದರು.

ಸಂಡೂರು ವಿಧಾನಸಭಾ ಕ್ಷೇತ್ರದ ತೋರಣಗಲ್ ನಲ್ಲಿ ಇಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ, ರಾಜ್ಯ ಸರ್ಕಾರದ್ದು ಎಲ್ಲಾ ಬೋಗಸ್ ಗ್ಯಾರೆಂಟಿಗಳು ಎಂದು ಆರೋಪಿಸಿದರು. ಈ ಸರ್ಕಾರ ಒಂದೆಡೆ ಕೊಟ್ಟು, ಮತ್ತೊಂದಲ್ಲಿ ಅದರ ಹತ್ತರಷ್ಟು ಕಿತ್ತುಕೊಳ್ಳುತ್ತಿದೆ. ಪೆಟ್ರೋಲ್, ಡೀಸೆಲ್, ಬಸ್ ಪ್ರಯಾಣ ದರ, ವಿದ್ಯುತ್ ದರ, ಹಾಲಿನ ದರ, ಮುದ್ರಾಂಕ ಶುಲ್ಕ, ನೋಂದಣಿ ಶುಲ್ಕ, ರೈತರ ಪಹಣಿ ಶುಲ್ಕ ಹೀಗೆ ಎಲ್ಲದರಲ್ಲೂ ಬೆಲೆ ಏರಿಕೆ ಹೊರೆ ಹೊರಿಸಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಎಲ್ಲೆಷ್ಟು ಜನರಿಗೆ ತಲುಪಿವೆ ಅದರ ಆದಾಯದ ಮೂಲ, ವೆಚ್ಚ ಸಮಗ್ರ ಮಾಹಿತಿ ಯುಳ್ಳ ಶ್ವೇತ ಪತ್ರ ಹೊರಡಿಸಲಿ ಮೊದಲು ಎಂದು ಸಚಿವ ಜೋಶಿ ಆಗ್ರಹಿಸಿದರು.

ಗೃಹಲಕ್ಷ್ಮಿ ಹಣ ಎಷ್ಟು ಜನರಿಗೆ ತಲುಪಿದೆ ಇದರಲ್ಲಿ ತಾರತಮ್ಯ ತೋರಲಾಗಿದೆ. ಶಕ್ತಿ ಯೋಜನೆ ಕೊಟ್ಟರೆ ಪೆಟ್ರೋಲ್, ಡೀಸೆಲ್, ಪ್ರಯಾಣ ದರ ಹೆಚ್ಚಿಸಿದ್ದಾರೆ. ಫ್ರೀ ವಿದ್ಯುತ್ ಘೋಷಿಸಿದಂತೆ ಇಲ್ಲ. ಅಲ್ಲದೇ, 3 ರೂ. ಯುನಿಟ್ ಇದ್ದ ವಿದ್ಯುತ್ ಶುಲ್ಕ ಈಗ 7.50 ರೂ.ಗೆ ಹೆಚ್ಚಿಸಿದ್ದಾರೆ.

**ಯುವನಿಧಿ ಒಬ್ಬರಿಗೂ ಇಲ್ಲ:** ಹತ್ತರಲ್ಲೊಬ್ಬರಿಗೂ ತಲುಪಿಲ್ಲ. 2023–24ರ ಎಷ್ಟು ಪದವೀಧರರಿಗೆ ಯುವ ನಿಧಿ ಕೊಟ್ಟಿದ್ದೀರಿ ಎಂದು ಪ್ರಶ್ನಿಸಿದ ಸಚಿವ ಜೋಶಿ, ಕಾಂಗ್ರೆಸ್ ಪಕ್ಷದ್ದು ಬರೀ ಬೋಗಸ್ ಗ್ಯಾರೆಂಟಿಗಳು ಎಂದು ಜರಿದರು.

**80 ಸಾವಿರ ಕೋಟಿ ಸಾಲದ ಹೊರೆ:** ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ಒಂದೂವರೆ ವರ್ಷದಲ್ಲಿ 70–80 ಸಾವಿರ ಕೋಟಿ ರೂಪಾಯಿ ಸಾಲದ ಹೊರೆ ಹೊತ್ತಿದೆ. ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಮೂಲಕ ಅದನ್ನು ಸರಿದೂಗಿಸಲು ಹೆಣಗಾಡುತ್ತಿದೆ ಎಂದು ಆರೋಪಿಸಿದರು.

ಜಗತ್ತಿನಲ್ಲೇ ಅತ್ಯಂತ ಸುಸ್ಥಿರ ಆರ್ಥಿಕತೆ ಭಾರತದ್ದು: 17 ಬಾರಿ ಬಜೆಟ್ ಮಂಡಿಸಿದ್ದಾಗಿ ಹೇಳಿಕೊಳ್ಳುವ ಸಿಎಂ ಸಿದ್ದರಾಮಯ್ಯ ದೇಶದ ಆರ್ಥಿಕತೆ ಬಗ್ಗೆ ಹುಂಬತನದಿಂದ ಮಾತನಾಡುತ್ತಾರೆ ಎಂದು ಜೋಶಿ ಟೀಕಿಸಿದರು. ಜಗತ್ತಿನಲ್ಲೇ ಭಾರತದ ಆರ್ಥಿಕತೆ ಅತ್ಯಂತ ಸುಸ್ಥಿರವಾಗಿದೆ. ಕೋವಿಡ್ ಬಳಿಕ ಎಲ್ಲಾ ದೇಶಗಳು ಆರ್ಥಿಕ ಜರ್ಝರಿತ ಕಂಡರೆ ಭಾರತ ಶಕ್ತಿಶಾಲಿ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಸಚಿವ ಜೋಶಿ ಪ್ರತಿಪಾದಿಸಿದರು. ಭಾರತ 700 ಮಿಲಿಯನ್ ಡಾಲರ್ ವಿದೇಶಿ ವಿನಿಮಯ ದಾಖಲಿಸಿದೆ. 75 ವರ್ಷದ ಇತಿಹಾಸದಲ್ಲಿ ಇದು ದಾಖಲೆಯಾಗಿದೆ ಎನ್ನುತ್ತ ಭಾರತದ ಆರ್ಥಿಕ ಸುಸ್ಥಿರತೆ ಬಗ್ಗೆ ಸಮರ್ಥನೆ ನೀಡಿದರು.

ರಾಜ್ಯವನ್ನು ಆರ್ಥಿಕ ದಿವಾಳಿ ತನದತ್ತ ಕೊಂಡೊಯ್ಯುತ್ತಿದೆ ಸಿದ್ದರಾಮಯ್ಯ ಸರ್ಕಾರ: ರಾಜ್ಯ ಕಾಂಗ್ರೆಸ್ ಸರ್ಕಾರ ಸಂಪೂರ್ಣ ಭ್ರಷ್ಟಾಚಾರ, ಹಗರಣಗಳಲ್ಲಿ ಮುಳುಗಿದೆ. ಮೂಡಾ, ವಾಲ್ಮೀಕಿ ಹಗರಣ, ಬೋಗಸ್ ಗ್ಯರೆಂಟಿಗಳಿಂದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ರಾಜ್ಯವನ್ನು ಆರ್ಥಿಕ ದಿವಾಳಿತನದತ್ತ ಕೊಂಡೊಯ್ಯುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಹರಿಹಾಯ್ದರು.

ಸುದ್ದಿಗೋಷ್ಠಿಯಲ್ಲಿ ಕೇಂದ್ರದ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ, ಮಾಜಿ ಸಂಸದ ಪ್ರತಾಪ ಸಿಂಹ, ಡಾ.ಅಶ್ವಥ್ ನಾರಾಯಣ ಮತ್ತಿತರ ಪ್ರಮುಖರಿದ್ದರು.

# ಸಂಡೂರಿನ ಕ್ಷೇತ್ರದ ಅಭಿವೃದ್ಧಿಗೆ ಅನ್ನಪೂರ್ಣಮ್ಮಗೆ ಮತ ನೀಡಿ: ಸಚಿವ ಮುನಿಯಪ್ಪ ಮನವಿ





**ಬಳ್ಳಾರಿ, ನ.8–** ಕರ್ನಾಟಕ ರಾಜ್ಯದ ಜನರು ನೆಮ್ಮದಿಯ ಜೀವನ ಸಾಗಿಸಲು ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರದಿಂದ ಮಾತ್ರ ಸಾಧ್ಯ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರ ನೇತೃತ್ವದಲ್ಲಿ ಜನರಿಗೆ ಪ್ರಮುಖ ಐದು ಗ್ಯಾರಂಟಿ ಯೋಜನೆಗಳನ್ನು ನೀಡಿದ್ದು ಬಡವರು, ಮಹಿಳೆಯರು ಹಾಗೂ ನಿರುದ್ಯೋಗ ಯುವಕರು ಹಾಗೂ ಕೃಷಿ ಕಾರ್ಮಿಕ ವರ್ಗಗದವರು ನೆಮ್ಮದಿಯ ಜೀವನ ವನ್ನು ನಡೆಸುತ್ತಿದ್ದಾರೆ.

ಅಂದಿನ ಕಾಂಗ್ರೆಸ್ ಪಕ್ಷದ ಸರ್ಕಾರವು ಮಾನ್ಯ ಪ್ರಧಾನಮಂತ್ರಿ ಮನಮೋಹನ್ ಸಿಂಗ್ ಹಾಗೂ ಸೋನಿಯಾ ಗಾಂಧಿ ನೇತೃತ್ವದಲ್ಲಿ ಆಹಾರ ಭದ್ರತೆ ಕಾಯ್ದೆಯನ್ನು ಜಾರಿಗೆ ತಂದು ಹಸಿವಿನಿಂದ ಯಾರು ಇರಬಾರದೆಂದು ಕಾಯ್ದೆ ಜಾರಿಗೆ ತಂದಿದ್ದರಿಂದ ದೇಶದ ಕಟ್ಟಕಡೆಯ ಪ್ರಜೆಯೂ ನೆಮ್ಮದಿಯ ಜೀವನವನ್ನು ಸಾಗಿಸುತ್ತಿದ್ದಾರೆ. ರಾಜ್ಯದ 6.5ಕೋಟಿ ಜನಸಂಖ್ಯೆಯಲ್ಲಿ 4.5 ಕೋಟಿ ಜನರು ಪ್ರಮುಖ ಗ್ಯಾರಂಟಿ ಯೋಜನೆಯ ಫಲಾನುಭವಿಗಳಾಗಿದ್ದಾರೆ. ಅನ್ನಭಾಗ್ಯ ಯೋಜನೆಯ ಮೂಲಕ ಪ್ರತಿಯೊಬ್ಬ ಫಲಾನುಭವಿಗೆ 5ಕೆಜಿ ಅಕ್ಕಿ ಮತ್ತು ಉಳಿದ ಐದು ಕೆಜಿ ಅಕ್ಕಿಗೆ 170 ರೂಗಳನ್ನು ಅವರ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ಹಣ ವರ್ಗಾವಣೆ ಮಾಡುತ್ತಿದ್ದೇವೆ. ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರಿಗೆ ಶೇಕಡಾ 24% ಅಯ್ಯ ವ್ಯಯದಲ್ಲಿ ಹಣವನ್ನು ಜನರ ಅಭಿವೃದ್ಧಿ ಗಾಗಿ ಮೀಸಲಿಟ್ಟಿದ್ದಾರೆ. ಸಂಡೂರು ಕ್ಷೇತ್ರದ ಎಲ್ಲಾ ಮತದಾರರು ಅನ್ನ ಪೂರ್ಣಮ್ಮ ಅವರಿಗೆ ತಮ್ಮ ಅಮೂಲ್ಯವಾದ ಮತಗಳನ್ನು ನೀಡುವುದರ ಮೂಲಕ ಅವರನ್ನು ಗೆಲ್ಲಿಸಿ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸಲು ಮತದಾರಲ್ಲಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಸಂತೋಷ ಲಾಡ್, ಜಮೀರ್ ಅಹ್ಮದ್ ಖಾನ್, ಶಿವರಾಜ್ ತಂಗಡಗಿ, ಮಾಜಿ ಸಚಿವ ಎಚ್.ಆಂಜನೇಯ, ಚಂದ್ರಪ್ಪ, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಅನ್ನಪೂರ್ಣಮ್ಮ,ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

### ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಎಚ್ಚರಿಕೆ

# ಉಪಚುನಾವಣೆಯ ಮೇಲೆ ವಕ್ಫ್ ರಾದ್ಧಾಂತದ ಪರಿಣಾಮ



**ಬೆಂಗಳೂರು, ನ.8–** ಮುಖ್ಯಮಂತ್ರಿಗಳ ಕುಮ್ಮಕ್ಕಿನಿಂದ ಜಮೀರ್ ಅಹ್ಮದ್ ಅವರೇ ನೇತೃತ್ವ ವಹಿಸಿ ರೈತರ ಜಮೀನಿಗೆ ಕನ್ನ ಹಾಕುವ ಕೆಲಸ ಮಾಡಿದ್ದರ ಪರಿಣಾಮ ಉಪಚುನಾವಣೆ ಮೇಲೆ ಆಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದರು.

ಪ್ರತಿನಿಧಿಗಳೊಂದಿಗೆ, ವಕ್ಫ್ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ, ಮುಖ್ಯಮಂತ್ರಿಗಳ ಧೋರಣೆ, ನಡವಳಿಕೆಯನ್ನು ರಾಜ್ಯದ ರೈತರು–ಜನರು ಪ್ರಶ್ನೆ ಮಾಡುತ್ತಿದ್ದಾರೆ ಎಂದು ಹೇಳಿದರು. ರಾಜ್ಯದ ಸಂಡೂರು, ಶಿಗ್ಗಾಂವಿ ಮತ್ತು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗಳಲ್ಲಿ 3 ಕ್ಷೇತ್ರಗಳಲ್ಲೂ ಬಿಜೆಪಿ– ಎನ್‌ಡಿಎ ಪಕ್ಷ ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

3 ಕ್ಷೇತ್ರಗಳ ಉಪ ಚುನಾವಣೆ ನಡೆಯುತ್ತಿದೆ. ಶಿಗ್ಗಾವಿ ಕ್ಷೇತ್ರದಲ್ಲಿ ಬಿಜೆಪಿ ಈಗಾಗಲೇ ಗೆದ್ದಾಗಿದೆ ಎಂಬ ವಾತಾವರಣ ನಿರ್ಮಾಣ ವಾಗಿದೆ. ಸಂಡೂರಿನಲ್ಲಿ ಮತ್ತು ಚನ್ನಪಟ್ಟಣದಲ್ಲಿ ಕಾಂಗ್ರೆಸ್‌ನವರು ಗೆದ್ದೇಗೆಲ್ಲುವ ಭ್ರಮೆಯಲ್ಲಿದ್ದರು. ಆದರೆ, ಈಗ ಮಾನ್ಯ ಮುಖ್ಯಮಂತ್ರಿಗಳಿಗೆ, ಸಚಿವರಿಗೆ ಚನ್ನಪಟ್ಟಣದಲ್ಲಿ ಜೆಡಿಎಸ್ ಪಕ್ಷಕ್ಕೆ ಮೇಲುಗೈ ಆಗುತ್ತಿರುವುದು ಅರಿವಾಗಿದೆ. ಮುಖ್ಯಮಂತ್ರಿಗಳು ತಮ್ಮ ಕಾರ್ಯಕ್ರಮಗಳನ್ನು ರದ್ದು ಮಾಡಿ ಸಂಡೂರಿನಲ್ಲಿ ಬೀಡುಬಿಡುತ್ತಿದ್ದು, ಆ ಕ್ಷೇತ್ರವೂ ಕಾಂಗ್ರೆಸ್ ಕೈಜಾರಿ ಹೋಗುವ ವಾತಾವರಣ ಇದೆ ಹಾಗೂ ಬಿಜೆಪಿಗೆ ಮೇಲುಗೈ ಆಗುವ ವಾತಾವರಣ ನಿರ್ಮಾಣ ವಾಗಿದೆ. ಮುಖ್ಯಮಂತ್ರಿಗಳ ರೈತ ವಿರೋಧಿ ಧೋರಣೆ, ಮಠ ಮಾನ್ಯಗಳ ಜಮೀನನ್ನು ಕಸಿಯುವ ಹುನ್ನಾರದ ಹಿಂದೂ ವಿರೋಧಿ ನಡವಳಿಕೆಯು ಕಾಂಗ್ರೆಸ್ಸಿಗೆ ಶಾಪ ಆಗಲಿದೆ ಎಂದು ನುಡಿದರು.

ಜನರು ತಿರುಗಿ ಬೀಳಲಿ ದ್ದಾರೆ. ಮುಂದಿನ ಮೂರೂವರೆ ವರ್ಷ ನಾನೇ ಸಿಎಂ ಎಂಬ ಸಿದ್ದರಾಮಯ್ಯನವರ ಹೇಳಿಕೆ ಕುರಿತು ಪತ್ರಕರ್ತರು ಗಮನ ಸೆಳೆದಾಗ, ಆರೋಪಿ ಸ್ಥಾನದಲ್ಲಿರುವ ಮುಖ್ಯಮಂತ್ರಿಗಳು ಒಂದು ಕಡೆ ತಮ್ಮ ಬೆನ್ನನ್ನು ತಾವು ತಟ್ಟಿಕೊಳ್ಳುತ್ತಿದ್ದಾರೆ. ತಾವೇ ಮುಖ್ಯಮಂತ್ರಿಗಳಾಗಿ ಮುಂದುವರೆಯುವುದಾಗಿ ಹೇಳಿ ಶಾಸಕರಿಗೆ ವಿಶ್ವಾಸ ತುಂಬುವ ಕೆಲಸ ಮಾಡುತ್ತಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಕೆಲವು ಸಮಾಜಗಳ ಮತಕೀಳುವ ನಿಟ್ಟಿನಲ್ಲಿ ಪ್ರಯತ್ನ ನಡೆಸಿದ್ದಾರೆ. ಸಿಎಂ ರಾಜೀನಾಮೆ ಈಗಾಗಲೇ ನಿಶ್ಚಯವಾಗಿದೆ ಎಂದು ಹೇಳಿದರು.

ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ

ಕರ್ನಾಟಕ ಸರ್ಕಾರ

ನಿವಾಸಿ ಆಯುಕ್ತರವರ ಕಛೇರಿ, ಕರ್ನಾಟಕ ಭವನ
ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ.

69ನೇ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ
ದಿನಾಂಕ: 09.11.2024 ರಂದು
ದೆಹಲಿ ಕರ್ನಾಟಕ ಸಂಘದ ಸಭಾಂಗಣದಲ್ಲಿ
ಆಯೋಜಿಸಲಾಗಿರುವ
ಸಾಂಸ್ಕೃತಿಕ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆ

"ಸರ್ವರಿಗೂ ಆದರದ ಸುಸ್ವಾಗತ"

"ಹೆಸರಾಯಿತು ಕರ್ನಾಟಕ – ಉಸಿರಾಗಲಿ ಕನ್ನಡ"

"ಪ್ರತಿ ಮನೆಯಲ್ಲೂ ಕನ್ನಡ – ಪ್ರತಿ ಕಣದಲ್ಲೂ ಕನ್ನಡ"

ದಿನಾಂಕ: 09.11.2024
ಸಾಂಸ್ಕೃತಿಕ ಕಾರ್ಯಕ್ರಮಗಳು
ಸ್ಥಳ : ದೆಹಲಿ ಕರ್ನಾಟಕ ಸಂಘದ ಸಭಾಂಗಣ

ಸಮಾರಂಭದ ಮುಖ್ಯ ಅತಿಥಿಗಳು
ಶ್ರೀ ಟಿ.ಬಿ. ಜಯಚಂದ್ರ ಮತ್ತು ಶ್ರೀ ಪ್ರಕಾಶ್ ಬಿ. ಹುಕ್ಕೇರಿ
ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿಗಳು, ನವದೆಹಲಿ

ಸಮಾರಂಭದ ವಿಶೇಷ ಅತಿಥಿಗಳು
ಶ್ರೀ ಸಿ.ಎಂ. ನಾಗರಾಜ
ಅಧ್ಯಕ್ಷರು, ದೆಹಲಿ ಕರ್ನಾಟಕ ಸಂಘ, ನವದೆಹಲಿ.

| | |
|---|---|
| 04.30 | ಅತಿಥಿಗಳ ಆಗಮನ |
| 05.00 | ಸ್ವಾಗತ |
| 05.05 | ಸಭಾ ಕಾರ್ಯಕ್ರಮದ ಉದ್ಘಾಟನೆ |
| 05.10 | ನಾಡಗೀತೆ |
| 05.15 | ವಿಶೇಷ ಅತಿಥಿಗಳ ಭಾಷಣ |
| 05.20 | ಮುಖ್ಯ ಅತಿಥಿಗಳ ಭಾಷಣ |
| 05.25 | ವಂದನಾರ್ಪಣೆ |
| 05.30 | ಸಿಬ್ಬಂದಿಗಳು ಮತ್ತು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ |
| 07.30 | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಿಂದ ಚಿತ್ರದುರ್ಗ ಜಿಲ್ಲೆಯ ಸೇಕ್ರೆಡ್ ಹಾರ್ಟ್ ನೃತ್ಯ ಮತ್ತು ಕಲಾ ತಂಡ ಹಾಗೂ ಶ್ರೀ ವಿಜಯ ಮಹಾಂತೇಶ್ವರ ಕಲಾ ಬಳಗದಿಂದ ಸಂಗೀತ ಮತ್ತು ನೃತ್ಯಗಳು (ಕನ್ನಡದ ಕೋಗಿಲೆಯ ಗಾಯಕ ಶ್ರೀ ಖಾಸಿಂ ಅಲಿ ಇವರಿಂದ ಗಾಯನ) |
| 08.30 | ಆಟೋಟ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಣೆ |
| 09.00 | ಭೋಜನ (ಶ್ರೀ ಕೆ. ಬಸವರಾಜ್ ಮತ್ತು ತಂಡ, ದಾವಣಗೆರೆ ಜಿಲ್ಲೆ ಇವರಿಂದ ದಾವಣಗೆರೆ ಶೈಲಿಯ ವಿಶೇಷ ಅಡುಗೆ) |

ಸಿ. ಮೋಹನ್ ಕುಮಾರ್, ಸಹಾಯಕ ನಿವಾಸಿ ಆಯುಕ್ತರು (ಹೆಚ್ ಕೆ) (ಗ್ರೇಡ್–2)
ಆಕೃತಿ ಬನ್ಸಲ್, ಭಾ.ಆ.ಸೇ. ಅಪರ ನಿವಾಸಿ ಆಯುಕ್ತರು
ವಿಮಲ್ ಬನ್ಸಾಲ್, ಭಾ.ಆ.ಸೇ. ನಿವಾಸಿ ಆಯುಕ್ತರು

'ಜೈ ಕರ್ನಾಟಕ'

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆದ್ದ ಟ್ರಂಪ್, ಸೋತ ಹ್ಯಾರಿಸ್‌ಗೆ ರಾಹುಲ್ ಗಾಂಧಿ ಪತ್ರ

**ನವದೆಹಲಿ, ನ. 08 :** ಅಮೆರಿಕ ಅಧ್ಯಕ್ಷರಾಗಿ ಆಯ್ಕೆಯಾದ ಡೊನಾಲ್ಡ್ ಟ್ರಂಪ್ ಹಾಗೂ ಸೋಲನುಭವಿಸಿದ ಕಮಲಾ ಹ್ಯಾರಿಸ್ ಇಬ್ಬರಿಗೂ ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಪತ್ರ ಬರೆದಿದ್ದಾರೆ. ಅಮೆರಿಕ ಅಧ್ಯಕ್ಷರಾಗಿ ಆಯ್ಕೆಯಾದ ನಿಮಗೆ ಅಭಿನಂದನೆಗಳು. ಅಮೆರಿಕಾದ ಜನರು ನಿಮ್ಮ ಮೇಲೆ ನಂಬಿಕೆ ಇರಿಸಿದ್ದಾರೆ. ಭಾರತ ಮತ್ತು ಅಮೆರಿಕ ಪ್ರಜಾಪ್ರಭುತ್ವ ಮೌಲ್ಯಗಳ ಮೇಲೆ ಬದ್ಧತೆ ಇಟ್ಟುಕೊಂಡಿರುವ ದೇಶಗಳು. ನಮ್ಮ ರಾಷ್ಟ್ರಗಳು ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಇನ್ನಷ್ಟು



ಆಳಗೊಳಿಸುತ್ತವೆ ಎಂಬ ವಿಶ್ವಾಸ ನಮಗಿದೆ.

ಭಾರತೀಯರು ಮತ್ತು ಅಮೆರಿಕನ್ನರಿಬ್ಬರಿಗೂ ಮಾರ್ಗಗಳು ಮತ್ತು ಅವಕಾಶಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ನಾವು ಕೆಲಸ ಮಾಡುವುದನ್ನು ಮುಂದುವರಿಸುತ್ತೇವೆ ಎಂದು ನಾನು ಭಾವಿಸುತ್ತೇನೆ ಎಂದು ಟ್ರಂಪ್‌ಗೆ ಬರೆದ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಸೋತ ಕಮಲಾ ಹ್ಯಾರಿಸ್‌ಗೂ ಪತ್ರ ಬರೆದಿದ್ದು, ನಿಮ್ಮ ಉತ್ಸಾಹಭರಿತ ಅಧ್ಯಕ್ಷೀಯ ಪ್ರಚಾರಕ್ಕಾಗಿ ನಾನು ನಿಮ್ಮನ್ನು ಅಭಿನಂದಿಸಲು ಬಯಸುತ್ತೇನೆ. ನಿಮ್ಮ ಒಗ್ಗೂಡಿಸುವ ಭರವಸೆಯ ಸಂದೇಶವು ಅನೇಕರನ್ನು ಪ್ರೇರೇಪಿಸುತ್ತದೆ. ಜೋ ಬೈಡೆನ್ ಆಡಳಿತದಲ್ಲಿ ಭಾರತ ಮತ್ತು ಅಮೆರಿಕ ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಬಗ್ಗೆ ಆಳವಾದ ಸಹಕಾರವನ್ನು ಹೊಂದಿವೆ.

ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ನಮ್ಮ ಹಂಚಿಕೆಯ ಬದ್ಧತೆಯು ನಮ್ಮ ಸ್ನೇಹಕ್ಕೆ ಮಾರ್ಗದರ್ಶನ ನೀಡುವುದನ್ನು ಮುಂದುವರಿಸುತ್ತದೆ ಎಂದು ಧೈರ್ಯ ತುಂಬಿದ್ದಾರೆ. ಉಪಾಧ್ಯಕ್ಷರಾಗಿ ಜನರನ್ನು ಒಟ್ಟುಗೂಡಿಸುವ ಮತ್ತು ಸಾಮಾನ್ಯ ನೆಲೆಯನ್ನು ಕಂಡುಕೊಳ್ಳುವ ನಿಮ್ಮ ಸಂಕಲ್ಪವನ್ನು ನೆನಪಿಸಿಕೊಳ್ಳಲಾಗುತ್ತದೆ. ನಿಮ್ಮ ಮುಂದಿನ ಪ್ರಯತ್ನಗಳಲ್ಲಿ ನಾನು ನಿಮಗೆ ಶುಭ ಹಾರೈಸುತ್ತೇನೆ ಎಂದಿದ್ದಾರೆ.



ವಿಧಾನಸಭಾ ಚುನಾವಣೆಗೆ ಮುನ್ನ ಶುಕ್ರವಾರ ಮಹಾರಾಷ್ಟ್ರದ ಧುಲೆಯಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಬಿಜೆಪಿ ಅಭ್ಯರ್ಥಿ ಪರ ಪ್ರಚಾರದಲ್ಲಿ ಪಾಲ್ಗೊಂಡರು.

# ಸಲ್ಮಾನ್ ಖಾನ್‌ಗೆ ಮತ್ತೊಂದು ಜೀವ ಬೆದರಿಕೆ ಕರೆ

**ಮುಂಬೈ, ನ. 08 :** ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಮತ್ತೊಂದು ಜೀವ ಬೆದರಿಕೆ ಕರೆ ಬಂದಿದೆ. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ನಿಂದ ಮುಂಬೈ ಪೊಲೀಸರಿಗೆ ಕೊಲೆ ಬೆದರಿಕೆಯ ಸಂದೇಶ ಬಂದಿದೆ. ಗುರುವಾರ ರಾತ್ರಿ ಮುಂಬೈ ಸಂಚಾರ ಪೊಲೀಸರ ವಾಟ್ಸಾಪ್ ಸಹಾಯವಾಣಿಗೆ ಬೆದರಿಕೆ ಸಂದೇಶ ಕಳುಹಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಸಂದೇಶ ಕಳುಹಿಸಿದವರು ನಟನಿಗೆ ಬೆದರಿಕೆ ಹಾಕಿ 5 ಕೋಟಿ ರೂ.ಗೆ ಬೇಡಿಕೆ ಇಟ್ಟಿದ್ದಾರೆ. ಇದನ್ನು ಬಿಷ್ಣೋಯ್ ಗ್ಯಾಂಗ್ ಪರವಾಗಿ



ಮಾಡಲಾಗುತ್ತಿದೆ ಎಂದು ಹೇಳಿಕೊಂಡಿದ್ದಾರೆ. ಇದಲ್ಲದೆ, ವ್ಯಕ್ತಿಯು ಮೈ ಸಿಕಂದರ್ ಹೂನ್ ಹಾಡಿನ ಗೀತರಚನೆಕಾರನಿಗೂ ಬೆದರಿಕೆ ಹಾಕಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಸಂಚಾರ ಅಧಿಕಾರಿಗಳ ದೂರಿನ ಮೇರೆಗೆ ವರ್ಲಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಕಳೆದ ಕೆಲವು ವಾರಗಳಲ್ಲಿ, ಟ್ರಾಫಿಕ್ ಪೊಲೀಸ್ ಸಹಾಯವಾಣಿಗೆ ಸಲ್ಮಾನ್ ಖಾನ್‌ಗೆ ಹಲವು ಬೆದರಿಕೆ ಸಂದೇಶಗಳು ಬಂದಿವೆ.

ಈ ಹಿಂದೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗಿನಿಂದ್ ಖಾನ್‌ಗೆ ಜೀವ ಬೆದರಿಕೆ ಇತ್ತು. ಕೊಲೆ ಯತ್ನ ಮತ್ತು ಸುಲಿಗೆ ಸೇರಿದಂತೆ ಪ್ರಕರಣಗಳಲ್ಲಿ ಬಿಷ್ಣೋಯ್ ಸ್ವತಃ ಅಹಮದಾಬಾದ್ನ ಸಾಬರಮತಿ ಜೈಲಿನಲ್ಲಿದ್ದರೆ, ಆತನ ತಂಡದ ಶಂಕಿತ ಸದಸ್ಯರು ಏಪ್ರಿಲ್‌ನಲ್ಲಿ ನಟನ ಬಾಂದ್ರಾ ಮನೆಯ ಹೊರಗೆ ಗುಂಡು ಹಾರಿಸಿದ್ದು.

# ನಿವೃತ್ತ ಸಿಜೆ ಚಂದ್ರಚೂಡ್‌ಗೆ ಹೃದಯಸ್ಪರ್ಶಿ ಬೀಳ್ಕೊಡುಗೆ

**ನವದೆಹಲಿ, ನ. 08: ಸುಪ್ರೀಂಕೋರ್ಟ್** ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಶುಕ್ರವಾರ ನಿವೃತ್ತರಾದರು. ನ್ಯಾಯಾಲಯದಲ್ಲಿ ಏರ್ಪಟ್ಟ ಸಮಾರಂಭದಲ್ಲಿ ನ್ಯಾಯವಾದಿಗಳ ಸಮೂಹ ಚಂದ್ರಚೂಡ್‌ಗೆ ಹೃದಯಸ್ಪರ್ಶಿ ಬೀಳ್ಕೊಡುಗೆ ನೀಡಿತು. ಹತ್ತು ಹಲವು ಕಠಿಣ ಪ್ರಕರಣಗಳಲ್ಲಿ ನೀಡಿದ ನಿರ್ಣಾಯಕ ತೀರ್ಪುಗಳು ನ್ಯಾಯಾಂಗದ ಇತಿಹಾಸದಲ್ಲಿ ಚಿರಸ್ಮರಣೀಯವೆಂದು ಕಲೆ ನ್ಯಾಯಮೂರ್ತಿಗಳಿ ಪ್ರಶಂಸಿಸಿದರು. ಇದಕ್ಕೂ ಮುನ್ನ ತಮ್ಮ ಅಧಿಕಾರಾವಧಿಯ ಅಂತಿಮ ದಿನದಂದು, ಡಿವೈ ಚಂದ್ರಚೂಡ್ ಅವರು ವಿಧ್ಯುಕ್ತ ಪೀಠದಿಂದ ಸಂದೇಶವನ್ನು ನೀಡಿದರು. ಇನ್ನು ಮುಂದೆ ದೇಶದ ಉನ್ನತ ನ್ಯಾಯಾಧೀಶರಾಗಿ ಸೇವೆ ಸಲ್ಲಿಸುವುದಿಲ್ಲ ಎಂಬ ವಾಸ್ತವವನ್ನು ಭಾರತದ ಮುಖ್ಯ ನ್ಯಾಂಯುವಮೂರ್ತಿಂಯಾಗಿ ನ್ಯಾಯಮೂರ್ತಿ ಡಿವೈ ಚಂದ್ರಚೂಡ್



ಅವರ ಅಂತಿಮ ಸಂದೇಶ ಒಪ್ಪಿಕೊಂಡರು. ನಾಳೆಯಿಂದ ನನಗೆ ನ್ಯಾಯ ನೀಡಲು ಸಾಧ್ಯವಾಗುವುದಿಲ್ಲ. ಆದರೆ, ನಾನು ತೃಪ್ತಿ ಹೊಂದಿದ್ದೇನೆ ಎಂದು ಅವರು ಹೇಳಿದರು.

ನವೆಂಬರ್ 9, 2022 ರಂದು ಅಧಿಕಾರ ವಹಿಸಿಕೊಂಡ ಮುಖ್ಯ ನ್ಯಾಯಮೂರ್ತಿ ಚಂದ್ರಚೂಡ್ ಅವರು ತಮ್ಮ ಎರಡು ವರ್ಷಗಳ ಅವಧಿ ಮುಗಿದ ನಂತರ ಇಂದು ತಮ್ಮ ಸ್ಥಾನಕ್ಕೆ ವಿದಾಯ ಹೇಳಿದರು. ಹಿಂದಿನ ಸಂಜೆ ತಮ್ಮ ರಿಜಿಸ್ಟ್ರಾರ್ ಜುಡಿಷಿಯಲ್ ಅವರೊಂದಿಗಿನ ಲಘುವಾದ ಕ್ಷಣವನ್ನು ಅವರು ಹಂಚಿಕೊಂಡಿದ್ದು, ನನ್ನ ರಿಜಿಸ್ಟ್ರಾರ್ ನ್ಯಾಯಾಂಗವು ಸಮಾರಂಭವನ್ನು ಎಷ್ಟು ಗಂಟೆಗೆ ಪ್ರಾರಂಭಿಸಬೇಕು ಎಂದು ನನ್ನನ್ನು ಕೇಳಿದಾಗ, ನಾನು ಬಹಳಷ್ಟು ಬಾಕಿ ಇರುವ ವಸ್ತುಗಳನ್ನು ಕಟ್ಟಲು ಅನುವು ಮಾಡಿಕೊಡುತ್ತದೆ ಎಂದು ಭಾವಿಸಿ ಮಧ್ಯಾಹ್ನ 2 ಗಂಟೆಗೆ ಹೇಳಿದೆ. ಆದರೆ, ನಾನು ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ಯಾರಾದರೂ ಇಲ್ಲಿಗೆ ಬರುತ್ತಾರೆಯೇ ಅಥವಾ ನಾನು ಪರದೆಯ ಮೇಲೆ ನನ್ನನ್ನು ನೋಡುತ್ತೇನೆಯೇ ಎಂದುಕೊಂಡೆ ಎಂದು ಹೇಳಿದರು. ತಮ್ಮ ವೃತ್ತಿಜೀವನವನ್ನು ಪ್ರತಿಬಿಂಬಿಸುವ ಅವರು ನ್ಯಾಯಾಧೀಶರ ಪಾತ್ರವನ್ನು ಯಾತ್ರಿಕರಂತೆ ವಿವರಿಸಿದರು, ಪ್ರತಿದಿನ ನ್ಯಾಯಾಲಯಕ್ಕೆ ಸೇವೆ ಸಲ್ಲಿಸುವ ಬದ್ಧತೆಯೊಂದಿಗೆ ಬರುತ್ತಾರೆ. ನಾವು ಮಾಡುವ ಕೆಲಸವು ಪ್ರಕರಣಗಳನ್ನು ಮಾಡಬಹುದು ಅಥವಾ ಮುರಿಯಬಹುದು. ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರ ಸಮರ್ಥ ಕೈಯಲ್ಲಿ ಪೀಠವನ್ನು ಬಿಡಲು ನನಗೆ ಭರವಸೆ ಇದೆ. ನಾನು ನ್ಯಾಯಾಲಯದಲ್ಲಿ ಯಾರಿಗಾದರೂ ನೋವುಂಟು ಮಾಡಿದ್ದರೆ, ದಯವಿಟ್ಟು ನನ್ನನ್ನು ಕ್ಷಮಿಸಿ. ಮಿಚ್ಛಾಮಿ ದುಕ್ಕಡಮ್ ಎಂಬ ಜೈನ ವಾಕ್ಯವನ್ನು ಉಲ್ಲೇಖಿಸಿ, ನನ್ನ ಎಲ್ಲಾ ದುಷ್ಕೃತ್ಯಗಳನ್ನು ಕ್ಷಮಿಸಲಿ ಎಂದರು.

ಹೊರಹೋಗುವ ಮುಖ್ಯ ನ್ಯಾಯಮೂರ್ತಿಯನ್ನು ಗೌರವಿಸಲು ವಕೀಲರು ಮತ್ತು ಬಾರ್ನ ಸದಸ್ಯರು ಒಟ್ಟುಗೂಡಿದರು, ಅವರನ್ನು ನ್ಯಾಯಾಂಗದ ರಾಕ್ ಸ್ಟಾರ್ ಎಂದು ಬಣ್ಣಿಸಿದರು. ಅವರ ಉತ್ತರಾಧಿಕಾರಿಯಾಗಿ ನಾಮನಿರ್ದೇಶನ ಗೊಂಡಿರುವ ಮತ್ತು ನವೆಂಬರ್ 11 ರಂದು ಭಾರತದ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣವಚನ ಸ್ವೀಕರಿಸಲಿರುವ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು, ನ್ಯಾಯಮೂರ್ತಿ ಚಂದ್ರಚೂಡ್ ಅವರ ನ್ಯಾಯಾಲಯಕ್ಕೆ ಹಾಜರಾಗಲು ನನಗೆ ಎಂದಿಗೂ ಅವಕಾಶ ಇರಲಿಲ್ಲ. ಆದರೆ, ಅವರು ಅಂಚಿನಲ್ಲಿರುವವರಿಗೆ ಸಾಕಷ್ಟು ಮಾಡಿದ್ದಾರೆ, ಅವರು ಹೋಲಿಕೆಗೆ ಮೀರಿದ್ದಾರೆ ಎಂದರು.

ನ್ಯಾಯಮೂರ್ತಿ ಚಂದ್ರಚೂಡ್ ಅವರ ಸಮೋಸಾಗಳ ಬಗ್ಗೆ ಅವರ ವೈಯಕ್ತಿಕ ಉಪಾಖ್ಯಾನವನ್ನು ಅವರು ಸೇರಿಸಿದರು, ಮುಖ್ಯ ನ್ಯಾಯಮೂರ್ತಿ ಸ್ವತಃ ಅವುಗಳನ್ನು ತಿನ್ನುವುದನ್ನು ತಡೆದಿದ್ದರೂ, ಪ್ರತಿಯೊಂದು ಸಭೆಯಲ್ಲೂ ಸಮೋಸಾಗಳನ್ನು ಬಡಿಸಲಾಗುತ್ತದೆ ಎಂದು ಟೀಕಿಸಿದರು. ತಮ್ಮ ಎರಡು ವರ್ಷಗಳ ಅವಧಿಯಲ್ಲಿ, ನ್ಯಾಯಮೂರ್ತಿ ಚಂದ್ರಚೂಡ್ ಅವರು ಮಹತ್ವದ ತೀರ್ಪುಗಳ ಸರಣಿಯನ್ನು ಬರೆದಿದ್ದಾರೆ. ಗಮನಾರ್ಹವಾಗಿ, ಜಮ್ಮು ಮತ್ತು ಕಾಶ್ಮೀರದ ರಾಜಕೀಯವನ್ನು ಮರುವ್ಯಾಖ್ಯಾನಿಸಿದ ಆರ್ಟಿಕಲ್ 370 ರ ಹಿಂಪಡೆಯುವಿಕೆಯನ್ನು ಎತ್ತಿಹಿಡಿಯುವ ಸಂವಿಧಾನ ಪೀಠದ ಅಧ್ಯಕ್ಷತೆಯನ್ನು ಅವರು ವಹಿಸಿದ್ದರು. ಸೆಪ್ಟೆಂಬರ್ 2024 ರೊಳಗೆ ಚುನಾವಣೆಗಳನ್ನು ನಡೆಸುವಂತೆ ಆದೇಶಿಸಿದರು. ಬೇಗ ಮತ್ತು ಸಾಧ್ಯವಾದಷ್ಟು ಬೇಗ ರಾಜ್ಯತ್ವವನ್ನು ಪುನಃಸ್ಥಾಪಿಸುವ ಅಗತ್ಯವನ್ನು ಒತ್ತಿ ಹೇಳಿದರು.

# ಮುಂದಿನ ಸಿಎಂ ಡಿ.ಕೆ.ಶಿ ಅಂತ ಘೋಷಣೆ

**ರಾಮನಗರ, ನ.08 :** ಬಳ್ಳಾರಿಯ ಸಂಡೂರಿನಲ್ಲಿ ಕಾಂಗ್ರೆಸ್ ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಇನ್ನೂ ಮೂರುವರೆ ವರ್ಷ ಕಾಂಗ್ರೆಸ್ ಅಧಿಕಾರದಲ್ಲಿರಲಿದ್ದು, ನಾನೆ ಪೂರ್ಣಾವಧಿ ಸಿಎಂ ಆಗುತ್ತೇನೆ ಎಂದು ತಿಳಿಸಿದ್ದಾರೆ. ಇದೀಗ ಇಂದು ಡಿಕೆ ಶಿವಕುಮಾರ್ ಬೆಂಬಲಿಗರು ಮುಂದಿನ ಸಿಎಂ ಡಿ.ಕೆ ಶಿವಕುಮಾರ್ ಅಂತ ಘೋಷಣೆ ಕೂಗಿದರು. ಈ ವೇಳೆ ಡಿ.ಕೆ ಶಿವಕುಮಾರ್ ಏನು ಪ್ರತಿಕ್ರಿಯಿಸದೆ ಸೈಲೆಂಟಾಗಿದ್ದರು.

ಹೌದು ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಪ್ರಚಾರದ ಭರಾಟೆ ಜೋರಾಗಿದೆ. ಈ ಹೊತ್ತಿನಲ್ಲೇ ಮುಖ್ಯಮಂತ್ರಿ



ಸ್ಥಾನ ಕುರಿತಾದ ಚರ್ಚೆ ಆರಂಭವಾಗಿದೆ. ಸಂಡೂರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ವೇಳೆ ಸಿಎಂ ಸಿದ್ದರಾಮಯ್ಯ ಮುಂದಿನ ಮೂರುವರೆ ವರ್ಷ ನಾನೇ ಸಿಎಂ ಆಗಿರುತ್ತೇನೆ ಎಂದು ತಿಳಿಸಿದ್ದಾರೆ.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಇಂದು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಅಖಾಡದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ ಅವರ ಪರವಾಗಿ ಪ್ರಚಾರಕ್ಕೆ ತೆರಳಿದ್ದರು.ಈ ವೇಳೆ ಅವರ ಬೆಂಬಲಿಗರು ಮುಂದಿನ ಸಿಎಂ ಡಿ.ಕೆ ಶಿವಕುಮಾರ್ ಅಂತ ಘೋಷಣೆ ಕೂಗಿದರು.

ವೇದಿಕೆ ಕಾರ್ಯಕ್ರಮದಲ್ಲಿ ಡಿ.ಕೆ ಶಿವಕುಮಾರ್ ಅವರನ್ನು ಭಾಷಣಕ್ಕೆ ಆಹ್ವಿಸುವ ವೇಳೆ ಕೂಡ ಮುಖ್ಯಮಂತ್ರಿ ಕೂಗು ಕೇಳಿಬಂತು. ಹೌದು, ಕಾಂಗ್ರೆಸ್ ಮುಖಂಡ ಪ್ರಮೋದ್ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮಾತನಾಡಲು ಆಗಮಿಸುತ್ತಿದ್ದಾರೆ ಎಂದು ಹೇಳಿದರು.

## ಅನ್ನಪೂರ್ಣ ತುಕಾರಾಂ ಪರವಾಗಿ ಮತಯಾಚನೆ ಮಾಡಿದ ಸಿಎಂ ಸಿದ್ದರಾಮಯ್ಯ

# ಸಂಡೂರು ಲೂಟಿಮಾಡಿದ ರೆಡ್ಡಿಗಳಿಗೆ ಮತ ಹಾಕಬೇಡಿ

## ಬಿಜೆಪಿ ಅಪಪ್ರಚಾರವನ್ನು ನಂಬಬೇಡಿ. ಸುಳ್ಳುಗಳಿಗೆ ಮೋಸ ಹೋಗಬೇಡಿ

**ಸಂಡೂರು, ನ 08 :** ಹಣ ಬಲ, ತೋಳು ಬಲದಲ್ಲಿ ಸಂಡೂರನ್ನು ವಶಪಡಿಸಿಕೊಳ್ಳಲು ಬರ್ತಾರೆ ಎಚ್ಚರ. ಬಿಜೆಪಿ ಸೋಲಿಸಿ ಬಳ್ಳಾರಿ ಉಳಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಸಂಡೂರು ವಿಧಾನಸಭಾ ಕ್ಷೇತ್ರದ ಬನ್ನಿಹಟ್ಟಿ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಅವರ ಗೆಲುವಿನ ಪ್ರಚಾರ ಸಭೆಯಲ್ಲಿ ಮಾತನಾಡಿದರು.



ಈ ಸಂಡೂರು ಉಪ ಚುನಾವಣೆಯಲ್ಲಿ ಯಾರಿಗೆ ಟಿಕೆಟ್ ಕೊಡಬೇಕು ಎನ್ನುವ ಸಮೀಕ್ಷೆ ನಡೆಸಿದಾಗ ಈ. ತುಕಾರಾಮ್ ಅವರ ಪತ್ನಿ ಅನ್ನಪೂರ್ಣಮ್ಮ ಅವರು ಗೆದ್ದೇ ಗೆಲ್ತಾರೆ ಎನ್ನುವ ವರದಿ ಬಂದಿದ್ದರಿಂದ ಇವರಿಗೆ ಟಿಕೆಟ್ ನೀಡಿದ್ದೇವೆ. ಆದ್ದರಿಂದ ಇವರನ್ನು ಗೆಲ್ಲಿಸಿ ಕಳುಹಿಸುವ ಹೊಣೆ ಇಲ್ಲಿನ ಮತದಾರರ ಮೇಲಿದೆ.

ನಾನು ಇಬ್ರಾಹಿಂ ಚುನಾವಣಾ ಪ್ರಚಾರಕ್ಕೆ ಬಂದರೆ ಕಾರ್ಯಕ್ರಮ ಮಾಡಲು, ರೆಡ್ಡಿ ಬ್ರದರ್ಸ್ ಮತ್ತು ಶ್ರೀರಾಮುಲು ಭಾಷಣ ಮಾಡೋಕೆ ಜಾಗ ಕೊಡದೆ ಅವಮಾನ ಮಾಡಿದ್ರು. ದೇವಸ್ಥಾನದ ಬಾಗಿಲಲ್ಲಿ ನಾನು ಭಾಷಣ ಮಾಡಿ ಹೋದೆ. ಒಂದು ಮನೆಗೆ ಹೋಗಿ ಕುಡಿಯೋಕೆ ನೀರು ಕೇಳಿದ್ರೂ ನನಗೆ ನೀರು ಕೊಡೋಕೂ ಜನ ಭಯ ಬೀಳ್ತಿದ್ರು ಎಂದು ರೆಡ್ಡಿ ದರ್ಬಾರ್ ಅವಧಿಯ ಘಟನೆಗಳನ್ನು ಉಲ್ಲೇಖಿಸಿದ ಸಿದ್ದರಾಮಯ್ಯ ಅವರು ದಬ್ಬಾಳಿಕೆ, ದೌರ್ಜನ್ಯದ ಆ ದಿನಗಳನ್ನು ನೆನಪಿಸಿದರು.

ನನಗೆ ಬಳ್ಳಾರಿಗೆ ಕಾಲು ಇಡಿ ನೋಡೋಣ ಎಂದು ರೆಡ್ಡಿ ಸವಾಲು ಹಾಕಿದ್ದರು. ನಾನು ಸವಾಲು ಸ್ವೀಕರಿಸಿ ಪಾದಯಾತ್ರೆ ಮೂಲಕವೇ ಬಳ್ಳಾರಿಗೆ ಬಂದು ಸೆಡ್ಡು ಹೊಡೆದೆ. ಅಲ್ಲಿಂದಲೇ ರೆಡ್ಡಿ ಅವನತಿ ಶುರುವಾಯಿತು.

ಅಕ್ರಮ ಗಣಿಗಾರಿಕೆ ವಿರುದ್ಧ, ರೆಡ್ಡಿ ಬ್ರದರ್ಸ್ ಬಳ್ಳಾರಿಯನ್ನು ಹಾಳು ಮಾಡಲು ಬಿಡಬಾರದು ಎಂದು ನಾನು ಬೆಂಗಳೂರಿನಿಂದ ಪಾದಯಾತ್ರೆ ಮಾಡಿದೆ. ಮತ್ತೆ ಏನಾದರೂ ಜನಾರ್ಧನ ರೆಡ್ಡಿ ಪಟಾಲಂ ಬಳ್ಳಾರಿಯಲ್ಲಿ ಬೆಳೆದರೆ ಮತ್ತೆ ಅದೇ ಭೀತಿ, ಭಯದಲ್ಲಿ ಬಳ್ಳಾರಿ ನರಳಬೇಕಾಗುತ್ತದೆ. ಆದ್ದರಿಂದ ಇದಕ್ಕೆ ಅವಕಾಶ ಕೊಡಬೇಡಿ. ಬಿಜೆಪಿಯನ್ನು ಸೋಲಿಸಿ ಬಳ್ಳಾರಿಯನ್ನು ಉಳಿಸಿ ಎಂದು ಕರೆ ನೀಡಿದರು. ಸಂಡೂರಿನಲ್ಲಿ ರಸ್ತೆ, ನೀರು, ಶಾಲೆ, ಅಂಗನವಾಡಿ, ಆಸ್ಪತ್ರೆ, ಮೊಬೈಲ್ ಕ್ಲೀನಿಕ್ ಗಳು ಸೇರಿ ಏನೇನು ಅಭಿವೃದ್ಧಿ ಆಗಿದೆಯೋ ಅದೆಲ್ಲವೂ ಸಂತೋಷ್ ಲಾಡ್ ಮತ್ತು ತುಕಾರಾಮ್ ಅವರ ಅವಧಿಯಲ್ಲಿ ಮಾತ್ರ. ಬಿಜೆಪಿ ಅವಧಿಯಲ್ಲಿ ಲೂಟಿ ಲೂಟಿ ಲೂಟಿ ಮಾಡಿದ್ದು ಬಿಟ್ಟರೆ ಬೇರೇನೂ ಇಲ್ಲ.

ಹೈದ್ರಾಬಾದ್ ಕರ್ನಾಟಕ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ 371 ಜೆ ಜಾರಿ ಮಾಡಿದ್ದು ಕಾಂಗ್ರೆಸ್ . ನಮ್ಮ ಪ್ರಧಾನಿ ಮನಮೋಹನ್ ಸಿಂಗ್, ಸೋನಿಯಾಗಾಂಧಿ, ಮಲ್ಲಿಕಾರ್ಜುನ ಖರ್ಗೆ , ಧರಂಸಿಂಗ್ ಮತ್ತು ನಾನು ಸೇರಿ 371 ಜೆ ಜಾರಿ ಮಾಡಲು ಕಾರಣ. ಬಳಿಕ ನಾನು ಮುಖ್ಯಮಂತದರಿಯಾಗಿ 5000 ಕೋಟಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಅನುದಾನ ನೀಡಿದೆ. 371 ಜೆ ಬಂದಿದ್ದರಿಂದ ಇಲ್ಲಿನ ಮಕ್ಕಳು ಎಂಜಿನಿಯರ್ ಗಳಾದರು. ಡಾಕ್ಟರ್ ಗಳಾದರು. ಸರ್ಕಾರಿ ಕೆಲಸಕ್ಕೆ ಸಾವಿರಾರು ಸಂಖ್ಯೆಯಲ್ಲಿ ಸೇರಲು ಅವಕಾಶವಾಯಿತು. ಈಗ ಅವರು ಅಕ್ರಮ ಗಣಿಗಾರಿಕೆಯ ಹಣದ ಚೀಲಗಳನ್ನು ಹೊತ್ತುಕೊಂಡು ಬಂದು ಕುಳಿತಿದ್ದಾರೆ.

ಅವರ ಹಣಕ್ಕೆ ಮರುಳಾಗುತ್ತೀರಾ ಕಲ್ಯಾಣ ಕರ್ನಾಟಕದ ಅಭಿವೃದ್ಧಿಯ ಭಾಗ್ಯದ ಬಾಗಿಲು ತೆರೆದ ಕಾಂಗ್ರೆಸ್ ಕೈ ಹಿಡಿಯುತ್ತೀರಾ ಪ್ರಾಮಾಣಿಕವಾಗಿ ಯೋಚಿಸಿ ನಿರ್ಧರಿಸಿ ಎಂದರು. ಹತ್ತು ಹಲವು ಭಾಗ್ಯಗಳನ್ನು ಕೊಟ್ಟಿದ್ದು, ಐದಕ್ಕೆ ಐದೂ ಗ್ಯಾರಂಟಿಗಳನ್ನೂ ಜಾರಿ ಮಾಡಿ ವರ್ಷಕ್ಕೆ 56 ಸಾವಿರ ಕೋಟಿ ಹಣವನ್ನು ನಿಮ್ಮ ಖಾತೆಗೆ ನೇರವಾಗಿ ಹಾಕ್ತಾ ಇರುವುದು ನಮ್ಮ ಸರ್ಕಾರ. ಆದ್ದರಿಂದ ನಿಮ್ಮ ಬದುಕಿಗೆ ಪ್ರತೀ ತಿಂಗಳು ಬೆಳಕು ನೀಡುವ ನಮಗೆ ಬೆಂಬಲಿಸಬೇಕೋ, ಚುನಾವಣೆ ಬಂದಾಗ ಮಾತ್ರ ಕೊಡುವ ಅಕ್ರಮ ಗಣಿಗಾರಿಕೆಯ ಹಣಕ್ಕೆ ಓಟು ಹಾಕಿದ್ರೆ ಅದು ಅನ್ಯಾಯ ಆಗಲ್ವಾ ಎಂದು ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ ಅವರು ಅನ್ನಪೂರ್ಣ ಅವರನ್ನು ಗೆಲ್ಲಿಸುವಂತೆ ಕರೆ ನೀಡಿದರು. ನಾವಿನ್ನೂ ಮೂರೂವರೆ ವರ್ಷ ಅಧಿಕಾರದಲ್ಲಿ ಇರ್ತೀವಿ. ಅಲ್ಲಿಯವರೆಗೂ ನಾವು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಮುಂದುವರೆಸ್ತೀವಿ. ಬಿಜೆಪಿ ಅಪಪ್ರಚಾರವನ್ನು ನಂಬಬೇಡಿ. ಸುಳ್ಳುಗಳಿಗೆ ಮೋಸ ಹೋಗಬೇಡಿ. ಹೃದಯದ ಮಾತು ಕೇಳಿ ಅಭಿವೃದ್ಧಿಗೆ ನಿಮ್ಮ ಮತ ನೀಡಿ ಎಂದರು. ಅನ್ನಪೂರ್ಣಮ್ಮ ಗೆದ್ದರೆ ನಾನೇ ಗೆದ್ದ ಹಾಗೆ. ಅನ್ನಪೂರ್ಣಮ್ಮ ಅವರಿಗೆ ಬೀಳುವ ಒಂದೊಂದು ಓಟು ನನಗೆ ಹಾಕಿದಂತೆ, ಸಂತೋಷ್ ಲಾಡ್ ಅವರಿಗೆ ಹಾಕಿದಂತೆ ಎಂದರು.

ಈ ವೇಳೆ ಸಭೆಯಲ್ಲಿ ಸಚಿವರಾದ ಸಂತೋಷ್ ಲಾಡ್, ಜಿಲ್ಲಾ ಉಸ್ತುವಾರಿ ಸಚಿವರಾದ ಜಮೀರ್ ಅಹಮದ್ ಖಾನ್, ಸಂಸದ ಈ ತುಕಾರಾಮ್, ಶಾಸಕರಾದ ಗಣೇಶ್, ಅಜಯ್ ಕುಮಾರ್ ಸಿಂಗ್ ರವರು ಸೇರಿದಂತೆ ಹಲವು ಹಿರಿಯ ನಾಯಕರು ಉಪಸ್ಥಿತರಿದ್ದರು.

# 18ನೇ ವಿಶ್ವ ಸಂವಹನ ಸಮ್ಮೇಳನ



ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ, ಭಾರತೀಯ ಸಾರ್ವಜನಿಕ ಸಂಪರ್ಕ ಮಂಡಳಿ ಆಯೋಜಿಸಿದ 18ನೇ ವಿಶ್ವ ಸಂವಹನ ಸಮ್ಮೇಳನ 2024 ರ ವರ್ಷದ ರಾಷ್ಟ್ರೀಯ ಕಾರ್ಪೊರೇಟ್ ನಾಯಕತ್ವ ಚಾಣಕ್ಯ ಪ್ರಶಸ್ತಿ ಯು ಲಭಿಸಿದೆ. ಕೆಎಸ್‌ಆರ್‌ಟಿಸಿಯ ಕಾರ್ಮಿಕ ಸ್ನೇಹಿ, ಪ್ರಯಾಣಿಕ ಸ್ನೇಹಿ ಉಪಕ್ರಮಗಳಿಗೆ ಹಾಗೂ ವಿವಿಧ ಬಸ್ಸುಗಳ ಬ್ರ್ಯಾಂಡಿಂಗ್ ಕಾರ್ಯಕ್ಕೆ ಸದರಿ ಪ್ರಶಸ್ತಿಯು ಲಭಿಸಿರುತ್ತದೆ. ಶ್ರೀಪಾದ್ ಯೆಸ್ಸೋ ನಾಯ್ಕ್, ರಾಜ್ಯ ಸಚಿವರು, ಭಾರತ ಸರ್ಕಾರ, ಇಂಧನ, ನವೀನ ಮತ್ತು ನವೀಕರಿಸಿದ ಇಂಧನ ಸಚಿವಾಲಯ, 2024ನೇ ವರ್ಷದ ಮಿಸ್ ಗ್ಲೋಬಲ್ ಇಂಡಿಯಾ ಸ್ವೀಸೆಲ್ ಮರಿಯಾ ಫುರ್ಥಾಡೋ, PRCI ರಾಷ್ಟ್ರೀಯ ಅಧ್ಯಕ್ಷೆ ಗೀತಾ ಶಂಕರ್ ಅವರು ಮಂಗಳೂರು ನಗರದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೆಎಸ್‌ಆರ್‌ಟಿಸಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಮೈಸೂರು ನಗರ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ವೀರೇಶ್ ಎಚ್.ಟಿ, ಮಂಗಳೂರು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಶ್ ಶೆಟ್ಟಿ ಮತ್ತು ಪುತ್ತೂರು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಅಮಲಿಂಗಯ್ಯ ಬಿ.ಹೊಸಪೂಜಾರಿ ಅವರು ನಿಗಮದ ಪರವಾಗಿ ಪ್ರಶಸ್ತಿಯನ್ನು ಸ್ವೀಕರಿಸಿದರು

# ಗುತ್ತಿಗೆ ಕಾರ್ಮಿಕನಿಗೆ ಬಂದೂಕು ತೋರಿಸಿ ಲೈಂಗಿಕ ಶೋಷಣೆ

**ನವದೆಹಲಿ, ನ. 08:** ಹರಿಯಾಣದ ಸಾರ್ವಜನಿಕ ಆರೋಗ್ಯ ಇಲಾಖೆಯ ದಲಿತ ಗುತ್ತಿಗೆ ಕಾರ್ಮಿಕರೊಬ್ಬರನ್ನು ರಾಜ್ಯ ನಾಗರಿಕ ಸೇವಾ ಅಧಿಕಾರಿಯೊಬ್ಬರು ಬಂದೂಕಿನಿಂದ ಬೆದರಿಸಿ ಲೈಂಗಿಕವಾಗಿ ಶೋಷಣೆ ಮಾಡಿದ್ದಾರೆ ಎಂದು ವರದಿಯಾಗಿದ್ದು, ಗುರುವಾರ ಪೊಲೀಸರು ದೂರುದಾರರನ್ನು ತಮ್ಮ ಹೇಳಿಕೆಯನ್ನು ದಾಖಲಿಸುವಂತೆ ಕೇಳಿಕೊಂಡಿದ್ದಾರೆ.

ಈ ನಡುವೆ ಹರಿಯಾಣ ಜಿಲ್ಲೆಯೊಂದರಲ್ಲಿ ನಿಯೋಜಿಸಲಾದ ಹರಿಯಾಣ ನಾಗರಿಕ ಸೇವೆಗಳ ಅಧಿಕಾರಿಯನ್ನು ರಾಜ್ಯ ಸರ್ಕಾರ ಗುರುವಾರ ಸಂಜೆ ಅಮಾನತುಗೊಳಿಸಿದೆ. ಅದಾಗ್ಯೂ, ಅವರ ಅಮಾನತು ಆದೇಶದಲ್ಲಿ ಯಾವುದೇ ಕಾರಣವನ್ನು ಉಲ್ಲೇಖಿಸಲಾಗಿಲ್ಲ. ಅಧಿಕಾರಿಯು ಜಾತಿ ನಿಂದನೆ ಮಾಡಿದ್ದಾರೆ ಎಂದು ಸಂತ್ರಸ್ತ ದಲಿತ ವ್ಯಕ್ತಿ ಆರೋಪಿಸಿದ್ದಾರೆ. ಸಂತ್ರಸ್ತ ವ್ಯಕ್ತಿಯು ಅಂಚೆ ಮೂಲಕ ದೂರನ್ನು ನೀಡಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳ ತಿಳಿಸಿದ್ದಾರೆ.

ಘಟನೆ ಹಿಸಾರ್ ಜಿಲ್ಲೆಯಲ್ಲಿ ನಡೆದಿದೆ ಎಂದು ಅವರು ಆರೋಪಿಸಿದ್ದು, ತನ್ನ ದೂರಿನ ಪ್ರತಿಯನ್ನು ಪೊಲೀಸರು, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮತ್ತು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಮುಖ್ಯ ನ್ಯಾಯ ಮೂರ್ತಿಗಳಿಗೆ ಕಳುಹಿಸಿರುವುದಾಗಿ ಹೇಳಿದ್ದಾರೆ. ಎಚ್ಸಿಎಸ್ ಅಧಿಕಾರಿ ತನ್ನನ್ನು ಗುತ್ತಿಗೆ ಆಧಾರದ ಮೇಲೆ ಪ್ಯೂನ್ ಆಗಿ ನೇಮಕ ಮಾಡಿಕೊಂಡಿದ್ದಾರೆ ಎಂದು ಹೇಳಿಕೊಂಡ ಸಂತ್ರಸ್ತ ವ್ಯಕ್ತಿ ಹೇಳಿಕೊಂಡಿದ್ದಾರೆ. ಹರಿಯಾಣ

ಅವರು ತಮ್ಮ ಅಧಿಕೃತ ನಿವಾಸದಲ್ಲಿ ಮಸಾಜ್‌ಗಾಗಿ ನನ್ನನ್ನು ಕರೆಯುತ್ತಿದ್ದರು. ಅವರು ತಪ್ಪು ಕೆಲಸ ಮಾಡಲು ಪ್ರಾರಂಭಿಸಿದಾಗ, ಅದಕ್ಕೆ ಹಲವಾರು ಬಾರಿ ನಾನು ನಿರಾಕರಿಸಿದ್ದೆ. ಆದರೆ ಅವರು ಪಿಸ್ತೂಲ್ ಹಿಡಿದು ಬೆದರಿಸಿ ನನ್ನನ್ನು ಕೆಲಸದಿಂದ ತೆಗೆದುಹಾಕುವುದಾಗಿ ಹೇಳಿದ್ದರು. ಅದರ ನಂತರ, ನಾನು ಸಾಕ್ಷ್ಯವನ್ನು ಸಂಗ್ರಹಿಸಲು ಈ ಶೋಷಣೆಯ ವೀಡಿಯೊವನ್ನು ಚಿತ್ರೀಕರಿಸಿದ್ದೇನೆ ಎಂದು ಸಂತ್ರಸ್ತ ದಲಿತ ವ್ಯಕ್ತಿ ಹೇಳಿದ್ದಾರೆ.

ಅದರ ನಂತರ ನಾನು ಅಲ್ಲಿಗೆ ಹೋಗುವುದನ್ನು ನಿಲ್ಲಿಸಿದೆ. ನಾನು ಸಾಯಲು ಅಥವಾ ಅವರ ವಿರುದ್ಧ ದೂರು ದಾಖಲಿಸಲು ನಿರ್ಧರಿಸಿದೆ. ನಾನು ಹೃದ್ರೋಗ ರೋಗಿಯಾಗಿದ್ದು, ಈ ಶೋಷಣೆ ಕಳೆದ ಆರು ತಿಂಗಳಿನಿಂದ ನಡೆಯುತ್ತಿದೆ? ಎಂದು ಅವರು ಹೇಳಿದ್ದಾರೆ. ಸಂತ್ರಸ್ತ ವ್ಯಕ್ತಿಯಿಂದ ಅಂಚೆ ಮೂಲಕ ದೂರು ಸ್ವೀಕರಿಸಿದ್ದೇವೆ ಎಂದು ಹಿಸ್ಸಾರ್‌ನ ಪೊಲೀಸ್ ವರಿಷ್ಠಾಧಿಕಾರಿ ಶಶಾಂಕ್ ಕುಮಾರ್ ಸಾವನ್ ಹೇಳಿದ್ದಾರೆ. ಅವರ ಹೇಳಿಕೆಯನ್ನು ದಾಖಲಿಸಿಕೊಳ್ಳಲು ನಾವು ಅವರನ್ನು ಕರೆಸಿದ್ದೇವೆ ಎಂದು ಎಸ್ಪಿ ಹೇಳಿದ್ದಾರೆ.

# ವಕ್ಫ್ ಜೆಪಿಸಿ ಭೇಟಿಗೆ ಪ್ರತಿಪಕ್ಷ ನಾಯಕರ ಬಹಿಷ್ಕಾರ

**ನವದೆಹಲಿ, ನ. 08:** ಜೆಪಿಸಿ ಸಮಿತಿಯ ಅಧ್ಯಕ್ಷರು ಅನಿಯಂತ್ರಿತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಪ್ರವಾಸವನ್ನು ಮುಂದೂಡಲು ತಮ್ಮ ಮನವಿಯನ್ನು ನಿರ್ಲಕ್ಷಿಸಲಾಗಿದೆ ಎಂದು ಆರೋಪಿಸಿ, ವಕ್ಫ್ ತಿದ್ದುಪಡಿ ಮಸೂದೆಯ ಮೇಲಿನ ಜಂಟಿ ಸಮಿತಿಯ ವಿಪಕ್ಷ ಸದಸ್ಯರು ಸಮಿತಿಯ ಮುಂಬರುವ ಐದು ರಾಜ್ಯಗಳ ಪ್ರವಾಸವನ್ನು ಬಹಿಷ್ಕರಿಸಲು ನಿರ್ಧರಿಸಿದ್ದಾರೆ.

ಸಮಿತಿಯು ಇಂದಿನಿಂದ ಗುವಾಹಟಿ, ಭುವನೇಶ್ವರ, ಕೋಲ್ಕತ್ತಾ, ಪಟನಾ ಮತ್ತು ಲಖನೌ ಪ್ರವಾಸವನ್ನು ಆರಂಭಿಸಲಿದ್ದು, ವಿವಿಧ ಪಾಲುದಾರರೊಂದಿಗೆ ಚರ್ಚೆ ನಡೆಸಲಿದೆ. ಅಧ್ಯಕ್ಷರ ನಿರ್ಧಾರವನ್ನು ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ ವಿವರಿಸಿದರು. ಜಾರ್ಖಂಡ್‌ನಲ್ಲಿ ಮುಂಬರುವ ಚುನಾವಣೆಗಳು, ಬಂಗಾಳದ ಉಪಚುನಾವಣೆಗಳು ಮತ್ತು ಉತ್ಸವಗಳನ್ನು ಗುರುತಿಸಿದರು. ಇದರಿಂದಾಗಿ



ಪ್ರತಿಪಕ್ಷಗಳ ಸದಸ್ಯರು ಪ್ರವಾಸದಲ್ಲಿ ಭಾಗವಹಿಸಲು ಕಷ್ಟವಾಗುತ್ತದೆ ಎಂದರು.

ನಾವು ನಮ್ಮದೇ ಆದ ವೇಳಾಪಟ್ಟಿಯನ್ನು ಹೊಂದಿದ್ದೇವೆ; ನಾವು ಪ್ರವಾಸದಲ್ಲಿ ಹೇಗೆ ಭಾಗವಹಿಸಬಹುದು ಎಂದು ಬ್ಯಾನರ್ಜಿ ಕೇಳಿದರು. ಪ್ರವಾಸಗಳು ಮುಂದೂಡಲ್ಪಟ್ಟಿಲ್ಲ ಎಂದು ನಾವು ನಿರಾಶೆಗೊಂಡಿದ್ದೇವೆ. ನಾವು ಇದನ್ನು ಸ್ಪೀಕರ್ ಅವರ ಗಮನಕ್ಕೆ ತಂದಿದ್ದೇವೆ. ನಮಗೆ ನಮ್ಮದೇ ಆದ ಬದ್ಧತೆಗಳಿವೆ. ನಾವು ಇದನ್ನು ಹೇಗೆ ಸರಿಹೊಂದಿಸಬಹುದು ಪ್ರವಾಸಗಳು ಅತ್ಯಂತ ತೀವ್ರವಾದವು. ನಮ್ಮ ಕ್ಷೇತ್ರಗಳಲ್ಲಿ ಕೆಲಸ ಮಾಡದಂತೆ ನಮ್ಮನ್ನು ತಡೆಯಲಾಗುತ್ತಿದೆ. ಜಾರ್ಖಂಡ್ ಚುನಾವಣೆಗಳಿವೆ, ಬಂಗಾಳದಲ್ಲಿ ಉಪಚುನಾವಣೆಗಳಿವೆ, ಅವರು ಈ ಪ್ರಕ್ರಿಯೆಯನ್ನು ಮುಂದೂಡಲು ಸ್ಪೀಕರ್ಗೆ ಮನವಿ ಮಾಡಿದರೂ ಏನೂ ಮಾಡಲಾಗಿಲ್ಲ? ಎಂದು ಅವರು ಹೇಳಿದರು.

ಸಮಿತಿಯ ಅಧ್ಯಕ್ಷರು ನಮ್ಮ ಪ್ರಕ್ರಿಯೆಯನ್ನು ಅಣಕಿಸುತ್ತಿದ್ದಾರೆ ಎಂದು ಸಂಸದರು ಆರೋಪಿಸಿದರು.

ಎಐಎಂಐಎಂ ಲೋಕಸಭಾ ಸದಸ್ಯ ಅಸಾದುದ್ದೀನ್ ಓವೈಸಿ ಕೂಡ ಇದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸಮಿತಿಗೆ ತನಿಖಾ ಅಧಿಕಾರವಿಲ್ಲ, ಅದರ ಕೆಲಸ ಕೇವಲ ಮಸೂದೆಯನ್ನು ಪರಿಶೀಲಿಸುವುದು. ಮೇಲಾಗಿ, ಅಧ್ಯಕ್ಷರು ಏಕಪಕ್ಷೀಯವಾಗಿ ವರ್ತಿಸುವಂತಿಲ್ಲ ಮತ್ತು ಸಮಿತಿಯು ಸಾಮೂಹಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಟ್ವೀಟ್ ಮಾಡಿದ್ದಾರೆ.

ಪ್ರತಿಪಕ್ಷದ ಜೆಪಿಸಿ ಸದಸ್ಯರು ನವೆಂಬರ್ 5 ರಂದು ಲೋಕಸಭಾ ಸ್ಪೀಕರ್ ಅವರನ್ನು ಭೇಟಿ ಮಾಡಿ, ವೇಳಾಪಟ್ಟಿಯನ್ನು ಮುಂದೂಡಬೇಕು ಮತ್ತು ಜೆಪಿಸಿಯ ಸಭೆಯ ದಿನಗಳ ಸಂಖ್ಯೆಯನ್ನು ವಾರದಲ್ಲಿ ಎರಡು ದಿನಗಳಿಂದ ವಾರಕ್ಕೆ ಒಂದು ದಿನ ಅಥವಾ ಪ್ರತಿ ಹದಿನೈದು ದಿನಗಳಿಗೊಮ್ಮೆ ಸತತ ಎರಡು ದಿನಗಳಿಗೆ ಕಡಿತಗೊಳಿಸಬೇಕೆಂದು ಕೋರಿದರು.

# ಮಣಿಪುರದಲ್ಲಿ ಮತ್ತೆ ಹಿಂಸಾಚಾರ, ಮನೆಗಳಿಗೆ ಬೆಂಕಿ

**ಇಂಫಾಲ್, ನ. 08:** ಜನಾಂಗೀಯ ಕಲಹ ಪೀಡಿತ ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿ ಕನಿಷ್ಠ ಆರು ಮನೆಗಳಿಗೆ ಬೆಂಕಿ ಹಚ್ಚಲಾಗಿದ್ದು, ಬುಡಕಟ್ಟು ಗ್ರಾಮದ ನಿವಾಸಿಗಳ ಮೇಲೆ ಶಸ್ತ್ರಸಜ್ಜಿತ ಉಗ್ರಗಾಮಿಗಳ ಗುಂಪು ದಾಳಿ ಮಾಡಿದೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ. ಉಗ್ರರ ಗುಂಪು ಮನೆಗಳಿಗೆ ಬೆಂಕಿ ಹಚ್ಚಿದ ನಂತರ ಜೈರಾನ್ ಹ್ಮಾರ್ ಗ್ರಾಮದಲ್ಲಿ ಗುರುವಾರ ಸಂಜೆ ಈ ಘಟನೆ ಸಂಭವಿಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ವರದಿಗಳ ಪ್ರಕಾರ, ಹಲವಾರು ಗ್ರಾಮಸ್ಥರು ದಾಳಿಯ ಸಮಯದಲ್ಲಿ ಓಡಿಹೋಗುವಲ್ಲಿ ಯಶಸ್ವಿಯಾಗಿದ್ದಾರೆ. ಹತ್ತಿರದ ಕಾಡಿನಲ್ಲಿ ಆಶ್ರಯ ಪಡೆದರು.



ಬೆಂಕಿಯಿಂದಾಗಿ ಕನಿಷ್ಠ ಆರು ಮನೆಗಳಿಗೆ ತೀವ್ರ ಹಾನಿಯಾಗಿದ್ದು, ತನಿಖೆ ನಡೆಯುತ್ತಿದೆ? ಎಂದು ಅವರು ಹೇಳಿದರು.

ದಾಳಿಯ ಸಮಯದಲ್ಲಿ ಗ್ರಾಮದ ನಿವಾಸಿ ಮಹಿಳೆಯೊಬ್ಬರು ಸಾವನ್ನಪ್ಪಿದ್ದಾರೆ ಎಂದು ಕುಕಿ-ಜೋ ಸಂಘಟನೆಗಳು ಹೇಳಿಕೊಂಡಿವೆ.

ಆದರೆ, ಸಾವಿನ ವರದಿಯನ್ನು ಜಿಲ್ಲಾ ಪೊಲೀಸರು ಖಚಿತಪಡಿಸಿಲ್ಲ. ಮಣಿಪುರವು ಕಳೆದ ವರ್ಷ ಮೇ ತಿಂಗಳಿನಿಂದ ಜನಾಂಗೀಯ ಹಿಂಸಾಚಾರದಿಂದ ತತ್ತರಿಸಿದೆ. 200 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ.

ಪರಿಶಿಷ್ಟ ಪಂಗಡ (ಎಸ್ಟಿ) ಸ್ಥಾನಮಾನಕ್ಕಾಗಿ ಮೈತೇಯಿ ಸಮುದಾಯದ ಬೇಡಿಕೆಯನ್ನು ಪ್ರತಿಭಟಿಸಲು ಬೆಟ್ಟದ ಜಿಲ್ಲೆಗಳಲ್ಲಿ ?ಬುಡಕಟ್ಟು ಒಗ್ಗಟ್ಟಿನ ಮೆರವಣಿಗೆ? ಆಯೋಜಿಸಿದ ನಂತರ ಮೇ 3 ರಂದು ಹಿಂಸಾಚಾರ ಭುಗಿಲೆದ್ದಿತು. ಮಣಿಪುರದ ಜನಸಂಖ್ಯೆಯ ಸುಮಾರು 53 ಪ್ರತಿಶತದಷ್ಟಿರುವ ಮೈತೇಯಿಗಳು ಇಂಫಾಲ್ ಕಣಿವೆಯಲ್ಲಿ ವಾಸಿಸುತ್ತಿದ್ದಾರೆ. ಆದರೆ ನಾಗಾಗಳು ಮತ್ತು ಕುಕಿಗಳನ್ನು ಒಳಗೊಂಡಿರುವ ಬುಡಕಟ್ಟು ಜನಾಂಗದವರು ಶೇಕಡಾ 40 ರಷ್ಟಿದ್ದು, ಅವರು ಹೆಚ್ಚಾಗಿ ಗುಡ್ಡಗಾಡು ಜಿಲ್ಲೆಗಳಲ್ಲಿ ವಾಸಿಸುತ್ತಿದ್ದಾರೆ.



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶುಕ್ರವಾರ ಗೋವಾ ಕರಾವಳಿಯಲ್ಲಿ ಭಾರತೀಯ ನೌಕಾಪಡೆಯ ಕಾರ್ಯಾಚರಣೆಯ ಪ್ರದರ್ಶನವನ್ನು ವೀಕ್ಷಿಸಲು ತಮ್ಮ ಭೇಟಿಯ ಸಂದರ್ಭದಲ್ಲಿ ವಿಮಾನದ ಕಾಕ್‌ಪಿಟ್‌ನಿಂದ ಕೈ ಬೀಸಿದರು.

# ಗುಜರಾತ್‌ನ ಬಿಳಿ ಈರುಳ್ಳಿ ಬೆಳೆಯುವ ರೈತರಿಗೆ ಮಾತ್ರ ಏಕೆ ಆದ್ಯತೆ: ಮೋದಿಗೆ ಪ್ರಶ್ನೆ

**ನವದೆಹಲಿ, ನ. 08:** ಮಹಾರಾಷ್ಟ್ರದ ಈರುಳ್ಳಿ ಬೆಳೆಯುವ ರೈತರಿಗಿಂತ ಗುಜರಾತ್ನ ಬಿಳಿ ಈರುಳ್ಳಿ ರೈತರಿಗೆ ಏಕೆ ಆದ್ಯತೆ ನೀಡಲಾಗಿದೆ ಮತ್ತು ಮಹಾರಾಷ್ಟ್ರದಲ್ಲಿ ಆದಿವಾಸಿಗಳ ಅರಣ್ಯ ಹಕ್ಕುಗಳನ್ನು ಬಿಜೆಪಿ ಏಕೆ ದುರ್ಬಲಗೊಳಿಸಿದೆ ಎಂದು ಕಾಂಗ್ರೆಸ್ ಶುಕ್ರವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಪ್ರಶ್ನಿಸಿದೆ. ಧುಲೆ ಮತ್ತು ನಾಸಿಕ್‌ನಲ್ಲಿ ಪ್ರಧಾನಿ ಮೋದಿಯವರ ರ್‍ಯಾಲಿಗಳಿಗೆ ಮುಂಚಿತವಾಗಿ ಕಾಂಗ್ರೆಸ್ ಈ ಪ್ರಶ್ನೆಗಳನ್ನು ಪ್ರಧಾನಿಯ ಮುಂದಿಟ್ಟಿದ್ದು, ಪಕ್ಷದ ಪ್ರಧಾನ ಕಾರ್ಯದರ್ಶಿ ಸಂವಹನ ಉಸ್ತುವಾರಿ ಜೈರಾಮ್ ರಮೇಶ್ ಅವರು ಘಿ ನಲ್ಲಿ ಈ ಪ್ರಶ್ನೆಗಳನ್ನು ಹಾಕಿದ್ದಾರೆ. ಗುಜರಾತ್ ಕಳೆದ ವರ್ಷ ಡಿಸೆಂಬರ್‌ನಿಂದ ಮಹಾರಾಷ್ಟ್ರದ ಈರುಳ್ಳಿ ರಫ್ತಿನ ಮೇಲೆ ಮೋದಿ ಸರ್ಕಾರ ಹೇರಿದ ನಿರ್ಬಂಧದಿಂದ ಈರುಳ್ಳಿ ರೈತರು ತತ್ತರಿಸಿ ಹೋಗಿದ್ದಾರೆ. ಬೆಳೆಯ ಋತುವಿನಲ್ಲಿ ಹವಾಮಾನ ಮತ್ತು ನೀರಿನ ಬಿಕ್ಕಟ್ಟಿನಿಂದ ರೈತರು ತಮ್ಮ ಸಾಮಾನ್ಯ ಬೆಳೆಯಲ್ಲಿ ಕೇವಲ 50% ದಷ್ಟು ಮಾತ್ರ ಉತ್ಪಾದಿಸಲು ಸಾಧ್ಯವಾಯಿತು ಎಂದು ಅವರು ಹೇಳಿದ್ದಾರೆ.



ಈ ಮೂಲಕ ಅವರು ಭಾರಿ ನಷ್ಟ ಅನುಭವಿಸಿದರು. ಆದರೆ ಕೇಂದ್ರ ಸರ್ಕಾರ ಇದನ್ನು ಮತ್ತಷ್ಟು ಹದಗೆಡಿಸಿದ್ದು, ಬಿಳಿ ಈರುಳ್ಳಿ ರಫ್ತು ಮಾಡಲು ಅವಕಾಶ ಮಾಡಿಕೊಟ್ಟಿತ್ತು. ಈ ಈರುಳ್ಳಿಯನ್ನು ಪ್ರಾಥಮಿಕವಾಗಿ ಗುಜರಾತ್‌ನ ಬೆಳೆಯಲಾಗುತ್ತದೆ. ಆದರೆ ಕೆಂಪು ಈರುಳ್ಳಿ ಬೆಳೆಯುವ ಮಹಾರಾಷ್ಟ್ರದ ರೈತರು ರಫ್ತು ನಿಷೇಧದಿಂದ ಎರಡು ತಿಂಗಳು ಹೊರಗುಳಿದರು. ಈ ನಿಷೇಧ ತೆರವು ಮಾಡಿದ್ದರೂ, ರಫ್ತಿನ ಮೇಲೆ 20% ಸುಂಕವು ಜಾರಿಯಲ್ಲಿದೆ ಎಂದು ಅವರು ಹೇಳಿದ್ದಾರೆ. ಗುಜರಾತ್ ಜೈವಿಕವಲ್ಲದ ಪ್ರಧಾನಿ ಅವರು ಈ ರೀತಿಯಾಗಿ ಪಕ್ಷಪಾತ ಮಾಡಿದರು ಎಂದು ವಿವರಿಸಬಹುದೇ ಗುಜರಾತ್‌ನ ಈರುಳ್ಳಿ ಬೆಳೆಯುವ ರೈತರ ಪರವಾಗಿ ಕಾಳಜಿ ವ್ಯಕ್ತಪಡಿಸುವಾಗ, ಮಹಾರಾಷ್ಟ್ರದ ಈರುಳ್ಳಿ ರೈತರನ್ನು ಅವರು ಏಕೆ ನಿರ್ಲಕ್ಷಿಸಿದ್ದಾರೆ ಎಂದು ರಮೇಶ್ ಅವರು ತಮ್ಮ ಪೋಸ್ಟ್‌ನಲ್ಲಿ ಕೇಳಿದ್ದಾರೆ. 2006 ರಲ್ಲಿ ಕಾಂಗ್ರೆಸ್ ಅರಣ್ಯ ಹಕ್ಕುಗಳ ಕಾಯಿದೆ (ಎಫ್‌ಆರ್‌ಎ) ಅನ್ನು ಅಂಗೀಕರಿಸಿತು, ಇದು ಆದಿವಾಸಿ ಮತ್ತು ಅರಣ್ಯ-ವಾಸಿಸುವ ಸಮುದಾಯಗಳಿಗೆ ತಮ್ಮದೇ ಆದ ಕಾಡುಗಳನ್ನು ನಿರ್ವಹಿಸಲು ಕಾನೂನು ಹಕ್ಕುಗಳನ್ನು ನೀಡಿತು ಎಂದು ರಮೇಶ್ ಹೇಳಿದ್ದಾರೆ. ಆದರೆ ಈ ಅರಣ್ಯ ಹಕ್ಕು ಕಾಯ್ದೆ ಅನುಷ್ಠಾನಕ್ಕೆ ಬಿಜೆಪಿ ಸರ್ಕಾರ ಅಡ್ಡಿಪಡಿಸಿದೆ ಎಂದು ಅವರು ಆರೋಪಿಸಿದ್ದಾರೆ.

401, 046 ವೈಯಕ್ತಿಕ ಹಕ್ಕುಗಳಲ್ಲಿ ಕೇವಲ 52% ವನ್ನು ಮಾತ್ರ ಅನುಮೋದಿಸಲಾಗಿದೆ ಮತ್ತು ಸಮುದಾಯ ಹಕ್ಕುಗಳಿಗೆ ಅರ್ಹವಾದ 50,045 ಚದರ ಕಿಮೀಗಳಲ್ಲಿ ಕೇವಲ 23.5% ದಷ್ಟು (11,769 ಚದರ ಕಿಮೀ) ಭೂಮಿ ಹಕ್ಕುಗಳನ್ನು ನೀಡಲಾಗಿದೆ ಎಂದು ಅವರು ಹೇಳಿದ್ದಾರೆ. ಮಹಾರಾಷ್ಟ್ರದ ಮಹಾಯುತಿ ಸರ್ಕಾರವು ಆದಿವಾಸಿ ಸಮುದಾಯಗಳಿಗೆ ಅವರ ಹಕ್ಕುಗಳನ್ನು ಒದಗಿಸಲು ಏಕೆ ವಿಫಲವಾಗಿದೆ ರಮೇಶ್ ಕೇಳಿದ್ದು, ನಾಸಿಕ್ ಮುನ್ಸಿಪಲ್ ಕಾರ್ಪೊರೇಷನ್‌ಗೆ ಮಹಾಯುತಿ ಸರ್ಕಾರ ಏಕೆ ಚುನಾವಣೆ ನಡೆಸಲಿಲ್ಲ ಎಂದು ಪ್ರಶ್ನಿಸಿದ್ದಾರೆ.

# ಸ್ಥಾಪಕರ ಆಧಾರದ ಮೇಲೆ ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯಕ್ಕೆ ಅಲ್ಪಸಂಖ್ಯಾತ ಸ್ಥಾನಮಾನ ನಿರ್ಧಾರ: ಸುಪ್ರೀಂ ಕೋರ್ಟ್ ಸ್ಪಷ್ಟನೆ

**ನವದೆಹಲಿ, ನ. 08 :** ಅಲಿಗಢ ಮುಸ್ಲಿಂ ವಿಶ್ವ ವಿದ್ಯಾನಿಲಯದ ಅಲ್ಪಸಂಖ್ಯಾತ ಸ್ಥಾನಮಾನಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಸುಪ್ರೀಂಕೋರ್ಟ್‌ನ ಏಳು ನ್ಯಾಯಾಧೀಶರ ಪೀಠ 4:3 ಬಹುಮತದ ತೀರ್ಪು ನೀಡಿದ್ದು, 1967ರ ಅಝೀಝ್ ಬಾಷಾ ಯೂನಿಯನ್ ಆಫ್ ಇಂಡಿಯಾದ ತೀರ್ಪನ್ನು ರದ್ದುಗೊಳಿಸಿದೆ. ಎಎಂಯು ಅಲ್ಪಸಂಖ್ಯಾತ ಸ್ಥಾನಮಾನ ಅದನ್ನು ಯಾರು ಸ್ಥಾಪಿಸಿದರು ಎಂಬುವುದರ ಮೇಲೆ ನಿರ್ಧರಿಸಲಾಗುತ್ತದೆ ಎಂದು ಹೇಳಿದೆ. ವಿಶ್ವ ವಿದ್ಯಾನಿಲಯವನ್ನು ಸ್ಥಾಪಿಸಿದವರು ಯಾರು ಮತ್ತು ಅದರ ಹಿಂದಿನ ಕರ್ತೃ ಯಾರು ಎಂಬುವುದನ್ನು ನ್ಯಾಯಾಲಯವು ಪರಿಶೀಲಿಸಬೇಕು. ಪರಿಶೀಲನೆಯಲ್ಲಿ ಅಲ್ಪಸಂಖ್ಯಾತ ಸಮುದಾಯ ಸ್ಥಾಪಿಸಿರುವುದು ಬಯಲಾದರೆ, ಸಂಸ್ಥೆಯು 30ನೇ ವಿಧಿಯ ಪ್ರಕಾರ ಅಲ್ಪಸಂಖ್ಯಾತ ಸ್ಥಾನಮಾನವನ್ನು ಪಡೆಯಬಹುದು ಎಂದು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಿದೆ. ಎಎಂಯು ಕಾನೂನಿನಿಂದ ರಚಿಸಲ್ಪಟ್ಟಿರುವುದರಿಂದ ಅಲ್ಪಸಂಖ್ಯಾತ ಸ್ಥಾನಮಾನವನ್ನು ಪಡೆಯಲು ಸಾಧ್ಯವಿಲ್ಲ



ಎಂದು 1967ರ ಅಝೀಝ್ ಬಾಷಾ ಯೂನಿಯನ್ ಆಫ್ ಇಂಡಿಯಾ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್ ಹೇಳಿತ್ತು. ಅದನ್ನು ಈಗ ತಳ್ಳಿಹಾಕಿದೆ.

ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ, ಜೆ.ಬಿ. ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರ ಪರವಾಗಿ ಬಹುಮತದ ತೀರ್ಪು ಬರೆದಿರುವ ಸಿಜೆಐ ಚಂದ್ರಚೂಡ್ ಅವರು, ಅಝೀಝ್ ಬಾಷಾ ಯೂನಿಯನ್ ಆಫ್ ಇಂಡಿಯಾ ಪ್ರಕರಣದ ತೀರ್ಪನ್ನು ತಳ್ಳಿ ಹಾಕಿದೆ. ಆದರೆ, ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್, ದೀಪಂಕರ್ ದತ್ತಾ ಮತ್ತು ಎಸ್ಸಿ ಶರ್ಮಾ ಅವರು ಭಿನ್ನಾ ತೀರ್ಪುಗಳನ್ನು ಬರೆದಿದ್ದಾರೆ. ಎಎಂಯು ಅಲ್ಪಸಂಖ್ಯಾತ ಸಂಸ್ಥೆಯೇ ಎಂಬ ವಿಷಯುವನ್ನು ನಿರ್ಧರಿಸಲು ಸಾಮಾನ್ಯ ಪೀಠಕ್ಕೆ ಅವಕಾಶ ನೀಡಲಾಗಿದೆ. ಈ ತೀರ್ಪಿನ ಪ್ರಕಾರ, ಎಂಎಂಯು ಅಲ್ಪಸಂಖ್ಯಾತ ಸ್ಥಾನಮಾನದ ಮೌಲ್ಯಮಾಪನ ಮಾಡಲು ಮತ್ತು 2006ರ ಅಲಹಾಬಾದ್ ಹೈಕೋರ್ಟ್ ತೀರ್ಪನ್ನು ಮರುಮೌಲ್ಯಮಾಪನ ಮಾಡಲು ಮುಖ್ಯ ನ್ಯಾಯಾಧೀಶರು ಹೊಸ ಪೀಠವನ್ನು ರಚಿಸಲಿದ್ದಾರೆ.

ಎಎಂಯು ಕೇಂದ್ರೀಯ ಕಾನೂನು ಮೂಲಕ ಸ್ಥಾಪಿತಗೊಂಡಿರುವುದರಿಂದ, ಅದನ್ನು ಅಲ್ಪಸಂಖ್ಯಾತರ ಸಂಸ್ಥೆ ಎಂದು ಪರಿಗಣಿಸಲಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ನ ಐವರು ನ್ಯಾಯಾಧೀಶರ ಪೀಠವು 1967ರಲ್ಲಿ ತೀರ್ಪು ನೀಡಿತ್ತು. 1981ರಲ್ಲಿ ಸಾಂವಿಧಾನಿಕ ತಿದ್ದುಪಡಿ ಮೂಲಕ ಅಂದಿನ ಕೇಂದ್ರ ಸರ್ಕಾರ ಎಎಂಯುಗೆ ಅಲ್ಪಸಂಖ್ಯಾತ ಸ್ಥಾನಮಾನ ನೀಡಿತ್ತು. ಅಲಹಾಬಾದ್ ಹೈಕೋರ್ಟ್ ಈ ಸ್ಥಾನಮಾನವನ್ನು ರದ್ದುಪಡಿಸಿ 2006ರಲ್ಲಿ ಆದೇಶ ಹೊರಡಿಸಿತ್ತು. ಈ ಆದೇಶವನ್ನು ಯುಪಿಎ ಸರ್ಕಾರವು ಸುಪ್ರೀಂ ಕೋರ್ಟನಲ್ಲಿ ಪ್ರಶ್ನಿಸಿತ್ತು.

# ಯೋಗಿ ಆದಿತ್ಯನಾಥ ಹೇಳಿಕೆಗೆ ಅಜಿತ್ ಪವಾರ್ ಆಕ್ಷೇಪ

**ಮುಂಬೈ, ನ. 08:** ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಮಹಾರಾಷ್ಟ್ರದ ಚುನಾವಣಾ ರ್‍ಯಾಲಿಯಲ್ಲಿ ಬಾಟೆಂಗೆ ತೋ ಕಟೆಂಗೆ ಎಂಬ ಘೋಷಣೆ ಪುನರುಚ್ಚರಿಸಿರುವುದಕ್ಕೆ ಬಿಜೆಪಿಯ ಮಿತ್ರಪಕ್ಷ ಎನ್ಸಿಪಿ ನಾಯಕ ಅಜಿತ್ ಪವಾರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇಂತಹ ಹೇಳಿಕೆಗಳನ್ನು ನಮ್ಮ ರಾಜ್ಯದ ಜನರು ಇಷ್ಟಪಡುವುದಿಲ್ಲ ಎಂದು ಹೇಳಿದ್ದಾರೆ. ಪುಣೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಮಹಾರಾಷ್ಟ್ರವು ಛತ್ರಪತಿ ಶಿವಾಜಿ ಮಹಾರಾಜ್, ರಾಜರ್ಷಿ ಶಾಹು ಮಹಾರಾಜ್ ಮತ್ತು ಮಹಾತ್ಮ ಫುಲೆ ಅವರಿಗೆ ಸೇರಿದೆ.

ನೀವು ಮಹಾರಾಷ್ಟ್ರವನ್ನು ಇತರ ರಾಜ್ಯಗಳೊಂದಿಗೆ ಹೋಲಿಸಬೇಡಿ. ಮಹಾರಾಷ್ಟ್ರದ ಜನರು ಇಂತಹ ಹೇಳಿಕೆಗಳನ್ನು ಇಷ್ಟಪಡುವುದಿಲ್ಲ ಎಂದು ಆದಿತ್ಯನಾಥ್ ಅವರ ಹೇಳಿಕೆ ಬಗ್ಗೆ ಅಜಿತ್ ಪವಾರ್ ಪ್ರತಿಕ್ರಿಯಿಸಿದ್ದಾರೆ. ಸಮಾಜದ ಎಲ್ಲ ವರ್ಗದವರನ್ನು ಜೊತೆಯಲ್ಲಿ ಕೊಂಡೊಯ್ಯುವುದು ಶಿವಾಜಿ ಮಹಾರಾಜರ ಬೋಧನೆ. ಮಹಾರಾಷ್ಟ್ರದ ಜನರು ಸದಾ ಕೋಮು ಸೌಹಾರ್ದತೆಯನ್ನು ಕಾಪಾಡಲು ಶ್ರಮಿಸುತ್ತಿದ್ದಾರೆ ಎಂದಿದ್ದಾರೆ.

ಬೇರೆ ರಾಜ್ಯಗಳ ಜನರು ಇಲ್ಲಿಗೆ ಬಂದಾಗ, ಅವರು ತಮ್ಮ ಜನರನ್ನು ಗವುನದಲ್ಲಿಟ್ಟುಕೊಂಡು ಮಾತನಾಡುತ್ತಾರೆ. ಆದರೆ, ಮಹಾರಾಷ್ಟ್ರವು ಅದನ್ನು ಎಂದಿಗೂ ಸ್ವೀಕರಿಸುವುದಿಲ್ಲ. ಇದು ಇಲ್ಲಿನ ಎಲ್ಲಾ ಚುನಾವಣೆಗಳ ಇತಿಹಾಸವಾಗಿದೆ ಎಂದು ಅಜಿತ್ ಪವಾರ್ ಹೇಳಿದ್ದಾರೆ.

ನವೆಂಬರ್ 20ರಂದು ನಡೆಯಲಿರುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಪ್ರಚಾರದ ಭಾಗವಾಗಿ ವಾಶಿಮ್‌ನಲ್ಲಿ ನಡೆದ ಬಿಜೆಪಿ ಪ್ರಚಾರ ಸಭೆಯಲ್ಲಿ ಮಾತನಾಡಿದ ಆದಿತ್ಯನಾಥ್ ಅವರು ತಮ್ಮ ಪ್ರಸಿದ್ಧ ಘೋಷಣೆ ಬಾಟೆಂಗೆ ತೋ ಕಟೆಂಗೆ ಅನ್ನು ಪುನರುಚ್ಚರಿಸಿದ್ದರು.

## ಯುನಿವರ್ಸಲ್ ಮೆಲೋಡಿಯಸ್ ಆಡಿಯೋ-ವಿಡಿಯೋ ಸ್ಟುಡಿಯೋ ಉದ್ಘಾಟನೆ

# ಛಾಯಾಚಿತ್ರಗ್ರಹಣವೂ ಪ್ರತಿಭಾನ್ವಿತ ಕಲೆ: ಮೈಕೆಲ್ ಡಿಸೋಜಾ

**ಮುಂಬಯಿ, ನ. 08 :** ಸ್ಟ್ಯಾನ್ಲಿ ಬಂಟ್ವಾಳ್ ಮಾಲೀಕತ್ವದ ನವೀಕೃತ ಅನ್ವಿಟಾ ಫೋಟೋಗ್ರಾಫಿ & ಆನ್ಸಿಟಾ ವಿಡಿಯೋಗ್ರಾಫಿ ಸ್ಟುಡಿಯೋ ಹಾಗೂ ಲಿಯೋ ರಾಣಿಪುರ ನಿರ್ವಹಣೆಯ ಯುನಿವರ್ಸಲ್ ಮೆಲೋಡಿಯಸ್ ಆಡಿಯೋ ವಿಡಿಯೋ ಸ್ಟುಡಿಯೋ ಮಂಗಳೂರು ಬಿಕರ್ನಕಟ್ಟೆ ಜಂಕ್ಷನ್‌ನಲ್ಲಿ ಕಳೆದ ಬುಧವಾರ ಉದ್ಘಾಟನೆಗೊಂಡಿತು.

ಅನಿವಾಸಿ ಭಾರತೀಯ ಗಲ್ಫ್ ಉದ್ಯಮಿ ಮೈಕಲ್ ಡಿಸೋಜಾ ಇವರು ಅನ್ವಿತಾ ಫೋಟೋಗ್ರಾಫಿ ಮತ್ತು ಆನ್ಸಿಟಾ ವಿಡಿಯೋಗ್ರಾಫಿ ಸ್ಟುಡಿಯೋವನ್ನು ಉದ್ಘಾಟಿಸಿದರು. ದುಬಾಯಿ ಗಲ್ಫ್ ಉದ್ಯಮಿ ಜೇಮ್ಸ್ ಮೆಂಡೋನ್ಸಾ ಇವರು ಯುನಿವರ್ಸಲ್ ಮೆಲೋಡಿಯಸ್ ಆಡಿಯೋ ವಿಡಿಯೋ ಸ್ಟುಡಿಯೋವನ್ನು ಉದ್ಘಾಟಿಸಿ ಶುಭಾರೈಸಿದರು. ರೆ। ಫಾ। ವಾಲ್ಟರ್ ಡಿಸೋಜಾ (ಓಸಿಡಿ) ಅವರು ಆಶೀರ್ವಾದಿಸಿ ಪ್ರಾರ್ಥನೆಗೈದು ಆಶೀರ್ವಚನಗೈದರು. ಲಿಯೋ



ರಾಣಿಪುರ ಅವರ ಸೇವಾ ಕರಪತ್ರವನ್ನು ಮಂಗಳೂರು ಡಯೋಸಿಸ್'ನ ಪಿಆರ್‌ಒ ಮತ್ತು ಮದರ್ ತೆರೆಸಾ ವಿಚಾರ ವೇದಿಕೆಯ ಅಧ್ಯಕ್ಷ ರೊಯ್ ಕ್ಯಾಸ್ತೆಲಿನೊ ಬಿಡುಗಡೆಗೊಳಿಸಿದರು. ಎಲ್ಲಾ ಯುವ ಜನತೆಯು ಪ್ರತಿಭಾನ್ವಿತರೇ ಆಗಿರುತ್ತಾರೆ. ಅಂತಹ ಪ್ರತಿಭೆಯಲ್ಲಿ ಛಾಯಾಚಿತ್ರ ಗ್ರಹಣವೂ ಪ್ರಧಾನವಾದುದು. ಆರಂಭದಿಂದ ಅಂತ್ಯದ ವರೆಗೂ ಇದು ಅತ್ಯವಶ್ಯಕ. ಇಂತಹ ಸೇವೆಯನ್ನು ಅತ್ಯಾಧುನಿಕತೆಯೊಂದಿಗೆ ಮೈಗೂಡಿಸಿ ಸ್ವ-ಉದ್ಯಮಿಗಳಾಗಲು ಸುಲಭವಾದ ಆಯ್ಕೆಯಾಗಿದೆ. ಯುವಜನತೆ ಉದ್ಯೋಗಿಗಳಾಗುವ ಬದಲಾಗಿ ಸ್ವ-ಉದ್ಯೋಮಿಗಳು ಆಗಲು ಸಹಾಯಕಾರಿ ಎಂದು ಅನಿವಾಸಿ ಭಾರತೀಯ ಉದ್ಯಮಿ ಮೈಕೆಲ್ ಡಿಸೋಜಾ (ಪುತ್ತೂರು) ತಿಳಿಸಿದರು.

ಕಾರ್ಯಕ್ರಮದಲ್ಲಿ ಇನ್ಫೆಂಟ್ ಮೇರಿ ಚರ್ಚ್ ಬಜ್ಜೋಡಿ ಇದರ ಪ್ರಧಾನ ಧರ್ಮಗುರು ರೆ। ಫಾ। ಡೊಮಿನಿಕ್ ವಾಜ್, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸ್ಟಾನಿ ಆಲ್ವಾರೆಸ್, ರಚನಾ ಮಂಗಳೂರು ಅಧ್ಯಕ್ಷ ಜೊನ್ ಮೊಂತೇರೊ, ಕನ್ನಡಿಗ ಪತ್ರಕರ್ತರ ಸಂಘ, ಮಹಾರಾಷ್ಟ್ರ ಅಧ್ಯಕ್ಷ ರೊನ್ಸ್ ಬಂಟ್ವಾಳ್, ಸಂದೇಶ ಫೌಂಡೇಷನ್ ಮಂಗಳೂರು ನಿರ್ದೇಶಕ ಫಾ। ಸುದೀಪ್ ಪಾವ್ಲ್, ಫಾ। ವಿನ್ಸೆಂಟ್ ಡಿಸೋಜಾ, (ಸಿ.ಓ.ಡಿ.ಪಿ) ಮಂಗಳೂರು, ಎಂ.ಸಿ.ಸಿ. ಬ್ಯಾಂಕ್, ಮಂಗಳೂರು ಅಧ್ಯಕ್ಷ ಅನಿಲ್ ಲೋಬೋ ಪೆರ್ಮಾಯಿ, ನವೀನ್ ಲೋಬೋ, ಕಿಶೋರ್ ಫೆರ್ನಾಂಡಿಸ್, ಮ್ಯಾಕ್ಸಿಮ್ ಫ್ರಾನ್ಸಿಸ್ ಮೊರಾಸ್, ಅರುಣ್ ಡಿಸೋಜಾ, ಅಡ್ವಕೇಟ್ ಆಲ್ವಿನ್ ಪಿ. ಮೊಂತೇರೊ, ಫ್ಲಾಯ್ಡ್ ಕಾಸ್ಸಿಯಾ, ಡೋನಾಲ್ಡ್ ಪಿರೇರಾ, ವಿಲಿಯಂ ರೆಬೆಲ್ಲೋ, ಅಕ್ಷತಾ ಜಯನ್ ಮುಂತಾದ ಗಣ್ಯರು ಭಾಗವಹಿಸಿದ್ದರು.

ಈ ಸ್ಟುಡಿಯೋ ಯುವ ಪ್ರತಿಭೆಗಳನ್ನು ಬೆಂಬಲಿಸುವುದರೊಂದಿಗೆ ಕೊಂಕಣಿ ಭಾಷೆಯನ್ನು ಉತ್ತೇಜಿಸುವಲ್ಲಿ ಮಹತ್ವಪೂರ್ಣ ಪಾತ್ರವಹಿಸುವುದಕ್ಕೆ ನವೀನ ವೇದಿಕೆಯನ್ನು ನೀಡಲಿದ್ದು, ಸೃಜನಶೀಲತೆ ಮತ್ತು ಸಾಂಸ್ಕೃತಿಕ ಅಭಿವ್ಯಕ್ತಿಗೆ ಇದು ಹೊಸ ಆಯಾಮವನ್ನು ನೀಡಲಿದೆ ಎಂದು ಸ್ಟ್ಯಾನ್ಲಿ ಬಂಟ್ವಾಳ್ ತಿಳಿಸಿದರು. ರೋಷನ್ ಕ್ರಾಸ್ತಾ ಕಾರ್ಯಕ್ರಮ ನಿರೂಪಿಸಿದರು. ಲಿಯೋ ರಾಣಿಪುರ ಕೃತಜ್ಞತೆ ಸಲ್ಲಿಸಿದರು.

## ಕನ್ನಡ ಸಂಘ ಸಾಂತಕ್ರೂಜ್ ಪೂರೈಸಿದ 67ನೇ ವಾರ್ಷಿಕ ಮಹಾಸಭೆ

# ಸಂಘದಲ್ಲಿ ಸಮಿತಿ ಸದಸ್ಯರ ಭಾಗವಹಿಸುವಿಕೆ ಅತ್ಯವಶ್ಯಕ: ಸುಜತಾ ಆರ್.ಶೆಟ್ಟಿ

**ಮುಂಬಯಿ, ನ.08:** ಸಂಘದಲ್ಲಿ ಸಮಿತಿ ಸದಸ್ಯರ ಭಾಗವಹಿಸುವಿಕೆ ಅತ್ಯವಶ್ಯಕ ಆಗಿದೆ. ಸುಮಾರು ಎಂಟು ದಶಕಗಳಿಂದ ಎಲ್ಲರೂ ತಮ್ಮ ಸಹಕಾರದಿಂದ ಸಂಘವನ್ನು ಬಲಪಡಿ ಮುನ್ನಡೆಸಿದ್ದಾರೆ. ಸದಸ್ಯರು ಒಗ್ಗೂಡಿ ಕೆಲಸ ಮಾಡುತ್ತಾ ಹೊಸಬರನ್ನು ಸಂಘಕ್ಕೆ ಸೇರ್ಪಡೆ ಮಾಡುವ ಪ್ರಯತ್ನ ಮಾಡಬೇಕಾಗಿದೆ. ಕಳೆದ ಮೂರು ವರ್ಷಗಳ ನನ್ನ ಸಾರಥ್ಯದ ಅವಧಿಗೆ ತಮ್ಮೆಲ್ಲರ ಸಹಕಾರ ಮತ್ತು ಸಹಾಯಗಳಿಗೆ ಋಣಿಯಾಗಿದ್ದು, ಮತ್ತೆ ನನ್ನ ಮೇಲಿನ ವಿಶ್ವಾಸದೊಂದಿಗೆ ಮುಂದಿನ ಮೂರು ವರ್ಷಗಳ ಅಧ್ಯಕ್ಷೆ ಸ್ಥಾನ ಒದಗಿಸಿದ್ದು ಪುನರಪಿ ಎಲ್ಲರ ಸಹಕಾರವನ್ನು ಬಯಸುತ್ತೇನೆ. ಎಲ್.ವಿ ಅಮೀನ್, ಬಿ. ಆರ್ ಪೂಂಜ, ನಾರಾಯಣ ಶೆಟ್ಟಿ ಮೊದಲಾದವರು ಈ ಸಂಘವನ್ನು ಎತ್ತರಕ್ಕೆ ಬೆಳೆಸಿದರು. ಮುಂದೆಯೂ ನಾವೆಲ್ಲರೂ ಜೊತೆಗೂಡಿ ಸಂಘವನ್ನು ಬಾಣೆತ್ತರಕ್ಕೆ ಬೆಳೆಸೋಣ ಎಂದು ಕನ್ನಡ ಸಂಘ ಸಾಂತಾಕ್ರೂಜ್ ಅಧ್ಯಕ್ಷೆ ಸುಜತಾ ಆರ್.ಶೆಟ್ಟಿ ನುಡಿದರು. ಕನ್ನಡ ಸಂಘ ಸಾಂತಾಕ್ರೂಜ್ ತನ್ನ 67ನೇ ವಾರ್ಷಿಕ ಮಹಾಸಭೆಯನ್ನು ಇಂದಿಲ್ಲಿ ಗುರುವಾರ ಸಂಜೆ




ಸಾಂತಾಕ್ರೂಜ್ ಪೂರ್ವದಲ್ಲಿನ ಬಿಲ್ಲವ ಭವನದ ಕಿರು ಸಭಾಗೃಹದಲ್ಲಿ ನಡೆಸಿದ್ದು ಸಭಾಧ್ಯಕ್ಷತೆ ವಹಿಸಿ ಅಧ್ಯಕ್ಷೀಯ ಭಾಷಣಗೈದು ಸುಜತಾ ಶೆಟ್ಟಿ ಮಾತನಾಡಿದರು. ಸಂಘದ ಗೌರವಾಧ್ಯಕ್ಷ ಎಲ್.ವಿ ಅಮೀನ್, ಉಪಾಧ್ಯಕ್ಷ ದೊಡ್ಡಗುತ್ತು ಭುಜಂಗ ಆರ್.ಶೆಟ್ಟಿ, ಗೌ। ಪ್ರ। ಕಾರ್ಯದರ್ಶಿ ಜಯ ವಿ.ಪೂಜಾರಿ, ಗೌ। ಕೋಶಾಧಿಕಾರಿ ಸುಧಾಕರ್ ಉಚ್ಚಿಲ್, ಗೌ। ಜೊತೆ ಕಾರ್ಯದರ್ಶಿ ಚಂದ್ರಹಾಸ ಜೆ.ಕೋಟ್ಯಾನ್, ಗೌ। ಜೊತೆ ಕೋಶಾಧಿಕಾರಿ ಬನ್ನಂಜೆ ರವೀಂದ್ರ ಅಮೀನ್ ವೇದಿಕೆಯಲ್ಲಿ ಆಸೀನರಾಗಿದ್ದರು.

2024ನೇ ಸಾಲಿನ ವಿದ್ಯಾರ್ಥಿ ವೇತನ, ವಾರ್ಷಿಕ ದತ್ತು ಸ್ವೀಕಾರ ಮತ್ತು ವಿದ್ಯಾರ್ಥಿಗಳ ಆರ್ಥಿಕ ಸಹಾಯನಿಧಿ ವಿತರಣಾ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಅಧ್ಯಕ್ಷೆ ಸುಜಾತಾ ಆರ್.ಶೆಟ್ಟಿ ಉದ್ಘಾಟಿಸಿದ್ದು, ಗೌರವಾಧ್ಯಕ್ಷ ಎಲ್.ವಿ ಅಮೀನ್, ಉಪಾಧ್ಯಕ್ಷ ದೊಡ್ಡಗುತ್ತು ಭುಜಂಗ ಆರ್.ಶೆಟ್ಟಿ, ಗೌ। ಪ್ರ। ಕಾರ್ಯದರ್ಶಿ ಜಯ ವಿ.ಪೂಜಾರಿ, ಗೌ। ಕೋಶಾಧಿಕಾರಿ ಸುಧಾಕರ್ ಉಚ್ಚಿಲ್, ಸಲಹಾ ಸಮಿತಿ ಸದಸ್ಯ ಭೋಜ ಎನ್.ಶೆಟ್ಟಿ, ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ವಿಜಯಕುಮಾರ್ ಕೆ.ಕೋಟ್ಯಾನ್, ಕಾರ್ಯದರ್ಶಿ ಶಕಿಲಾ ಪಿ.ಶೆಟ್ಟಿ, ಸಿಎ। ಪ್ರಕಾಶ್ ಶೆಟ್ಟಿ, ರತ್ನಾ ಪಿ.ಶೆಟ್ಟಿ, ಪ್ರೇಮನಾಥ ಶೆಟ್ಟಿ, ಚೇತ್ನಾ ಅಮೀನ್, ಅರವಿಂದ್ ಶೆಟ್ಟಿ ವೇದಿಕೆಯಲ್ಲಿ ಆಸೀನರಾಗಿದ್ದು ವಿದ್ಯಾರ್ಥಿಗಳ ವಾರ್ಷಿಕ ದತ್ತು ಸ್ವೀಕಾರ ಮತ್ತು ವಿದ್ಯಾರ್ಥಿಗಳ ಆರ್ಥಿಕ ಸಹಾಯನಿಧಿ ವಿತರಿಸಿ ಮಕ್ಕಳಿಗೆ ಶುಭಾರೈಸಿದರು.

ಗೌರವಾಧ್ಯಕ್ಷ ಎಲ್.ವಿ ಅಮೀನ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ, ಯುವಜನತೆ ಸಂಘದಲ್ಲಿ ಸದಸ್ಯರಾಗಲು ಉತ್ತೇಜಿತರಾಗಬೇಕು. ಭಾವೀ ಜನಾಂಗವು ಸಂಘದಲ್ಲಿ ಸಕ್ರಿಯವಾಗಿ ಭಾಗವಹಿಸಿ ನಾಯಕತ್ವದ ಸಾರಥ್ಯ ವಹಿಸಬೇಕು. ಸಂಘಕ್ಕೆ ಹೊಸ ಸದಸ್ಯರ ಸೇರ್ಪಡೆಯಿಂದ ಸಂಘದ ಜೊತೆಗೆ ಸಮಾಜವೂ ಸದೃಢವಾಗುವುದು ಎಂದರು. ಸಭೆಯಲ್ಲಿ ಕಾರ್ಯಕಾರಿ ಸಮಿತಿ ಸದಸ್ಯ ಸುಮಾ ಎಂ. ಪೂಜಾರಿ, ಶಾಲಿನಿ ಜಿ.ಶೆಟ್ಟಿ, ಸಾಮಾಜಿಕ ಮತ್ತು ಸಾಂಸ್ಕೃತಿಕ ಸಮಿತಿ ಕಾರ್ಯಾಧ್ಯಕ್ಷೆ ವನಿತಾ ವೈ. ನೋಂದ, ಕಾರ್ಯದರ್ಶಿ ಲಕ್ಷ್ಮೀ ಎನ್.ಕೋಟ್ಯಾನ್, ಕಾರ್ಯಕಾರಿ ಸಮಿತಿಯ ಪ್ರಸನ್ನ ಶೆಟ್ಟಿ, ಸಂಪ ಎಲ್.ಬಿಲ್ಲವ, ಲಿಂಗಪ್ಪ ಬಿ.ಅಮೀನ್, ಸುಜಾತ ಉಚ್ಚಿಲ್ ಸೇರಿದಂತೆ ಸಂಘದ ಸದಸ್ಯರನೇಕರು ಹಾಜರಿದ್ದರು. ಸಾಮಾಜಿಕ, ಸಾಂಸ್ಕೃತಿಕ ಸಮಿತಿ ಕಾರ್ಯದರ್ಶಿ ಲಕ್ಷ್ಮೀ ಎನ್.ಕೋಟ್ಯಾನ್ ಪ್ರಾರ್ಥನೆಯನ್ನಾಡಿದರು. ಗೌ। ಕೋಶಾಧಿಕಾರಿ ಸುಧಾಕರ್ ಉಚ್ಚಿಲ್‌ಗತ ವಾರ್ಷಿಕ ಲೆಕ್ಕಪತ್ರ ಮಂಡಿಸಿದರು. ಗೌ। ಪ್ರ.ಕಾರ್ಯದರ್ಶಿ ಜಯ ವಿ.ಪೂಜಾರಿ ಸ್ವಾಗತಿಸಿ ಗತ ವಾರ್ಷಿಕ ಮಹಾಸಭೆ ವರದಿ ವಾಚಿಸಿ, ಆಭಾರ ಮನ್ನಿಸಿದರು.

# ಪುರುಷರು ಮಹಿಳೆಯರ ಬಟ್ಟೆ ಹೊಲಿಯುವುದು, ಕೂದಲು ಕತ್ತರಿಸುವುದು ನಿಷಿದ್ಧ: ಯುಪಿ ಮಹಿಳಾ ಆಯೋಗದ ವಿಚಿತ್ರ ಪ್ರಸ್ತಾಪ

**ಲಕ್ನೋ, ನ. 08 :** ಪುರುಷರು ಮಹಿಳೆಯರಿಗೆ ಬಟ್ಟೆಗಳನ್ನು ಹೊಲಿಯಬಾರದು ಹಾಗೂ ಅವರ ಕೂದಲನ್ನು ಕತ್ತರಿಸಬಾರದು ಎಂದು ಎಂಬ ವಿಚಿತ್ರ ಪ್ರಸ್ತಾಪವನ್ನು ಉತ್ತರ ಪ್ರದೇಶ ರಾಜ್ಯ ಮಹಿಳಾ ಆಯೋಗ ಸರ್ಕಾರದ ಮುಂದಿಡಲು ನಿರ್ಧರಿಸಿದೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಮಹಿಳೆಯರನ್ನು ಕೆಟ್ಟ ಸ್ಪರ್ಶದಿಂದ ರಕ್ಷಿಸಲು ಮತ್ತು ಪುರುಷರ ಕೆಟ್ಟ ಉದ್ದೇಶಗಳನ್ನು ತಡೆಯಲು ಮುಂದಾಗಿರುವುದಾಗಿ ಆಯೋಗ ಸಮರ್ಥಿಸಿಕೊಂಡಿದೆ.

ಅ. 28 ರಂದು ನಡೆದ ಸಭೆಯ ನಂತರ ಮಹಿಳೆಯರ ಅಳತೆಗಳನ್ನು ತೆಗೆದುಕೊಳ್ಳಲು ಪುರುಷರಿಗೆ ಅವಕಾಶ ನೀಡಬಾರದು, ಅಂಗಡಿಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಬಾರದು ಎಂಬ ಸಲಹೆಗಳನ್ನು ನೀಡಲಾಗಿದೆ. ಮಹಿಳಾ ಆಯೋಗದ ಸಭೆಯಲ್ಲಿ, ಮಹಿಳೆಯರು ಧರಿಸುವ ಹೊಲಿಗೆ ಬಟ್ಟೆಯ ಅಳತೆಯನ್ನು ಮಹಿಳಾ ಟೈಲರ್‌ಗಳು ಮಾತ್ರ ತೆಗೆದುಕೊಳ್ಳಬೇಕು. ಈ ಪ್ರದೇಶಗಳಲ್ಲಿ ಸಿಸಿಟಿವಿಗಳನ್ನು ಅಳವಡಿಸಬೇಕು ಎಂಬ



ಪ್ರಸ್ತಾವನೆಯನ್ನು ತೇಲಲಾಯಿತು ಎಂದು ಮಹಿಳಾ ಆಯೋಗದ ಸದಸ್ಯೆ ಹಿಮಾನಿ ಅಗರ್ವಾಲ್ ಹೇಳಿದರು ಎಂದು ಮಾಧ್ಯಮಗಳು ವರದಿ ಮಾಡಿವೆ.

ಈ ಪ್ರಸ್ತಾವನೆಯನ್ನು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಬಬಿತಾ ಚೌಹಾಣ್ ಮಂಡಿಸಿದ್ದು, ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರಿಂದ ಬೆಂಬಲ ವ್ಯಕ್ತವಾಗಿದೆ ಎಂದರು. ನಾವು ಸಲೂನ್‌ಗಳಲ್ಲಿ ಮಹಿಳಾ ಕ್ಷೌರಿಕರು ಮಾತ್ರ ಮಹಿಳಾ ಗ್ರಾಹಕರಿಗೆ ಹಾಜರಾಗಬೇಕು ಎಂದು ಹೇಳಿದ್ದೇವೆ ಎಂದು ಅಗರ್ವಾಲ್ ಹೇಳಿದರು. ಈ ರೀತಿಯ ವೃತ್ತಿಯಲ್ಲಿ ತೊಡಗಿರುವ ಪುರುಷರಿಂದಾಗಿ ಮಹಿಳೆಯರು ಕಿರುಕುಳಕ್ಕೊಳಗಾಗುತ್ತಾರೆ ಎಂದು ನಾವು ಭಾವಿಸುತ್ತೇವೆ. ಅವರು (ಪುರುಷರು) ಕೆಟ್ಟ ಸ್ಪರ್ಶದಲ್ಲಿ ಪಾಲ್ಗೊಳ್ಳಲು ಪ್ರಯತ್ನಿಸುತ್ತಾರೆ ಎಂದು ಅವರು ಆರೋಪಿಸಿದ್ದಾರೆ. ಕೆಲವು ಪುರುಷರ ಉದ್ದೇಶವೂ ಒಳ್ಳೆಯದಲ್ಲ, ಎಲ್ಲಾ ಪುರುಷರಿಗೆ ಕೆಟ್ಟ ಉದ್ದೇಶಗಳಿವೆ ಎಂದು ಅಲ್ಲ ಎಂದು ಹೇಳಿದರು. ಸದ್ಯಕ್ಕೆ ಇದು ಕೇವಲ ಪ್ರಸ್ತಾವನೆಯಾಗಿದ್ದು, ಈ ನಿಟ್ಟಿನಲ್ಲಿ ಕಾನೂನು ರೂಪಿಸುವಂತೆ ಮಹಿಳಾ ಆಯೋಗವು ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಿದೆ ಎಂದು ಅಗರ್ವಾಲ್ ಹೇಳಿದರು.

# ವಕ್ಫ್: ಜೆಪಿಸಿ ವಿರುದ್ಧ ಆರೋಪಕ್ಕೆ ಬೊಮ್ಮಾಯಿ ಖಂಡನೆ



**ಬೆಂಗಳೂರು, ನ, 8;** ವಕ್ಫ್ ಕಾಯ್ದೆ ತಿದ್ದುಪಡಿಗೆ ಸಂವಿಧಾನ ಬದ್ದವಾಗಿ ಸಂಸತ್ತಿನ ಜಂಟಿ ಸದನ ಸಮಿತಿ ರಚನೆಯಾಗಿದ್ದು, ಸಮಿತಿ ಬಗ್ಗೆ ಆರೋಪ ಮಾಡುವವರಿಗೆ ಸಂವಿಧಾನದ ಬಗ್ಗೆ ಗೌರವ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಕ್ಫ್ ಸಂಸದೀಯ ಮಂಡಳಿ ಕರ್ನಾಟಕಕ್ಕೆ ಬೇಟಿ ನೀಡಿರುವುದು ಅದೊಂದು ಯಾವುದೇ ಆಧಾರ ರಹಿತವಾದ ಸಮಿತಿ ಎಂದು ಕಾಂಗ್ರೆಸ್ ನವರು ಮಾಡಿರುವ ಆರೋಪಕ್ಕೆ ಉತ್ತರ ಕೊಟ್ಟ ಅವರು, ಇದೊಂದು ಪಾರ್ಲಿಮೆಂಟ್ ಮಾಡಿದ ಸಮಿತಿ.

ಉಭಯ ಸದನಗಳಿಂದ ರಚನೆಯಾದ ಸಮಿತಿ, ಪಾರ್ಲಿಮೆಂಟ್ ಜಂಟಿ ಸದನ ಮಾಡಿದ ಸಮಿತಿಗೆ ತನ್ನದೇ ಆದ ಗೌರವ ಇದೆ. ಕರ್ನಾಟಕದಲ್ಲಿ ಸಮಸ್ಯೆ ಇದೆ ಅಂತ ಅವರು ಇಲ್ಲಿಗೆ ಬಂದಿದ್ದರು. ಯಾವುದೇ ರೀತಿಯ ರಾಜಕೀಯ ಇಲ್ಲ. ಸಮಿತಿಯವರು ರೈತರ ಸಮಸ್ಯೆ ಆಲಿಸಿದ್ದಾರೆ ಎಂದು ತಿಳಿಸಿದರು. ಈ ಸರ್ಕಾರ ತನ್ನ ತಪ್ಪನ್ನು ಮುಚ್ಚಿಕೊಳ್ಳಲು, ಒಲೈಕೆ ರಾಜಕಾರಣ ಮಾಡಲು ಆರೋಪ ಮಾಡುತ್ತಿದ್ದಾರೆ. ಅವರಿಗೆ ಸಂವಿಧಾನದ ಬಗ್ಗೆ ಸಂಸತ್ತಿನ ಬಗ್ಗೆಯೂ ಗೌರವ ಇಲ್ಲ ಎಂದು ಕಿಡಿ ಕಾರಿದರು.

# ಸಂಸದ ತೇಜಸ್ವಿ ಸೂರ್ಯ ವಿರುದ್ಧ ಎಫ್‌ಐಆರ್ ದಾಖಲು



**ಬೆಂಗಳೂರು, ನ, 8;** ಪ್ರಸ್ತುತ ರಾಜ್ಯದಲ್ಲಿ ಭಾರಿ ಚರ್ಚೆಯಲ್ಲಿರುವ ವಕ್ಫ್ ಬೋರ್ಡ್ ಭೂವಿವಾದಕ್ಕೆ ಸಂಬಂಧಿಸಿದಂತೆ ಸುಳ್ಳು ಸುದ್ದಿಯನ್ನು ಹಂಚಿಕೊಂಡ ಆರೋಪದ ಮೇಲೆ ಸಂಸದ ತೇಜಸ್ವಿ ಸೂರ್ಯ ಹಾಗೂ ಕೆಲ ಕನ್ನಡ ನ್ಯೂಸ್ ವೆಬ್‌ಸೈಟ್ ಸಂಪಾದಕರ ವಿರುದ್ಧ ದೂರು ದಾಖಲಿಸಲಾಗಿದೆ. ಜಮೀನಿನ ಪಹಣಿಯಲ್ಲಿ ವಕ್ಫ್ ಹೆಸರು ನಮೂದಾಗಿದ್ದಕ್ಕೆ ಮನನೊಂದು ಹಾವೇರಿಯಲ್ಲಿ ರೈತರೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ನ್ಯೂಸ್ ವೆಬ್‌ಸೈಟ್ ಒಂದು ಮಾಡಿದ್ದ ವರದಿಯ ಸ್ಕ್ರೀನ್ ಶಾಟ್ ಅನ್ನು ಸಂಸದ ತೇಜಸ್ವಿ ಸೂರ್ಯ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದರು.

ಅಲ್ಲದೆ, ಹಾವೇರಿಯಲ್ಲಿ ತನ್ನ ಜಮೀನು ವಕ್ಫ್ ವಶವಾಗಿದೆ ಎಂದು ಮನನೊಂದು ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅಲ್ಪಸಂಖ್ಯಾತರನ್ನು ಓಲೈಸುವ ತರಾತುರಿಯಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಸಚಿವ ಜಮೀರ್ ಅಹಮದ್ ಕರ್ನಾಟಕದಲ್ಲಿ ದುರಂತ ಘಟನೆಗೆ ಸಾಕ್ಷಿಯಾಗಿದ್ದಾರೆ ಮತ್ತು ದಿನಗಳೆದಂತೆ ರೈತರು, ಹಿಂದೂಗಳ ಬದುಕು ದುಸ್ತರವಾಗುತ್ತಿದೆ ಎಂದು ತೇಜಸ್ವಿ ಸೂರ್ಯ ಆರೋಪಿಸಿದ್ದರು.

ಈ ಬಗ್ಗೆ ಹಾವೇರಿ ಜಿಲ್ಲಾ ಪೊಲೀಸ್ ಕಚೇರಿಯ ಸೋಶಿಯಲ್ ಮೀಡಿಯಾ ಮಾನಿಟರಿಂಗ್ ವಿಭಾಗ ಫ್ಯಾಕ್ಟ್‌ಚೆಕ್ ಮಾಡಿ, ರೈತ ಸಾವಿಗೀಡಾಗಿದ್ದು ಸಾಲಕ್ಕೆ ಹೆದರಿ ಹೊರತು, ಪಹಣಿಯಲ್ಲಿ ವಕ್ಫ್ ಬೋರ್ಡ್ ಸೇರಿದೆ ಎಂಬ ಕಾರಣಕ್ಕಲ್ಲ. ಇದು ಸುಳ್ಳು ಸುದ್ದಿ ಎಂದು ಹೇಳಿತ್ತು. ಇದಾದ ಬೆನ್ನಲ್ಲೇ ಸಂಸದ ತೇಜಸ್ವಿ ಸೂರ್ಯ ಅವರು ತಮ್ಮ ಪೋಸ್ಟ್ ಅನ್ನು ಡಿಲೀಟ್ ಮಾಡಿದ್ದರು. ಆದರೆ, ಈ ಬಗ್ಗೆ ಸೋಶಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್‌ನಲ್ಲಿ ಕೆಲಸ ಮಾಡುತ್ತಿರುವ ಸುನಿಲ್ ಹುಚ್ಚಣ್ಣನವರ ಎಂಬುವರು ನೀಡಿದ ದೂರಿನ ಮೇರೆಗೆ ಸಂಸದ ತೇಜಸ್ವಿ ಸೂರ್ಯ ಮತ್ತು ಘಟನೆಯ ಸತ್ಯಾಸತ್ಯತೆಯನ್ನು ತಿಳಿಯದೇ ಸುದ್ದಿ ಮಾಡಿದ ಕನ್ನಡದ ವೆಬ್‌ಸೈಟ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಈ ಬಗ್ಗೆ ಹಾವೇರಿ ಜಿಲ್ಲೆಯ ಸಿಇಎನ್ (ಸೈಬರ್ ಕ್ರೈಮ್, ಆರ್ಥಿಕ ಅಪರಾಧಗಳು, ಮಾದಕ ದ್ರವ್ಯ) ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

# ಹೈಕೋರ್ಟ್‌ಗೆ ದರ್ಶನ್ ಆರೋಗ್ಯದ ವರದಿ ಸಲ್ಲಿಕೆಗೆ ಷರತ್ತು



**ಬೆಂಗಳೂರು, ನ, 8 ;** ರೇಣುಕಾಸ್ವಾಮಿಯ ಕೊಲೆ ಪ್ರಕರಣದ 2ನೇ ಆರೋಪಿ ನಟ ದರ್ಶನ್‌ಗೆ ಹೈಕೋರ್ಟ್ ಆರೋಗ್ಯದ ಸಮಸ್ಯೆಯ ಕಾರಣದಿಂದ ಷರತ್ತುಬದ್ಧ 6 ವಾರಗಳ ಮಧ್ಯಂತರ ಜಾಮೀನು ಈಗಾಗಲೇ ನೀಡಿದೆ. ಆಸ್ಪತ್ರೆಗೆ ದಾಖಲಾಗಿದ ನಂತರ ಒಂದು ವಾರದಲ್ಲಿ ಹೈಕೋರ್ಟ್‌ಗೆ ದರ್ಶನ್ ಹೆಲ್ತ್ ರಿಪೋರ್ಟ್ ಸಲ್ಲಿಸುವಂತೆ ಕೋರ್ಟ್ ಕಂಡೀಷನ್ ಕೂಡಹಾಕಿತ್ತು. ಅದರಂತೆಯೇ ದರ್ಶನ್ ಪರ ವಕೀಲರು ಆ ವರದಿಯನ್ನು ನೀಡಿದ್ದು, ದರ್ಶನ್‌ಗೆ ಸರ್ಜರಿ ಬಗ್ಗೆ ಅಗತ್ಯತೆ ಕುರಿತು ಆರೋಗ್ಯ ವರದಿಯಲ್ಲಿ ಉಲ್ಲೇಖವಾಗಿಲ್ಲ ಎಂದು ತಿಳಿದುಬಂದಿದೆ. ಈ ವಿಚಾರವೇ ದರ್ಶನ್‌ಗೆ ಇದೀಗ ಮತ್ತೆ ಬಳ್ಳಾರಿ ಜೈಲಿಗೆ ಹೋಗುವ ಪರಿಸ್ಥಿತಿಯನ್ನು ತಂದೊಡ್ಡುವ ಆತಂಕಕ್ಕೆ ಕಾರಣವಾಗಿದೆ.

ದರ್ಶನ್‌ಗೆ ತೀವ್ರ ಬೆನ್ನುನೋವಿನ ಸಮಸ್ಯೆ ಇದ್ದು, ಸರ್ಜರಿಯೂ ಅಗತ್ಯ ಇದೆ ಎಂದು ದರ್ಶನ್ ಪರ ಹಿರಿಯ ವಕೀಲರಾದ ಸಿ.ವಿ. ನಾಗೇಶ್ ಅವರು ವಾದಿಸಿದ್ದರು. ಅದರಂತೆಯೇ ಕೋರ್ಟ್ ಕೂಡ ಮಧ್ಯಂತರ ಜಾಮೀನು ನೀಡಿತ್ತು. ಆದರೆ ಕೋರ್ಟ್‌ಗೆ ಸಲ್ಲಿಸಿರುವ ದರ್ಶನ್ ಹೆಲ್ತ್ ರಿಪೋರ್ಟನಲ್ಲಿ ಸರ್ಜರಿ ಬಗ್ಗೆ ಯಾವುದೇ ಉಲ್ಲೇಖವಿಲ್ಲಂತೆ. ಇನ್ನೊಂದೆಡೆ ಈ ವಿಚಾರವನ್ನೇ ಮುಂದಿಟ್ಟುಕೊಂಡು ದರ್ಶನ್ಮಧ್ಯಂತರ ಜಾಮೀನು ಪ್ರಶ್ನಿಸಿ ಪೊಲೀಸರು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ತಯಾರಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಇನ್ನು ಜೂ.21ರಂದು ದರ್ಶನ್ ಸಲ್ಲಿಸಿರುವ ನಿಯಮಿತ ಜಾಮೀನು ಅರ್ಜಿಯ ವಿಚಾರಣೆ ಹೈಕೋರ್ಟ್‌ನಲ್ಲಿ ನಡೆಯಲಿದೆ.

# ರೋಪ್ ವೇ, ಪಂಚತಾರಾ ಹೋಟೆಲ್ ನಿರ್ಮಾಣ ಮಾಡಲು ಅರಣ್ಯ ಇಲಾಖೆ ಹಸಿರು ನಿಶಾನೆ

**ಬೆಂಗಳೂರು, ನ, 8 :** ಕರ್ನಾಟಕದ ಪ್ರಮುಖ ಆಕರ್ಷಣೀಯ ಸ್ಥಳಗಳಲ್ಲಿ ಒಂದಾದ ಜೋಗ ಜಲಪಾತದ ಬಳಿ ರೋಪ್ ವೇ ಹಾಗೂ ಪಂಚತಾರಾ ಹೋಟೆಲ್ ನಿರ್ಮಾಣ ಮಾಡಲು ಅರಣ್ಯ ಇಲಾಖೆ ಹಸಿರು ನಿಶಾನೆ ತೋರಿಸಿದೆ. ಭಾರತದ ಅತಿ ಎತ್ತರದ ಜಲಪಾತಗಳಲ್ಲಿ ಒಂದಾದ ಕರ್ನಾಟಕದ ಶಿವಮೊಗ್ಗ ಜಿಲ್ಲೆಯಲ್ಲಿರುವ ಜೋಗ ಜಲಪಾತವನ್ನು ಕಣ್ತುಂಬಿಕೊಳ್ಳಲು ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಜನ ಆಗಮಿಸುತ್ತಾರೆ.

ಪ್ರವಾಸವನ್ನು ಉತ್ತೇಜಿಸುವ ಉದ್ದೇಶದಿಂದ ಈ ಸ್ಥಳದಲ್ಲಿ ರೋಪ್ ವೇ ಹಾಗೂ ಪಂಚತಾರಾ ಹೋಟೆಲ್ ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ.ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ನೋಡೆಲ್ ಅಧಿಕಾರಿ ಬ್ರಿಜೇಶ್ ಕುಮಾರ್ ಅವರು ಅರಣ್ಯ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರಿಗೆ ಪತ್ರ ಬರೆದು ಅನುಮತಿ ಕೋರಿದ್ದರು. ಐದು ಹೆಕ್ಟೆರ್ ಒಳಗಿನ ಅರಣ್ಯ ಭೂಮಿಯನ್ನು ಪರಿವರ್ತನೆ ಯೋಜನೆಗಳಿಗೆ ಅರಣ್ಯ ಪಡೆ ಮುಖ್ಯಸ್ಥರ ಶಿಫಾರಸ್ಸು ಇಲ್ಲದೆಯೇ ರಾಜ್ಯ ಸರ್ಕಾರಕ್ಕೆ ನೇರವಾಗಿ ಶಿಫಾರಸು ಮಾಡುವ ಅಧಿಕಾರ ನೋಡಲ್ ಅಧಿಕಾರಿಗೆ ಇದೆ ಎಂದು ಅರಣ್ಯ ಕಾಯ್ದೆ ಹೊಸ ತಿದ್ದುಪಡಿ ಹೇಳುತ್ತದೆ.

ಹೀಗಾಗಿ ಅರಣ್ಯ ಇಲಾಖೆ ಪಂಚತಾರಾ ಹೋಟೆಲ್ ಹಾಗೂ ರೋಪ್ ವೇಗೆ ಅನುಮತಿ ನೀಡಿದೆ. ಜೋಗ ಜಲಪಾತದ ಬಳಿ ರೋಪ್ ವೇ ಹಾಗೂ ಪಂಚತಾರಾ ಹೋಟೆಲ್ ನಿರ್ಮಾಣದಿಂದ ಮರಗಳು, ವನ್ಯ ಜೀವಿಗಳಿಗೆ ತೊಂದರೆಯಾಗುವುದಿಲ್ಲ ಎಂದು ಹೇಳಲಾಗಿದೆ.ಪಶ್ಚಿಮ ಘಟ್ಟದ ಜೋಗ ಜಲಪಾತದ ಬಳಿ ಪರಿಸರ ಪ್ರವಾಸೋದ್ಯಮಕ್ಕಾಗಿ, ಪಂಚತಾರಾ ಹೋಟೆಲ್ ನಿರ್ಮಿಸಲು ಜೋಗ ಜಲಪಾತ ನಿರ್ವಹಣಾ ಪ್ರಾಧಿಕಾರವು ಕರ್ನಾಟಕ ಅರಣ್ಯ ಇಲಾಖೆಗೆ ಸಲ್ಲಿಸಿದ ಪ್ರಸ್ತಾವನೆ ಬಗ್ಗೆ ಪರಿಸರ ಸಂರಕ್ಷಣಾ ತಜ್ಞರು ಮತ್ತು ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದಾರೆ.ಜಲವಿದ್ಯುತ್ ಯೋಜನೆಗಳು, ಆಣೆಕಟ್ಟುಗಳು, ರಸ್ತೆಗಳು, ರೈಲುಮಾರ್ಗಗಳು ಸೇರಿದಂತೆ ವಿವಿಧ ಸೌಕರ್ಯ ಯೋಜನೆಗಳಿಂದ ಶರಾವತಿ ಕಣಿವೆ ಈಗಾಗಲೇ ಅಪಾಯದಲ್ಲಿದೆ. ಹೀಗಾಗಿ ಈ ಪ್ರದೇಶದಲ್ಲಿ ಹೋಟೆಲ್ ಹಾಗೂ ರೋಪ್ ಗೆ ಅವಕಾಶ ನೀಡಬಾರದು ಎಂದು ಪರಿಸರವಾದಿಗಳು ವಿರೋಧಿಸಿದ್ದರು.ಈ ರುದ್ರರಮಣೀಯ ಜಲಪಾತ ಮಳೆಗಾಲದಲ್ಲಿ ತನ್ನ ನಿಜವಾದ ಸೌಂದರ್ಯವನ್ನು ಎಲ್ಲೆಡೆ ಹರಡುವ ಮೂಲಕ ದೇಶದ ಹಾಗೂ ವಿದೇಶದ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತದೆ.

ವಿಶೇಷವಾಗಿ ಪ್ರೇಮಿಗಳು ಈ ಸ್ಥಳಕ್ಕೆ ಹೆಚ್ಚಾಗಿ ಆಗಮಿಸುತ್ತಾರೆ. ಅಲ್ಲದೆ ಮಳೆಗಾಲದಲ್ಲಿ ಜಲಪಾತದ ನೋಟವನ್ನು ಕಣ್ತುಂಬಿಕೊಳ್ಳಲು ಕುಟುಂಬದ ಜೊತೆ ಆಗಮಿಸಲು ಜನ ಹೆಚ್ಚು ಆಸಕ್ತಿ ತೋರಿಸುತ್ತಾರೆ. ದಟ್ಟವಾದ ನಿತ್ಯ ಹರಿದ್ವರ್ಣ ಕಾಡುಗಳಲ್ಲಿ ನೆಲೆಗೊಂಡಿರುವ ಈ ಜಲಪಾತ, ರಾಕೆಟ್, ರೋರರ್, ರಾಜ, ರಾಣಿ ಎಂಬ ವಿಭಾಗಗಳನ್ನು ಸೃಷ್ಟಿಸುವ ಮೂಲಕ ಗಮನಾರ್ಹವಾದ ಸೌಂದರ್ಯಕ್ಕೆ ಸಾಕ್ಷಿಯಾಗಿದೆ. ಈ ಜಲಪಾತದ ವಿಶೇಷ ಅಂದರೆ ಇದು ಬಂಡೆಗಳ ಮೇಲೆ ಹರಿಯದೆ ನೇರವಾಗಿ ಕೆಳಗೆ ಧುಮ್ಮಿಕ್ಕುತ್ತದೆ. ಇದನ್ನು ನೋಡಲು ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಾರೆ.ಈ ಸ್ಥಳವನ್ನು ಮತ್ತಷ್ಟು ಅಂದವಾಗಿಸಲು ಹಾಗೂ ಪ್ರವಾಸಿಗರಿಗೆ ಅನುಕೂಲವನ್ನು ಒದಗಿಸಿಕೊಡಲು ಪಂಚತಾರಾ ಹೋಟೆಲ್ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಅಲ್ಲದೆ ಪ್ರವಾಸಿಗರಿಗೆ ಜೋಗ ಜಲಪಾತವನ್ನು ಹತ್ತಿರದಿಂದ ಕಣ್ತುಂಬಿಕೊಳ್ಳಲು ರೋಪ್ ವೇ ನಿರ್ಮಾಣಕ್ಕೂ ವ್ಯವಸ್ಥೆ ಮಾಡಲಾಗುತ್ತಿದೆ. ಎಲ್ಲವೂ ಅಂದುಕೊಂಡಂತೆ ಆದರೆ ಮುಂಬರುವ ವರ್ಷ ನಿರ್ಮಾಣ ಕಾರ್ಯ ಆರಂಭವಾಗಬಹುದು ಎನ್ನಲಾಗುತ್ತಿದೆ.

# ಎಲ್ಲರೂ ಧರ್ಮವನ್ನು ಸರಿಯಾಗಿ ಅರ್ಥೈಸಿಕೊಂಡರೆ ಸಮಾಜದ ಸಾಮರಸ್ಯ ಕಾಪಾಡಲು ಸಾಧ್ಯ




**ಬೆಂಗಳೂರು, ನ, 8 :** ಹಗಲಿನಲ್ಲಿ ಸೂರ್ಯ, ಇರುಳಿನಲ್ಲಿ ಚಂದ್ರನು ಬೆಳಕು ನೀಡುವಂತೆ ಸದಾ ಕಾಲ ಮನುಷ್ಯನು ನಡೆದು ಹೋಗುವ ದಾರಿಯಲ್ಲಿ ಬೆಳಕು ನೀಡುವುದು ಧರ್ಮ ಎಂದು ಶ್ರೀರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಿಸಿದ್ದಾರೆ. ನಗರದ ಐತಿಹಾಸಿಕ ತಿಂಡ್ಲು ಶ್ರೀವೀರಭದ್ರೇಶ್ವರ ದೇವಾಲಯ ನೂತನ ರಾಜಗೋಪುರದ ಕಳಸಾರೋಹಣ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಧರ್ಮ ಹುಟ್ಟಿದ ಪ್ರತಿಯೊಬ್ಬ ವ್ಯಕ್ತಿಗೂ ಬೇಕಾಗಿರುವ ಜೀವನದ ಒಂದು ವಿಧಾನ. ಧರ್ಮ ಎಂದರೆ ಜಾತಿ, ಮತ ಎಂಬ ತಪ್ಪು ಕಲ್ಪನೆಯಿಂದ ನಡೆಯುತ್ತಿರುವ ಸಂಘರ್ಷಗಳು ಸಮಾಜದ ಸ್ವಾಸ್ಥ್ಯವನ್ನು ಹಾಳುಗೆಡುವುತ್ತಿವೆ. ಆದರೆ ಎಲ್ಲರೂ ಧರ್ಮವನ್ನು ಸರಿಯಾಗಿ ಅರ್ಥೈಸಿಕೊಂಡು ನಡೆದಿದ್ದಾದರೆ ಸಮಾಜದ ಸಾಮರಸ್ಯವನ್ನು ಕಾಪಾಡಲು ಸಾಧ್ಯ. ತಿಂಡ್ಲು ಸೇರಿ ನಾಡಿನ ನಾನಾ ಭಾಗಗಳಲ್ಲಿರುವ ಪ್ರಾಚೀನ ವೀರಭದ್ರ ಕ್ಷೇತ್ರಗಳ ಮೂಲಸೆಲೆ ಶ್ರೀರಂಭಾಪುರಿ ಪೀಠದಲ್ಲಿ ಪೂಜೆಗೊಳ್ಳುವ ಕ್ಷೇತ್ರನಾಥ, ಗ ೋ ತ್ರ ಪ್ರ ರ ಂ ಷ ವೀರಭದ್ರಸ್ವಾಮಿಯಾಗಿದ್ದಾನೆ.

ಪಂಚಪೀಠಗಳು ಈ ನಾಡಿನ ಭಕ್ತಸಮುದಾಯಕ್ಕೆ ಸದಾ ಧರ್ಮ-ಸಂಸ್ಕಾರವನ್ನು ನೀಡುವ ಕಾರ್ಯವನ್ನು ಮಾಡುತ್ತಿದ್ದು, ಪಂಚಪೀಠಗಳ ಗೋತ್ರ-ಸೂತ್ರಗಳ ಪರಂಪರೆ ಅದಕ್ಕೆ ಪೂರಕವಾಗಿದೆ.ಮನುಷ್ಯ ಎಷ್ಟೇ ಹಣ, ಆಸ್ತಿ, ಅಂತಸ್ತು ಸಂಪಾದನೆ ಮಾಡಿದರೂ, ಜೀವನಕ್ಕೆ ಬೇಕಾದ ಮೂಲ ಅವಶ್ಯಕತೆಗಳನ್ನು ಸೃಷ್ಟಿಸಿಕೊಳ್ಳುವುದಕ್ಕೆ ಸಾಧ್ಯವಿಲ್ಲ. ಅನ್ನ, ನೀರು, ಗಾಳಿ, ಬೆಳಕು ಇತ್ಯಾದಿ ಮೂಲ ವಸ್ತುಗಳನ್ನು ನೀಡಿರುವ ಭಗವಂತನ ಮುಂದೆ ಯಾವ ಸಂಪತ್ತು ಸರಿದೂಗಲಾರದು. ಅಂತಹ ಮಹದುಪಕಾರ ಮಾಡಿದ ಭಗವಂತನನ್ನು ದಿನಕ್ಕೆ ಎರಡು ನಿಮಿಷವಾದರೂ ಪೂಜಿಸದಿದ್ದರೆ ಮನುಷ್ಯನಾಗಿ ಹುಟ್ಟಿದ್ದು ವ್ಯರ್ಥವಾಗುತ್ತದೆ ಎಂದು ಜಗದ್ಗುರುಗಳು ಕಿವಿಮಾತು ಹೇಳಿದರು. ಸಮಾರಂಭದಲ್ಲಿ ದೊಡ್ಡಗುಣಿ ಮಠದ ಶ್ರೀರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ನಾಗಲಾಪುರ ಮಠದ ಶ್ರೀ ತೇಜೇಶಲಿಂಗ ಶಿವಾಚಾರ್ಯ ಸ್ವಾಮಿಗಳು, ಎಸ್ಜೆಆರ್ ಕಾಲೇಜಿನ ಅಧ್ಯಕ್ಷ ಯು.ಎಂ. ಬಸವರಾಜ್, ಕಾಯಕ್ರಮದ ಸಂಘಟಕರು ಸಂತೋಷ ಕುಮಾರ್ ಮತ್ತು ದೇವಾಲಯ ಸಮಿತಿ ಪದಾಧಿಕಾಗಳು ಉಪಸ್ಥಿತರಿದ್ದರು.

# ಅಮೃತ ಕಲಾಮಂದಿರಕ್ಕೆ 15ನೇ ವಾರ್ಷಿಕೋತ್ಸವದ ಸಂಭ್ರಮ

ಭರತನಾಟ್ಯ ಕ್ಷೇತ್ರದಲ್ಲಿ ಹಲವಾರು ವರ್ಷಗಳಿಂದ ಸಾಧನೆ ಮಾಡುತ್ತಾ ಖ್ಯಾತಿ ಗಳಿಸಿರುವ ವಿದುಷಿ. ಹೆಚ್. ಹರಿಣಿ ಅವರ ಹೆಸರು ಬದ್ಧತೆಯ ನೃತ್ಯ ಗುರುವಾಗಿ, ಉತ್ತಮ ಕಲಾವಿದೆಯಾಗಿ ಮನೆ ಮಾತಾಗಿದೆ. ನೃತ್ಯಾಭಿನಯದ ವೈಶಿಷ್ಟ್ಯತೆಯಿಂದ ದೇಶದಾದ್ಯಂತ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿರುವ ಹರಿಣಿ ಅವರು ಈಗಾಗಲೇ ಅಸಂಖ್ಯಾತ ನೃತ್ಯ ಕಲಾವಿದರಿಗೆ ಮಾರ್ಗದರ್ಶಕರಾಗಿ ಹೊಸ ಪ್ರತಿಭೆಗಳಿಗೆ ಉತ್ತಮ ತರಬೇತಿ ನೀಡಿ ಉದಯೋನ್ಮುಖ ಕಲಾವಿದರನ್ನು ರೂಪಿಸುತ್ತಿದ್ದಾರೆ. ಈಗಾಗಲೇ ಅನೇಕ ಪ್ರಶಸ್ತಿಗಳಿಂದ



ಪುರಸ್ಕೃತರಾದ ಹರಿಣಿ ಯುವ ಕಲಾವಿದರಿಗೆ ಉತ್ತಮ ಮೇಲ್ಪಂಕ್ತಿಯನ್ನು ಹಾಕಿಕೊಟ್ಟಿದ್ದಾರೆ. ಬಾಲ ಪ್ರತಿಭೆಯಾಗಿದ್ದಾಗಿನಿಂದ ಕಲಾರಸಿಕರ ಗಮನ ಸೆಳೆದಿರುವ ವಿ. ಹರಿಣಿ ನೇತೃತ್ವದ ಅಮೃತ ಕಲಾ ಮಂದಿರ ಕಳೆದ 15 ವರ್ಷಗಳಿಂದ ನಿರಂತರವಾಗಿ ನೃತ್ಯ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದ್ದು, ಉದಯೋನ್ಮುಖ ಕಲಾವಿದರಿಗೆ ವೇದಿಕೆಗಳನ್ನು ಒದಗಿಸಿ ಪ್ರೋತ್ಸಾಹ ನೀಡುತ್ತ ಬಂದಿದೆ. ಹಲವಾರು ರಂಗಪ್ರವೇಶಗಳನ್ನೂ ಮಾಡಿಸಿರುವ ಹರಿಣಿ, ಇದೀಗ ಇದೇ ತಿಂಗಳ 9 ನೇ ತಾ. ಶನಿವಾರ ಸಂಜೆ 4. 30 ಕ್ಕೆ ನಯನ ಆಡಿಟೋರಿಯಂ ನಲ್ಲಿ ತಮ್ಮ ನೃತ್ಯಸಂಸ್ಥೆ ಅಮೃತ ಕಲಾ ಮಂದಿರದ 15 ನೇ ವಾರ್ಷಿಕೋತ್ಸವದ ನೃತ್ಯ ಸಂಭ್ರಮವನ್ನು ಹಮ್ಮಿಕೊಂಡಿದ್ದಾರೆ. ಅಂದು-ವಿವಿಧ ವಯೋಮಾನದ ಕಲಾವಿದರ ಪ್ರತಿಭೆಯ ಅನಾವರಣವಾಗಲಿದ್ದು, ಸುಮನೋಹರ ನೃತ್ಯಾವಳಿಗಳಿಂದ ಕಲಾರಸಿಕರ ಕಣ್ಮನ ತುಂಬುವ ಈ ವರ್ಣರಂಜಿತ ಕಾರ್ಯಕ್ರಮಕ್ಕೆ ಎಲ್ಲರಿಗೂ ಸುಸ್ವಾಗತ.

**– ವೈ.ಕೆ. ಸಂಧ್ಯಾ.**



ಬಂಗಾರಪೇಟೆಯಲ್ಲಿ ಶುಕ್ರವಾರ ನೆಲಮಹಡಿ ನವೀಕರಣದ ವೇಳೆ ಮೂರು ಅಂತಸ್ತಿನ ಕಟ್ಟಡ ಕುಸಿದು ಬಿದ್ದಿದೆ. ಅದೃಷ್ಟವಶಾತ್, ಕಟ್ಟಡವು ಕಳೆದ ಎರಡು ತಿಂಗಳಿಂದ ಖಾಲಿಯಾಗಿತ್ತು ಮತ್ತು ಅಲ್ಲಿ ವಾಸಿಸುತ್ತಿದ್ದ ಎಲ್ಲಾ ಮೂರು ಕುಟುಂಬಗಳನ್ನು ಅಗ್ನಿಶಾಮಕ ಸಿಬ್ಬಂದಿ ರಕ್ಷಿಸಿದ್ದಾರೆ.

# ಶೃಂಗೇರಿ ಮಠ ಸಲ್ಲಿಸಿದ್ದ ಮೇಲ್ಮನವಿ ಪರಿಗಣಿಸಿ ಯಥಾಸ್ಥಿತಿ ಕಾಯ್ದುಕೊಳ್ಳಲು ತುಷಾರ್ ಗಿರಿನಾಥ್ ಸೂಚನೆ



**ಬೆಂಗಳೂರು, ನ, 8 :** ಪಾಲಿಕೆಯಿಂದ ನೋಟಿಸ್ ಪಡೆದಿದ್ದ ಶಂಕರಪುರದ ಜ್ಞಾನೋದಯ ಶಾಲೆಯ ಮೇಲಿದ್ದ ಅನಧಿಕೃತ ಕಟ್ಟಡದ ತೆರವುಗೊಳಿಸುವ ತೂಗುಕತ್ತಿ ದೂರ ಸರಿದಿದ್ದು, ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಗುರುವಾರ ಆದೇಶ ಹೊರಡಿಸಿದ್ದಾರೆ.

ಶೃಂಗೇರಿ ಮಠಕ್ಕೆ ಸೇರಿದ ಜಾಗದಲ್ಲಿ ನಿರ್ಮಿಸಲಾಗಿರುವ ಶಾಲೆ ಹಾಗೂ ಕಾಲೇಜು ಕಟ್ಟಡದಲ್ಲಿ ಒಂದಿಷ್ಟು ಭಾಗವು ಅನಧಿಕೃತವಾಗಿದ್ದು, ಇವುಗಳನ್ನು ತೆರವುಗೊಳಿಸುವುದಾಗಿ ಪಾಲಿಕೆಯು ನೋಟಿಸ್ ಜಾರಿ ಮಾಡಿತ್ತು.ಜತೆಗೆ ತೆರವುಗೊಳಿಸುವ ಸಂಬಂಧ ಪೊಲೀಸ್ ಠಾಣೆಗೆ ರಕ್ಷಣೆ ಕೋರಿದ್ದ ಪತ್ರದ ಸಂಬಂಧ ಪಾಲಿಕೆ ಹಿರಿಯ ಅಧಿಕಾರಿಗಳು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಅನಧಿಕೃತ ಭಾಗವಿದ್ದಲ್ಲಿ ಸ್ಥಳ ಪರಿಶೀಲನೆ ಮಾಡಿ ನಂತರ ಕ್ರಮ ಕೈಗೊಳ್ಳಬೇಕಿತ್ತು. ಆದರೆ, ನಿಯಮದಂತೆ ಸ್ಥಳಪರಿಶೀಲನೆ ಮಾಡದೆ ಏಕಾಏಕಿ ಪೊಲೀಸ್ ಠಾಣೆಗೂ ಪತ್ರ ಬರೆದಿದ್ದಕ್ಕೆ ತರಾಟೆಗೆ ತೆಗೆದುಕೊಂಡಿದ್ದರು. ಶೃಂಗೇರಿ ಮಠವು ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ಪರಿಗಣಿಸಿ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಆದೇಶಿಸಿದ್ದಾರೆ. ಈ ವಿಷಯವನ್ನು ಪಾಲಕರಿಗೂ ತಿಳಿಸಿದ್ದು, ಅವರಲ್ಲಿ ಮನೆಮಾಡಿದ್ದ ಆತಂಕ ದೂರವಾಗಿದೆ. ಶಾಲೆ ಎಂದಿನಂತೆ ಕಾರ್ಯನಿರ್ವಹಿಸುತ್ತಿದೆ ಎಂದು ಶಾಲೆಯ ಪ್ರಮುಖರು ತಿಳಿಸಿದ್ದಾರೆ.

# ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ತನಿಖೆ: ಚಾರ್ಜ್‌ಶೀಟ್‌ನಲ್ಲಿ ಪಾಕಿಸ್ತಾನದ ನಂಟಿನ ಉಲ್ಲೇಖ

**ಬೆಂಗಳೂರು, ನ. 8 :** ವೈಟ್ ಫೀಲ್ಡ್ ನ ಬ್ರೂಕ್ ಫೀಲ್ಡ್ ನ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ತನಿಖೆ ಮಾಡಿದ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ನ್ಯಾಯಾಲಯಕ್ಕೆ ಸಲ್ಲಿಸಿರುವ ಚಾರ್ಜಿಶೀಟ್‌ನಲ್ಲಿ ಪಾಕಿಸ್ತಾನದ ನಂಟಿರುವ ಆತಂಕಕಾರಿ ಮಾಹಿತಿ ಉಲ್ಲೇಖವಾಗಿದೆ. ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣಕ್ಕೆ ಪಾಕಿಸ್ತಾನದ ನಂಟಿದ್ದು, ಪಾಕ್ ಮೂಲದ ಶಂಕಿತ ಉಗ್ರ ಎ6 ಫೈಸಲ್ ಸದ್ಯ ಪಾಕಿಸ್ತಾನದಲ್ಲಿದ್ದಾನೆ ಎನ್ನಲಾಗಿದೆ. ಮಂಗಳೂರು ಕುಕ್ಕರ್ ಸ್ಫೋಟದ ಬಳಿಕ ತಾಹಾ ಮತ್ತು ಶಾಜಿಬ್ ನಾಪತ್ತೆಯಾಗಿದ್ದರು. ಕೆಲಕಾಲದ ಬಳಿಕ ಮತ್ತೆ ವಾಪಾಸ್ ಬೆಂಗಳೂರಿಗೆ ಬಂದಿದ್ದರು. ಆಗ ಮುಜಾಮಿಲ್ ಷರೀಫ್ ಜೊತೆಗೆ ಪರಿಚಯವಾಗಿತ್ತು. ಮುಜಾಮಿಲ್ ಮೆಜೆಸ್ಟಿಕ್ ಬಳಿಯ ಹೋಟೆಲ್ ಒಂದರಲ್ಲಿ ಕೆಲಸ ಮಾಡುತ್ತಿದ್ದ. ಇದೇ ಮುಜಾಮಿಲ್ ಷರೀಫ್‌ನ ತಾಹಾ ಮತ್ತು ಶಾಜಿಬ್ ಮನಪರಿವರ್ತಿಸಿ ಐಸಿಸ್‌ಗೆ ಸೇರ್ಪಡೆ ಮಾಡಿದ್ದರು. ಮೊದಲ ಹಂತದಲ್ಲಿ ಕೆಲವು ದುಷ್ಕೃತ್ಯ ನಡೆಸಲು ಮುಜಾಮಿಲ್‌ಗೆ ತಾಹಾ ಮತ್ತು ಶಾಜಿಬ್ ಟಾಸ್ಕ್ ನೀಡಿದ್ದರು.

**ಬಿಜೆಪಿ ಕಚೇರಿ ಪ್ಲಾನ್ ಟುಸ್:** ಉಗ್ರರು 2023 ಡಿಸೆಂಬರ್‌ನಲ್ಲಿ ಬೆಂಗಳೂರಲ್ಲಿ ಬಾಂಬ್ ಸ್ಫೋಟ ನಡೆಸಲು ಸಂಚು ಹೂಡಿದ್ದರು. ಆನ್‌ಲೈನ್ ಹ್ಯಾಂಡ್ಲರ್ ಮೂಲಕ ಈ ಸೂಚನೆ ಬಂದಿತ್ತು. ಜ. 22, 2024ರಂದು ಆಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಇದೆ. ಅಂದೇ ಸ್ಫೋಟ ನಡೆಸಿ ಎಂಬ ಸೂಚನೆ ಇತ್ತು. ಈ ಹಿನ್ನೆಲೆಯಲ್ಲಿ ಮಲ್ಲೇಶ್ವರಂ ಬಿಜೆಪಿ ಕಚೇರಿ ಗುರಿಯಾಗಿಸಿಕೊಂಡಿದ್ದ ಶಾಜಿಬ್. ಹೀಗಾಗಿ ಬೆಂಗಳೂರಿನಿಂದ ಚೆನ್ನೈಗೆ ಜಾಗ ಬದಲಿಸಿದ್ದ. ಟ್ರಿಪ್ಲಿಕೇನ್ ಎಂಬಲ್ಲಿ ಬಾಡಿಗೆ ಮನೆಯಲ್ಲಿದ್ದುಕೊಂಡೆ ಐಇಡಿ ಬಾಂಬ್ ತಯಾರಿಕೆ ಮಾಡಿ 2024 ಜನವರಿ 22ರಂದು ಬೆಳಗ್ಗೆ ಐಇಡಿ ಬಾಂಬ್ ತೆಗೆದುಕೊಂಡು ಬೆಂಗಳೂರಿಗೆ ಬಂದಿದ್ದ ಶಾಜಿಬ್, ಬಿಜೆಪಿ ಕಚೇರಿ ಮುಂಭಾಗದಲ್ಲಿ ಬಾಂಬ್ ಇಡಲು ಸಂಚು ಹೂಡಿದ್ದ. ಹೆಚ್ಚಿನ ಭದ್ರತೆ ಹಿನ್ನೆಲೆಯಲ್ಲಿ ಬಿಜೆಪಿ ಕಚೇರಿ ಹಿಂಭಾಗದಲ್ಲಿ ಬಾಂಬ್ ಇಟ್ಟು 90 ನಿಮಿಷಕ್ಕೆ ಟೈಮರ್ ಸೆಟ್ ಮಾಡಿದ್ದನಾದರೂ ಬಾಂಬ್ ಸ್ಫೋಟವಾಗಲಿಲ್ಲ. ಬಾಂಬ್ ಇಟ್ಟವನೇ ಚೆನ್ನೈಗೆ ಪರಾರಿಯಾಗಿದ್ದ. ಬಾಂಬ್ ಸ್ಫೋಟವಾಗುವುದಿರಲಿ, ಕನಿಷ್ಠಪಕ್ಷ ಆ ಬಾಂಬ್ ಪತ್ತೆಯೂ ಆಗಿರಲಿಲ್ಲ.

**ಒಂದೇ ವಾರದಲ್ಲಿ ಬಾಂಬ್:** ಮಲ್ಲೇಶ್ವರಂನ ಬಿಜೆಪಿ ಕಚೇರಿಯಲ್ಲಿ ಹಿಂಭಾಗ ಇಟ್ಟಿದ್ದ ಬಾಂಬ್ ಸ್ಫೋಟಗೊಳ್ಳದ ಹಿನ್ನೆಲೆಯಲ್ಲಿ ಮತ್ತೆ ಜನನಿಬಿಡ ಪ್ರದೇಶದಲ್ಲಿ ಬಾಂಬ್ ಸ್ಫೋಟಕ್ಕೆ ಸಂಚು ಮಾಡಿ ಅಂತಿಮವಾಗಿ ಫೆಬ್ರವರಿ ತಿಂಗಳಲ್ಲಿ ಐಇಡಿ ಬಾಂಬ್ ತಯಾರಿಸಿ, ಫೆಬ್ರವರಿ 29ರಂದು ಶಾಜಿಬ್ ಚೆನ್ನೈನಿಂದ ಬೆಂಗಳೂರಿಗೆ ಬಂದು ಕೆ.ಆರ್. ಪುರಂ ಟಿನ್ ಫ್ಯಾಕ್ಟರಿ ಬಳಿ ಇಳಿದು, ಕುಂದಲಹಳ್ಳಿಗೆ ಬಂದು ರಾಮೇಶ್ವರಂ ಕೆಫೆಯಲ್ಲಿ ಐಇಡಿ ಬಾಂಬ್ ಇಟ್ಟಿದ್ದರ ಬಗ್ಗೆ ಎನ್‌ಐಎ ಎಳೆ ಎಳೆಯಾಗಿ ಚಾರ್ಜ್ ಶೀಟ್‌ನಲ್ಲಿ ಬಿಚ್ಚಿಟ್ಟಿದೆ.

# ಕಂಬಾಲಪಲ್ಲಿಯ 7 ದಲಿತರ ಸಜೀವ ದಹನ ಘಟನೆ ಮರೆಯಲಾಗದ್ದು: ಕೃಷ್ಣಪ್ಪ





**ಬೆಂಗಳೂರು, ನ, 8 :** ಅಂತೆ ಕಂತೆಗಳ ಪತ್ರಿಕೋದ್ಯಮಕ್ಕೆ ನಾವಾಗಿಯೇ ಕಡಿವಾಣ ಹಾಕಿಕೊಳ್ಳದಿದ್ದರೆ, ಮಾಧ್ಯಮಗಳ ಮೇಲಿನ ವಿಶ್ವಾಸರ್ಹತೆ ಇನ್ನೂ ಕಡಿಮೆಯಾಗಲಿದೆ ಎಂದು ಹಿರಿಯ ಪತ್ರಕರ್ತ ಆರ್.ಕೃಷ್ಣಪ್ಪ ಆತಂಕ ವ್ಯಕ್ತಪಡಿಸಿದಾರೆ. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಿಂದ ಮನೆಯಂಗಳದಲ್ಲಿ ಮನದುದುಂಬಿ ಕಾರ್ಯಕ್ರಮದಲ್ಲಿ ಕೆಯುಡಬ್ಲೂಜೆ ಗೌರವ ಸ್ವೀಕರಿಸಿ ಮಾತನಾಡಿದರು. ಯಾವುದೇ ಸುದ್ದಿಯಾಗಿರಲಿ ಅದರ ವಿಶ್ವಾಸರ್ಹತೆ ಬಹಳ ಮುಖ್ಯ. ಸುದ್ದಿ ಸಿಕ್ಕ ತಕ್ಷಣವೇ ಅದರ ಪೂರ್ವಾಪರತೆಯನ್ನು ನೋಡಬೇಕು. ಸುದ್ದಿ ನಿಖರತೆಯನ್ನು ಮೊದಲು ಸ್ಪಷ್ಟಪಡಿಸಿಕೊಳ್ಳಬೇಕು.

ಕೋಲಾರ ಜಿಲ್ಲೆಯ ಕಂಬಾಲಪಲ್ಲಿಯಲ್ಲಿ 7 ದಲಿತರನ್ನು ಜೀವಂತ ದಹಿಸಿದ ಘಟನೆಯನ್ನು ನಾನೇ ಖುದ್ದು ವರದಿ ಮಾಡಿದ್ದೇನೆ. ಒಂದೇ ಕೋಮಿನ ಎರಡು ಗುಂಪುಗಳ ನಡುವೆ ಘರ್ಷಣೆಯಾಗಿ ರಿಂಗ್ ನಡೆದಾಗ ನಾನು ಸಾಕ್ಷಿಯಾಗಿದ್ದು ವರಿದಿ ಮಾಡಿದ್ದೆ ಎಂದು ವೃತ್ತಿ ಬದುಕನ್ನು ನೆನಪಿಸಿಕೊಂಡರು. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿದ ಅವರು, ಒಂದೇ ಪತ್ರಿಕೆಯಲ್ಲಿ 40 ವರ್ಷಗಳ ಕಾಲ ಕೆಲಸ ಮಾಡಿ ನಿವೃತ್ತರಾಗುವುದು ಅಪರೂಪ. ಆರ್. ಕೃಷ್ಣಪ್ಪ ಅವರು ಪ್ರಜಾವಾಣಿಯಲ್ಲಿಯೇ ಸುದೀರ್ಘ ಅವಧಿಯ ವೃತ್ತಿ ಜೀವನ ಸಾಗಿಸುವ ಮೂಲಕ ಅಪರೂಪದ ಪತ್ರಕರ್ತರಾಗಿ ಸುದ್ದಿಮನೆಯಲ್ಲಿ ಗುರುತಿಸಿ ಕೊಂಡಿರುವುದು ಅಭಿನಂದನೀಯ ಎಂದು ಹೇಳಿದರು. ಕೋಲಾರವಾಣಿ ಪತ್ರಿಕೆ ಸಂಪಾದಕ ಬಿ.ಎನ್. ಮುರುಳಿ ಪ್ರಸಾದ್ ಮಾತನಾಡಿದ ಅವರು, ಕೆಯುಡಬ್ಲೂಜೆ ವತಿಯಿಂದ ಮನೆಯಂಗಳದಲ್ಲಿಯೇ ಹಿರಿಯ ಪತ್ರಕರ್ತರನ್ನು ಗೌರವಿಸುತ್ತಿರುವುದು ಅಭಿನಂದನೀಯ ಕೆಲಸ. ಪತ್ರಕರ್ತರು ಆರ್. ಕೃಷ್ಣಪ್ಪ ಅವರು ಕೋಲಾರದಲ್ಲಿ ಸಲ್ಲಿಸಿದ ಸೇವೆ ಅನನ್ಯವಾದದ್ದು ಎಂದು ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ. ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಬೆಂಗಳೂರು ನಗರ ಘಟಕದ ಶರಣ ಬಸಪ್ಪ ಈ ಸಂದರ್ಭದಲ್ಲಿ ಹಾಜರಿದ್ದರು.

# ರಾಜ್ಯದ ವಕ್ಫ್ ಭೂ ವಿವಾದ: ವಿಜಯಪುರಕ್ಕೆ ಭೇಟಿ ನೀಡಿದ ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್

**ವಿಜಯಪುರ, ನ.8–** ಕರ್ನಾಟಕದಲ್ಲಿ ವಕ್ಫ್ ವಿವಾದಕ್ಕೆ ಸಂಬಂಧಪಟ್ಟಂತೆ ಪರಿಶೀಲನೆಗಾಗಿ ವಕ್ಫ್ ತಿದ್ದುಪಡಿ ಕಾಯ್ದೆಗೆ ಸಂಬಂಧಿಸಿದ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ವಿಜಯಪುರಕ್ಕೆ ಭೇಟಿ ನೀಡಿದರು.



ವಿಜಯಪುರಕ್ಕೆ ಭೇಟಿ ನೀಡಿದ ವಕ್ಫ್ ಮಸೂದೆ ತಿದ್ದುಪಡಿ ಜೆಪಿಸಿ ಅಧ್ಯಕ್ಷ ಜಗದಂಬಿಕಾ ಪಾಲ್ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಕೇಂದ್ರ ಸರ್ಕಾರವು 'ವಕ್ಫ್ ಕಾಯ್ದೆಗೆ–2024'ಕ್ಕೆ ತಿದ್ದುಪಡಿ ತರಲು ಹೊರಟಿದೆ. ಕರ್ನಾಟಕದಲ್ಲಿನ ಸಮಸ್ಯೆಗಳ ಬಗ್ಗೆ ಸಂಸದ ತೇಜಸ್ವಿ ಸೂರ್ಯ ನನ್ನ ಗಮನ ಸೆಳೆದಿದ್ದರು. ದೆಹಲಿ ರೀತಿಯಲ್ಲಿ ರಾಜ್ಯದಲ್ಲಿ ಕೂಡ ರೈತರು ವಕ್ಫ್ ಬೋರ್ಡ್‌ನಿಂದ ಸಮಸ್ಯೆ ಅನುಭವಿಸುತ್ತಿದ್ದಾರೆ. ವಿಜಯಪುರದಲ್ಲಿ ಅತ್ಯಧಿಕ ಜಮೀನು ವಕ್ಫ್ ತನ್ನದೆಂದು ದಾಖಲೆ ತಿದ್ದುಪಡಿ ಮಾಡಿದೆ ಎಂದು ರೈತರು ದೂರಿದ್ದಾರೆಂದು ತಿಳಿಸಿದರು. ರಾಜ್ಯದ ರೈತರ ಸಮಸ್ಯೆಗಳನ್ನು ಆಲಿಸುವುದಕ್ಕೆಂದೇ ಕರ್ನಾಟಕಕ್ಕೆ ಬಂದಿದ್ದೇನೆ. ಇಲ್ಲಿನ ರೈತರು ದಶಕಗಳ ಕಾಲ ಉಳುಮೆ ಮಾಡಿದ ಜಮೀನುಗಳನ್ನು ವಕ್ಫ್ ಬೋರ್ಡ್ ಏಕಾಏಕಿ ತನ್ನದೆಂದು ಹೇಳುತ್ತಿದೆ. ರೈತರು ತಮ್ಮ ಆಸ್ತಿ ಪತ್ರದ ವಿವರಗಳನ್ನು ತಂದಿದ್ದಾರೆ. ರೈತರ ಹೆಸರಲ್ಲಿರುವ ಭೂ ದಾಖಲೆ ವಿವರ ನೀಡುತ್ತಿದ್ದಾರ ಎಂದರು.

ಜಗದಾಂಬಿಕಾ ಪಾಲ್ ಹೇಳಿದ್ದೇನು? : ಕಳೆದ 60–70 ವರ್ಷಗಳಿಂದ ಕೃಷಿ ಮಾಡುತ್ತಿರುವ ಭೂಮಿ ಮೇಲೆ ವಕ್ಫ್ ಬೋರ್ಡ್ ಹಕ್ಕು ಸಾಧಿಸಲು ಹೊರಟಿದೆ. ಹೀಗಾಗಿ ರೈತರು ಪ್ರತಿಭಟಿಸುತ್ತಿದ್ದಾರೆ. ಈಗಾಗಲೇ ಹುಬ್ಬಳ್ಳಿಗೆ ಭೇಟಿ ನೀಡಿದ್ದು, ವಿಜಯಪುರ ಜಿಲ್ಲೆಗೆ ಬಂದಿದ್ದೇನೆ. ಕೇವಲ ರೈತರ ಕೃಷಿ ಭೂಮಿ ಮಾತ್ರವಲ್ಲ, ಪ್ರಾಚ್ಯವಸ್ತು ಇಲಾಖೆಯ ಪಾರಂಪರಿಕ ತಾಣಗಳನ್ನು ಸಹ ವಕ್ಫ್ ತನ್ನದೆಂದು ಪ್ರತಿಪಾದಿಸುತ್ತಿದೆ. ಈ ಬಗ್ಗೆ ಸಹ ಮಾಹಿತಿ ಪಡೆಯುತ್ತಿದ್ದೇನೆ. ಈ ಎಲ್ಲ ಬೆಳವಣಿಗೆಗಳ ಬಗ್ಗೆ ಸತ್ಯಾಸತ್ಯತೆ ತಿಳಿದು ವರದಿ ನೀಡುತ್ತೇನೆ ಎಂದು ಹೇಳಿದರು.

ಕೃಷಿ ಭೂಮಿಗಳು, ಧಾರ್ಮಿಕ ಸಂಸ್ಥೆಗಳು ಮತ್ತು ದೇವಾಲಯದ ಭೂಮಿಯನ್ನು ವಕ್ಫ್ ಆಸ್ತಿಯನ್ನಾಗಿ ಪರಿವರ್ತಿಸುತ್ತಿರುವ ವಿವಾದಕ್ಕೆ ರಾಜ್ಯ ಸರ್ಕಾರವನ್ನು ದೂಷಿಸಿದರು. ಜೆಪಿಸಿ ಲೋಕಸಭೆಯ ಸ್ಪೀಕರ್‌ಗೆ ಸಲ್ಲಿಸುವ ವರದಿಯಲ್ಲಿ ತಮ್ಮ ಕಳವಳ ಹೇಳುವುದಾಗಿ ತಮ್ಮನ್ನು ಭೇಟಿ ಮಾಡಿದ ನಿಯೋಗಗಳಿಗೆ ಭರವಸೆ ನೀಡಿದ್ದೇನೆ. ಈ ಭಾಗದ ವಿವಿಧ ಭಾಗಗಳ ರೈತರು, ಧಾರ್ಮಿಕ ಸ್ಥಳಗಳು, ಮಠಾಧೀಶರು ತಮ್ಮ ಗಮನಕ್ಕೆ ಬಾರದೆ ವಕ್ಫ್ ಮಾಲೀಕತ್ವ ಬದಲಾವಣೆ ಬಗ್ಗೆ ಕಳವಳ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಜೆಪಿಸಿ ಸದಸ್ಯ ತೇಜಸ್ವಿ ಸೂರ್ಯ ಅವರು ರಾಜ್ಯಕ್ಕೆ ಭೇಟಿ ನೀಡುವಂತೆ ಒತ್ತಾಯಿಸಿದ್ದರು. ಆದರೆ, ರಾಜ್ಯ ಸರ್ಕಾರ ತಮ್ಮ ಭೇಟಿಯನ್ನು ವಿರೋಧಿಸಿತು. ವಕ್ಫ್ ಸಚಿವ ಜಮೀರ್ ಅಹ್ಮದ್ ಪಾಲ್ ಭೇಟಿಯನ್ನು ಕಾನೂನು ಬಾಹಿರ ಎಂದು ಆರೋಪಿಸಿದ್ದಾರೆ. ನನ್ನ ಕರ್ನಾಟಕ ಭೇಟಿ ವಿರೋಧಿಸಲು ಜಮೀರ್ ಅಹ್ಮದ್ ಯಾರು? ಅವರಿಗೆ ಯಾವುದೇ ಹಕ್ಕು ಇಲ. ಈ ಬೆಳವಣಿಗೆಗಳ ಹೊರತಾಗಿಯೂ, ನಾನು ಉತ್ತರ ಕರ್ನಾಟಕಕ್ಕೆ ಭೇಟಿ ನೀಡಿ ಜನರ ಮನವಿ ಸ್ವೀಕರಿಸುತ್ತಿದ್ದೇನೆ. ವಿರೋಧ ಪಕ್ಷದ ಉಪ ನಾಯಕ ಅರವಿಂದ್ ಬೆಲ್ಲದ್ ಸೇರಿದಂತೆ ಸುಮಾರು 70 ನಿಯೋಗಗಳಿಂದ ಪ್ರಾತಿನಿಧ್ಯವನ್ನು ಸ್ವೀಕರಿಸಿದ್ದೇನೆ. ಅದೇ ಸಮಯದಲ್ಲಿ, ಸಂಸದ ಗೋವಿಂದ್ ಕಾರಜೋಳ ನೇತೃತ್ವದ ಸತ್ಯಶೋಧನಾ ಸಮಿತಿಯನ್ನು ರಾಜ್ಯ ಬಿಜೆಪಿ ರಚಿಸಿದ್ದು, ಸಮಸ್ಯೆಯ ತೀವ್ರತೆಯನ್ನು ಅರ್ಥಮಾಡಿಕೊಳ್ಳಲು ತನ್ನ ವರದಿಯನ್ನು ಸಹ ಜೆಪಿಸಿ ಅಧ್ಯಕ್ಷರಿಗೆ ಸಲ್ಲಿಸಿತು. ಸಮಿತಿಯ ವರದಿಯಲ್ಲಿ ತಮ್ಮ ಸಮಸ್ಯೆಗೆ ಪರಿಹಾರ ಕ್ರಮಗಳನ್ನು ಕಂಡುಕೊಳ್ಳುವಂತೆ ನಿಯೋಗಗಳು ಅಧ್ಯಕ್ಷರನ್ನು ಒತ್ತಾಯಿಸಿದವು.


ನಂತರ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿದ ಜಗದಾಂಬಿಕಾ ಪಾಲ್, ಕೃಷಿ ಭೂಮಿಗಳು, ಮಠಗಳು ಮತ್ತು ದೇವಸ್ಥಾನದ ಜಮೀನುಗಳನ್ನು ಹೇಗೆ ವಕ್ಫ್ ಆಸ್ತಿಯನ್ನಾಗಿ ಪರಿವರ್ತಿಸಲಾಗುತ್ತಿದೆ ಮತ್ತು ಈ ಪ್ರಕರಣಗಳಲ್ಲಿ ಒಂದು ತಿಂಗಳೊಳಗೆ ಭೂ ದಾಖಲೆಗಳು ಮತ್ತು ಮ್ಯುಟೇಶನ್‌ನಲ್ಲಿ ಹೇಗೆ ಬದಲಾವಣೆಗಳನ್ನು ಮಾಡಲಾಗುತ್ತಿದೆ ಎಂದು ಪ್ರಶ್ನಿಸಿದರು. ರಾಜ್ಯ ಆಡಳಿತ ಮತ್ತು ಅಧಿಕಾರಿಗಳ ಸಹಕಾರವಿಲ್ಲದೆ ಇದು ಸಾಧ್ಯವಾಗದು. ರಾಜ್ಯದ ಈ ಪ್ರದೇಶದಲ್ಲಿ 500 ರಿಂದ 1,000 ವರ್ಷಗಳಷ್ಟು ಹಳೆಯದಾದ ಕೃಷಿ ಭೂಮಿಗಳು, ದೇವಾಲಯದ ಆಸ್ತಿಗಳು ಮತ್ತು ದಾಖಲೆಗಳನ್ನು ಹೊಂದಿರುವ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಹೇಗೆ ಘೋಷಿಸಲಾಗುತ್ತಿದೆ ಎಂಬುದರ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದರು.

1920 ಅಥವಾ 1930 ರ ದಶಕದಿಂದ ರೈತರು ಸಾಗುವಳಿ ಮಾಡುತ್ತಿರುವ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಘೋಷಿಸಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. ಅಲ್ಲದೆ, ಸರ್ಕಾರವು ಕಂದಾಯ ಇಲಾಖೆಗೆ ನೀಡಿರುವ ನಿರ್ದೇಶನ ತಾತ್ಕಾಲಿಕವಾಗಿದೆ. ಯಾವುದೇ ದಾಖಲೆಗಳಿಲ್ಲದೆ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಘೋಷಿಸಲಾಗುತ್ತಿದ್ದು, ನ್ಯಾಯಮಂಡಳಿ ತೀರ್ಪಿನ ನಂತರ ಸಂತ್ರಸ್ತರು ತಮ್ಮ ಆಸ್ತಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಇದು ಗಂಭೀರ ಸಮಸ್ಯೆಯಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಸಮಿತಿಯು ಈಗಾಗಲೇ ದೇಶದ ವಿವಿಧ ಭಾಗಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದು, ಇಂದು ಸಮಿತಿಯು ಭುವನೇಶ್ವರ ಮತ್ತು ಕೋಲ್ಕತ್ತಾದಂತಹ ಪ್ರದೇಶಗಳಿಗೆ ಭೇಟಿ ನೀಡಲಿದೆ ಎಂದು ತಿಳಿಸಿದರು.

## ವಕ್ಫ್ ಬಳಿ ದಾಖಲೆ ಇಲ್ಲ

**ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಕ್ಫ್ ಮಂಡಳಿಯು ಜಮೀನು, ದೇವಸ್ಥಾನ, ಮಠ ಮತ್ತು ಪ್ರಾಚ್ಯ ಇಲಾಖೆಯ ಸ್ಮಾರಕಗಳು ತನ್ನದೇಂದು ಹಕ್ಕು ಪ್ರತಿಪಾದಿಸುತ್ತಿರುವ ವಕ್ಫ್ ಮಂಡಳಿ ಬಳಿ ತನ್ನದೆಂದು ಹೇಳುವ ಯಾವುದೇ ದಾಖಲೆಗಳಿಲ್ಲ. ಅಧಿಕಾರವಿದೆ ಎಂದು ಮನಬಂದಂತೆ ರೈತರ ಜಮೀನು, ಮಠ, ದೇವಸ್ಥಾನಗಳ ಮೇಲೆ ಹಕ್ಕು ಪ್ರತಿಪಾದಿಸಿ ದಾಖಲೆಗಳಲ್ಲಿ ತನ್ನ ಹೆಸರನ್ನು ನಮೂದಿಸುತ್ತಿದೆ.**

ಜಗದಾಂಬಿಕಾ ಪಾಲ್, ಜೆಪಿಸಿ ಅಧ್ಯಕ್ಷರು.



ಜೆಡಿಎಸ್ ಮುಖಂಡ ಮಾಜಿ ಪ್ರಧಾನಿ ಎಚ್.ಡಿ. ಶುಕ್ರವಾರ ಚನ್ನಪಟ್ಟಣ ಸಮೀಪದ ಸಿಂಗರಾಜಪುರದಲ್ಲಿ ಚನ್ನಪಟ್ಟಣ ಉಪಚುನಾವಣೆಯ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪ್ರಚಾರದಲ್ಲಿ ದೇವೇಗೌಡರು.

# ನ್ಯಾಯಾಲಯಗಳು ಸತ್ಯವನ್ನು ಬಹಿರಂಗಪಡಿಸಿದರೆ ಸಮಾಜಕ್ಕೆ ನ್ಯಾಯ: ಎಚ್.ಕೆ.ಪಾಟೀಲ

**ಬೆಳಗಾವಿ, ನ.8–** ನ್ಯಾಯದ ಅಂತಿಮ ಗುರಿ ಸತ್ಯದ ಅನ್ವೇಷಣೆ. ನ್ಯಾಯಾಲಯಗಳು ಸತ್ಯವನ್ನು ಕಂಡುಹಿಡಿದು, ಅದರ ಮೇಲೆ ತಮ್ಮ ನಿರ್ಧಾರಗಳನ್ನು ತೆಗೆದು ಕೊಂಡಾಗ ಸಮಾಜಕ್ಕೆ ನ್ಯಾಯ ಲಭಿಸುತ್ತದೆ ಎಂದು ಕಾನೂನು, ನಾಗರಿಕ ಹಕ್ಕು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ.



ಬೆಳಗಾವಿಯಲ್ಲಿ ಇಂದು ಕಾಹೇರ, ಜೆಎನ್ ವೈದ್ಯಕೀಯ ಮಹಾವಿದ್ಯಾಲಯದ ಫಾರೆನ್ಸಿಕ್ ಮೆಡಿಸಿನ್ ಹಾಗೂ ಟಾಕ್ಸಿಕಾಲಾಜಿ ವಿಭಾಗವು ಏರ್ಪಡಿಸಿದ್ದ ಕರ್ನಾಟಕ ಮೆಡಿಕೋ ಲೀಗಲ್ ಸಂಸ್ಥೆಯ 32ನೇ ವಾರ್ಷಿಕ ರಾಜ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಸಂಕೀರ್ಣ ಪ್ರಕರಣಗಳಲ್ಲಿ, ನ್ಯಾಯಾಲಯಗಳು ಸಂತ್ರಸ್ಥರಿಗೆ ನ್ಯಾಯ ಕಲ್ಪಿಸಲು ವೈದ್ಯಕೀಯ ವೃತ್ತಿಪರರ ನೆರವು ಪಡೆಯುವದು ಅತ್ಯಗತ್ಯವಾಗಿದೆ. ವೃತ್ತಿಪರರು ಜ್ಞಾನವುಳ್ಳವರಾಗಿದ್ದು, ಕಾನೂನು ಅವರ ಅಭಿಪ್ರಾಯಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಿ 'ತಜ್ಞ ಸಾಕ್ಷ್ಯ' ಎಂದು ಪರಿಗಣಿತವಾಗುತ್ತದೆ. ವಿಜ್ಞಾನ, ಔಷಧ, ವಿಧಿವಿಜ್ಞಾನ, ಇಂಜಿನಿಯರಿಂಗ್, ಅಥವಾ ಇನ್ನಿತರ ವಿಶೇಷ ವಿಭಾಗಗಳಂತಹ ಕ್ಷೇತ್ರಗಳ ಕಾನೂನು ಪ್ರಕ್ರಿಯೆಗಳಲ್ಲಿ ತಜ್ಞರ ಅಭಿಪ್ರಾಯಗಳನ್ನು ಪುರಾವೆಯಾಗಿ ಸ್ವೀಕರಿಸಿ, ಅಗತ್ಯ ಸಂದರ್ಭಗಳಲ್ಲಿ ನಿಖರವಾದ ನಿರ್ಧಾರ ತೆಗೆದುಕೊಳ್ಳಲು ಸತ್ಯ–ಶೋಧಕರಿಗೆ ಸಹಾಯ ಮಾಡುತ್ತವೆ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.


### ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮೇಲೆ ಆರೋಪ

# ಆತ್ಮಹತ್ಯೆ ಪ್ರಕರಣಕ್ಕೆ ತಿರುವು

**ಬೆಳಗಾವಿ, ನ.8–** ಬೆಳಗಾವಿ ಜಿಲ್ಲೆಯ ತಹಶೀಲ್ದಾರ್ ಕಚೇರಿಯೊಂದರಲ್ಲಿ ಅಧಿಕಾರಿ ನೇಣು ಹಾಕಿಕೊಂಡ ಪ್ರಕರಣಕ್ಕೆ ಮತ್ತೊಂದು ಭಾರಿ ತಿರುವು ಸಿಗಲಿದೆ. ಮೃತ ಅಧಿಕಾರಿ ಮೊಬೈಲ್ ಪತ್ತೆ ಮಾಡಲಾಗಿದೆ. ಪೊಲೀಸ್ ಆಯುಕ್ತರು ಪ್ರಕರಣದ ತನಿಖಾ ಜವಾಬ್ದಾರಿಯನ್ನು ಎಸಿಪಿಗೆ ಹಸ್ತಾಂತರ ಮಾಡಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ತಮ್ಮ ಪಿಎ ಗಳನ್ನು ಬಿಟ್ಟು ಅಧಿಕಾರಿಗಳಿಗೆ ತೊಂದರೆ ನೀಡುತ್ತಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.

ಈ ಪ್ರಕರಣವನ್ನು ಕೇಂದ್ರ ತನಿಖಾ ಸಂಸ್ಥೆಗಳಿಗೆ ನೀಡುವಂತೆ ಬಿಜೆಪಿ ನಾಯಕರು ಒತ್ತಾಯಿಸಿದ್ದಾರೆ. ಒಂದು ದಿನದ ಹಿಂದಷ್ಟೇ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸೇರಿ ಮೂವರ ವಿರುದ್ಧ ಇಲ್ಲಿನ ಖಡೇಬಜಾರ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.ಮೃತ ಅಧಿಕಾರಿ ಡೆತ್ ನೋಟ್ ಬರೆದಿಟ್ಟು ಸಾವಿಗೀಡಾಗಿದ್ದರು. ಗ್ರೂಪ್ನಲ್ಲಿ ವಾಟ್ಸಾಪ್ ಸಂದೇಶ ಹಾಕಿ ತಡರಾತ್ರಿ ಅಧಿಕಾರಿ ರುದ್ರಣ್ಣ ಅವರು ಸಾವಿಗೆ ಶರಣಾಗಿದ್ದರು. ಡೆತ್‌ನೋಟ್ ವಶಕ್ಕೆ ಪಡೆದಿದ್ದ ಪೊಲೀಸರಿಗೆ ಮೃತ ಅಧಿಕಾರಿಯ ಮೊಬೈಲ್ ಫೋನ್ ಸಿಕ್ಕಿರಲಿಲ್ಲ. ಪ್ರಕರಣ ಗಂಭೀರ ಸ್ವರೂಪ ಪಡೆಯುತ್ತಿದ್ದಂತೆ ಆಯುಕ್ತರು ಕೇಸಿನ ತನಿಖೆಯನ್ನು ಎಸಿಪಿಗೆ ವಹಿಸಿದ್ದಾರೆ. ಇದರಿಂದ ತನಿಖೆಗೆ ಮತ್ತಷ್ಟು ಚುರುಕುಗೊಳ್ಳುತ್ತಿದೆ. ಇದರಿಂದ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಅವರ ಆಪ್ತ ಸೋಮುಗೆ ಸಂಕಷ್ಟ ಹತ್ತಿರವಾಗುತ್ತಿದೆ. ತಲೆಮರೆಸಿಕೊಂಡು ಆರೋಪಿಗಳು ಸಿಗುತ್ತಿದ್ದಂತೆ ಸಚಿವರ ಬಂಧವಾದರೂ ಆಗಬಹುದು ಎಂದು ಹೇಳಲಾಗುತ್ತಿದೆ. ಆರೋಪಿಗಳನ್ನು ಬಂಧಿಸುವಲ್ಲಿ ನಿರತರಾದ ಪೊಲೀಸರು ತಂಡಗಳನ್ನು ರಚನೆ ಮಾಡಿದ್ದಾರೆ ಎನ್ನಲಾಗಿದೆ.ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಪಿಎ ಬಿಟ್ಟು ನೀಡುತ್ತಿರುವ ಕಿರುಕುಳ ಸಹಿಸಲಾಗದೇ ಅಧಿಕಾರಿಯು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜನರಿಂದ ಹೆಚ್ಚು ಲೀಡ್‌ನಿಂದ ಗೆದ್ದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಧಿಕಾರಕ್ಕೆ ಬಂದ ಮೇಲೆ ಭ್ರಷ್ಟಾಚಾರ ಹೆಚ್ಚಾಗಿದೆ. ಅವರಿಂದಲೇ ಅಮಾಯಕ ಅಧಿಕಾರಿಯೊಬ್ಬರು ಸಾವಾಗಿದೆ. ಪೊಲೀಸರು ಎಫ್‌ಐಆರ್ ಆದರೂ ಈವರೆಗೆ ಒಬ್ಬರನ್ನು ಬಂಧಿಸಿಲ್ಲ. ಸಿಸಿಟಿವಿ ದೃಶ್ಯಾವಳಿಗಳನ್ನು ವಶಕ್ಕೆ ಪಡೆದಿಲ್ಲ ಎಂದು ಬಿಜೆಪಿ ವಿಧಾನಸಭೆ ವಿರೋಧಪಕ್ಷದ ಉಪನಾಯಕ ಅರವಿಂದ್ ಬೆಲ್ಲದ್ ಆರೋಪಿಸಿದ್ದಾರೆ.

# ಬೀದರ್‌ನ ಐತಿಹಾಸಿಕ ಬಹಮನಿ ಕೋಟೆಗೂ ವಕ್ಫ್ ಮೊಹರು!



**ಬೀದರ್, ನ.8–** ರೈತರ ಜಮೀನು ಗಳ ಬೆನ್ನಲ್ಲೇ ಈಗ ಕೇಂದ್ರ ಪುರಾತತ್ವ ಇಲಾಖೆಗೆ ಸೇರಿದ ಬೀದರ್‌ನ ಐತಿಹಾಸಿಕ ಬಹುಮನಿ ಕೋಟೆಯ ಸೋಲಾಹ್ ಕಂಬ್ ಸ್ಮಾರಕ ಕೂಡ ವಕ್ಫ್ ಆಸ್ತಿಯಾಗಿ ಪರಿವರ್ತನೆ ಆಗಿರುವುದು ಬೆಳಕಿಗೆ ಬಂದಿದೆ. ಏಷ್ಯಾದ ಅತಿ ದೊಡ್ಡ ಕೋಟೆ ಎಂಬ ಹೆಗ್ಗಳಿಕೆಯ ಬಹುಮನಿ ಕೋಟೆಯನ್ನು ವಕ್ಫ್ ಆಸ್ತಿ ಎಂದು ವರ್ಗಾಯಿಸಿಕೊಳ್ಳಲಾಗಿದೆ.

ಅಷ್ಟೇ ಅಲ್ಲ ಇಲ್ಲಿನ ಅಷ್ಟೂರಿಯದ ಕೆಲವು ಗುಂಬಜ್‌ಗಳ ಮೇಲೂ ವಕ್ಫ್ ತನ್ನ ಹಕ್ಕು ಸಾಧಿಸಿದೆ. ಬಹುಮನಿ ಅರಸರು 1427ರಲ್ಲಿ ನಿರ್ಮಿಸಿರುವ ಬೀದರ ಕೋಟೆಯನ್ನು 1951ರ ನ. 29ರಂದು ಸಂರಕ್ಷಿತ ಆಸ್ತಿ ಎಂದು ಗೆಜೆಟ್ ಆಫ್ ಇಂಡಿಯಾದಲ್ಲಿ ಪ್ರಕಟಿಸಲಾಗಿದೆ. ಆದರೆ ಈಗ ಕೋಟೆಯ ಆಸ್ತಿ 2005ರಲ್ಲಿಯೇ ವಕ್ಫ್ ಗೆ ಸೇರಿದೆ ಎಂದು ಅಧಿಸೂಚನೆ ಹೊರಬಿದ್ದಿದೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆ ಯಿಂದ ಮಾಹಿತಿ ತಿಳಿದುಕೊಳ್ಳುತ್ತೇನೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಸ್ಮಾರಕವನ್ನು ವಕ್ಫ್ ಆಸ್ತಿ ಎಂದು ವಕ್ಫ್ ಇಲಾಖೆ ಅಧಿಸೂಚನೆ ಹೊರಡಿಸಿದೆ. ಆದರೆ ಆಸ್ತಿಯ ಬಗ್ಗೆ ಯಾವುದೇ ದಾಖಲಾತಿ ಇಲ್ಲ ಎಂದು ಬೀದರ್ ಪುರಾತತ್ವ ಇಲಾಖೆಯ ಸಹಾಯಕ ಸರ್ವೇಕ್ಷಣಾಧಿಕಾರಿ ಅನಿರುದ್ಧ ದೇಸಾಯಿ ತಿಳಿಸಿದ್ದಾರೆ.

# ಬಿಜೆಪಿ ವಿರುದ್ಧ ಎಂ.ಬಿ.ಪಾಟೀಲ್ ಕಿಡಿ

**ವಿಜಯಪುರ, ನ.8–** ವಕ್ಫ್ ವಿಚಾರ ದಲ್ಲಿ ಅಸತ್ಯವನ್ನು ಸತ್ಯ ಮಾಡುವ ಕೆಲಸ ನಡೆದಿದೆ. ಸುಳ್ಳು ಪ್ರಚಾರ ನಡೆದಿದೆ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಸಚಿವ ಡಾ. ಎಂ.ಬಿ. ಪಾಟೀಲ್ ಬಿಜೆಪಿ ವಿರುದ್ಧ ಕಿಡಿಕಾರಿದ್ದಾರೆ.

ಕಳೆದೊಂದು ವಾರದಿಂದ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ವಕ್ಫ್ ವಿಚಾರ ಸದ್ದು ಮಾಡಿದೆ. ಈಗಾಗಲೇ ಸ್ಪಷ್ಟವಾಗಿ ಹೇಳಿದಂತೆ ಒಂದೇ ಒಂದು ಇಂಚು ರೈತರು, ಧಾರ್ಮಿಕ ಸಂಸ್ಥೆಗಳ ಜಮೀನು ವಕ್ಫ್‌ಗೆ ಹೋಗಲು ಬಿಡಲ್ಲ. ಸಿಎಂ ಸಿದ್ದರಾಮಯ್ಯ ಅವರು ಸಹ ಸ್ಪಷ್ಟವಾಗಿ ಹೇಳಿದ್ದಾರೆ. 12 ಸಾವಿರ ಎಕರೆ ಜಮೀನು ಇನಾಂ ಮತ್ತು ಭೂ ಸುಧಾರಣೆ ಕಾಯ್ದೆಯಡಿ ಹಂಚಿದ್ದು, ಅದನ್ನು ಯಾರೂ ಹಿಂಪಡೆಯಲ್ಲ ಎಂದು ಘಂಟಾಘೋಷವಾಗಿ ಹೇಳಲಾಗಿದೆ. ಟಾಸ್ಕ್ ಫೋರ್ಸ್ ಸಭೆಯಲ್ಲಿ ಸಹ ಅಧಿಕಾರಿಗಳಿಗೆ ಸೂಚನೆ ನೀಡಿ ನೋಟೀಸ್ ಹಿಂಪಡೆಯಲಾಗಿದೆ ಎಂದು ತಿಳಿಸಲಾಗಿದೆ. ಇಷ್ಟೆಲ್ಲ ಸತ್ಯ ಹೇಳಿದರೂ ಅನವಶ್ಯಕವಾಗಿ ಗೊಂದಲ ಸೃಷ್ಟಿಸಲಾಗುತ್ತಿದೆ ಎಂದರು.

'ಬಿಜೆಪಿಯ ನಾಟ್ಯ ಮಂಡಳಿ ಆಂತರಿಕ ಯಡಿಯೂರಪ್ಪ ವರ್ಸೆಸ್ ಅದರ್ಸ್ ತಿಕ್ಕಾಟವನ್ನು ವಕ್ಫ್ ಕಡೆ ಒಯ್ಯಲಾಗಿದೆ. ವಿಜಯೇಂದ್ರ, ಅಶೋಕ ತಂಡ ಬಂದಿಲ್ಲ. ಧಾರ್ಮಿಕ ಮುಖಂಡರಿಗೆ ಈ ವಿಚಾರ ಗೊತ್ತಿಲ್ಲ. ಕನ್ಹೇರಿ ಸ್ವಾಮೀಜಿಗಳಿಗೆ ಮನವರಿಕೆ ಮಾಡಿಕೊಡಲಾಗುವುದು. ಮೋದಿ ಸೇರಿದಂತೆ 2011ರಿಂದ ನಡೆದ ವಿದ್ಯಮಾನ ಶ್ರೀಗಳ ಗಮನಕ್ಕೆ ತಂದರೆ ಅವರ ವಿರುದ್ಧ ಶ್ರೀಗಳೇ ತಿರುಗಿ ಬಳಲಿದ್ದಾರೆ' ಎಂದು ವ್ಯಂಗ್ಯವಾಡಿದರು'

'ಶೋಭಾ ಕರಂದ್ಲಾಜೆ ಅವರು ಲೋಕಸಭೆಯಲ್ಲಿ ವಕ್ಫ್ ನಿರ್ವಹಣೆಗೆ ಸಂಬಂಧಿಸಿದಂತೆ ಪ್ರಶ್ನೆ ಮಾಡುತ್ತಾರೆ. ಸಂಸತ್‌ನಲ್ಲಿ ಅಂದಿನ ಬಿಜೆಪಿ ಸರ್ಕಾರ ಉತ್ತರ ನೀಡುತ್ತಾ ವಕ್ಫ್ ಆಸ್ತಿಗಳನ್ನು ಜಿಐಎಸ್ ಮ್ಯಾಪಿಂಗ್ ಮಾಡಲಾಗುತ್ತಿದೆ. ಡಿಜಿಟಲೈಜೇಶನ್ ಮಾಡಲಾಗುತ್ತಿದೆ. ಸಮರೋಪಾದಿಯಲ್ಲಿ ಶೇ.85 ರಷ್ಟು ಡಿಜಿಟಲೈಜೇಶನ್ ಮಾಡಿದ್ದಾಗಿ ತಿಳಿಸಿತ್ತು.




ಹಣಕಾಸಿನ ನೆರವು ಸಹ ನೀಡಲಾಗಿದೆ ಎಂದು ತಿಳಿಸಿತ್ತು. ಡಬ್ಲ್ಯೂ ಎಎಂಎಸ್ ಐ ಪೋರ್ಟಲ್ ಸಹ ಆರಂಭಿಸಿದ್ದು, ಆಸ್ತಿಗಳನ್ನು ನೋಂದಣಿ ಮಾಡಲಾಗುತ್ತಿದೆ ಎಂದು ಉತ್ತರಿಸಲಾಗಿತ್ತು' ಎಂದು ಹೇಳಿದರು.

'ಅಲ್ಲದೇ ವಕ್ಫ್ ಆಸ್ತಿ, ನಿಯಮಾವಳಿ ಹಾಗೂ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಾಕಿವುಲ್ಲಾ ಖಾನ್ ನೇತೃತ್ವದಲ್ಲಿ ಸಮಿತಿ ಕೂಡ ರಚನೆ ಮಾಡಿದ್ದಾರೆ. ಮುಂದುವರಿದು ಕಳೆದ ಮೂರು ವರ್ಷಗಳಲ್ಲಿ ನಿರ್ವಹಣೆ ಹಾಗೂ ಮೂಲ ಸೌಕರ್ಯಗಳಿಗೆ ಅನುದಾನ ನೆರವು ಸಹ ನೀಡಲಾಗಿದೆ ಎಂದು ತಿಳಿಸಲಾಗಿದೆ. ಬಹುಶಃ ಯತ್ನಾಳರಿಗೆ ಇದೆಲ್ಲ ಗೊತ್ತಿಲ್ಲ ಅನ್ನಿಸುತ್ತದೆ. ಗೊತ್ತಿದ್ದರೆ ಅಂದೇ ರಾಜೀನಾಮೆ ಕೊಡುತ್ತಿದ್ದರೇನೋ. ಇದೆಲ್ಲ ಕೇವಲ ನಾಟಕ. ವಕ್ಫ್ ಕಾಯ್ದೆ ತಿದ್ದುಪಡಿ ಹಿನ್ನೆಲೆ ರಾಷ್ಟ್ರದ ಲ್ಲಿ ಹಿಂದು–ಮುಸ್ಲಿಂ ಒಡೆದಾಳುವ ನೀತಿ ಭಾಗವಾಗಿ ಈ ನಾಟಕ ನಡೆದಿದೆ ಎಂದರು.

# ರಾಜರ ಕಾಲದಿಂದಲೂ ಕರ್ನಾಟಕ ಸಂಗೀತ ಪ್ರವರ್ಧಮಾನದಲ್ಲಿ: ಯದುವೀರ್ ಒಡೆಯರ್

**ಮೈಸೂರು, ನ.8–** ಮೈಸೂರು–ಕೊಡಗು ಲೋಕಸಭಾ ಸದಸ್ಯರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮಾತನಾಡಿ, ಮೈಸೂರಿನಲ್ಲಿ ಸಂಗೀತ ಸುಗಂಧ ಉತ್ಸವವನ್ನು ಆಚರಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ.



ನಮ್ಮ ಮೈಸೂರಿನ ಸಂಗೀತ ಪರಂಪರೆ ಗುರುತಿಸಿ ಈ ಕಾರ್ಯಕ್ರಮವನ್ನು ಮಾಡಲಾಗಿದ್ದು, ಕನ್ನಡ ನಾಡು–ನುಡಿ, ಸಂಗೀತ, ಕಲೆ, ಭಾಷೆ, ಏಕೀಕರಣ ಚಳವಳಿ, ಕರ್ನಾಟಕ ಇತಿಹಾಸ, ಪರಂಪರೆಯಿಂದ ಇಂದು ನ.1ರಂದು ಆಚರಣೆ ಮಾಡಿ, ತಿಂಗಳಿನಾದ್ಯಂತ ಕನ್ನಡ ನಾಡು–ನುಡಿ ಪರಂಪರೆ ಸಂಗೀತದ ಬಗ್ಗೆ ಕಾರ್ಯಕ್ರಮಗಳನ್ನು ಆಚರಿಸುತ್ತೇವೆ ಎಂದು ಹೇಳಿದರು.

ಇಂದಿಗೂ ಮೈಸೂರಿನಲ್ಲಿ ಸಂಗೀತ ಪರಂಪರೆ ಮುಂದುವರೆಯುತ್ತಿದೆ. ರಾಜರ ಕಾಲದಿಂದಲೂ ಕರ್ನಾಟಕ ಸಂಗೀತ ಪ್ರವರ್ಧಮಾನದಲ್ಲಿದ್ದು, ದಾಸರ ಸಂಗೀತ ಪ್ರಮುಖವಾಗಿದೆ. ವಿಜಯ ನಗರ ಸಾಮ್ರಾಜ್ಯದ ಕಾಲದಿಂದಲೂ ಮುಂದುವರೆಯುತ್ತಾ ಬಂದಿದೆ. ಕರ್ನಾಟಿಕ್ ಸಂಗೀತ ಲೋಕಕ್ಕೆ ಪುರಂದರ ದಾಸರು ನೀಡಿದ ಕೊಡುಗೆ ಗಣನೀಯ. ಅದನ್ನು ಉಳಿಸಿ ಬೆಳೆಸುವುದು ನಮ್ಮ ಕರ್ತವ್ಯವಾಗಿದೆ. ದಾಸ ಸಾಹಿತ್ಯದ ದಿಗ್ಗಜರಾದ ಪುರಂದರ ದಾಸರು ಸುಮಾರು 4 ಲಕ್ಷದ 75 ಸಾವಿರ ಕೀರ್ತನೆಗಳನ್ನು ರಚಿಸಿ, ಕರ್ನಾಟಕ್ ಸಂಗೀತದ ಪಿತಾಮಹ ಎಂಬ ಖ್ಯಾತಿ ಪಡೆದಿದ್ದಾರೆ. ಒಂದು ವೇಳೆ ಪುರಂದರದಾಸರು ಇಲ್ಲದಿದ್ದರೆ ಇಂದು ಕರ್ನಾಟಕ್ ಸಂಗೀತ ಇರುತ್ತಿರಲಿಲ್ಲ.

ಅವರ ನಂತರ ಬಂದಂತಹ ಕನಕದಾಸರು, ಹರಿದಾಸ, ಗೋಪಾಲ ದಾಸರು ಹಾಗೂ ಇನ್ನಿತರರು ದಾಸ ಸಾಹಿತ್ಯದ ಪರಂಪರೆಯನ್ನು ಉಳಿಸಿಕೊಂಡು ಬಂದಿದ್ದಾರೆ. ಇಂದು ಮೈಸೂರಿಗೆ ಸಂಗೀತಾ ನೆಲೆಸಿರುವ ನಗರ ಎಂದು ಕರೆಯಲಾಗುತ್ತಿದೆ ಅದನ್ನು ಉಳಿಸಿ ಬೆಳೆಸಿಕೊಂಡು ಹೋಗೋಣ ಎಂದರು. ದಾಸರ ಜನಪ್ರಿಯ ಕೀರ್ತನೆಯನ್ನು ಹಾಡಿದ ನಿರ್ಮಲಾ ಸೀತಾರಾಮನ್ ಸುಗಂಧ ಸಂಗೀತ ಕಾರ್ಯಕ್ರಮದಲ್ಲಿ ಕರ್ನಾಟಕ ಸಂಗೀತದ ಪಿತಾಮಹರಾದ ಪುರಂದರದಾಸರ ಜನಪ್ರಿಯ ಕೀರ್ತನೆಯಾದ ರಾಗಿ ತನ್ನಿರಿ ಭಿಕ್ಷೆಗೆರಾಗಿ ತನ್ನಿರಿ, ಭೋಗ್ಯರಾಗಿ, ಯೋಗ್ಯರಾಗಿ, ಭಾಗ್ಯವಂತರಾಗಿ, ನೀವು ಭಿಕ್ಷೆಗೆ ರಾಗಿ ತನ್ನಿರಿ. ಕೀರ್ತನೆಯನ್ನು ಹಾಡಿದರು.

ಕಾರ್ಯಕ್ರಮದಲ್ಲಿ ಕೃಷ್ಣರಾಜ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಶ್ರೀವತ್ಸ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿಗಳಾದ ಸುಮನ್ ಬಿಲ್ಲಾ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಈ ಕಾರ್ಯಕ್ರಮದ ಬಳಿಕ ಮೈಸೂರಿನ ತಾವರೆಕಟ್ಟೆಯಲ್ಲಿ ದೇಶದಲ್ಲಿ ವಿನೂತನ ಮಾದರಿಯಲ್ಲಿ ನಿರ್ಮಾಣ ವಾಗುತ್ತಿರುವ ಪ್ಲಾನಿಟೋರಿಯಂ ಕಟ್ಟಡಕ್ಕೆ ಭೇಟಿನೀಡಿದ ಸಚಿವರು ಕಾಮಗಾರಿ ಪರಿಶೀಲಿಸಿದರು. ಮುಂದಿನ ಸೆಪ್ಟೆಂಬರ್‌ನಲ್ಲಿ ಉದ್ಘಾಟನೆ ನೆರವೇರಲಿದ್ದು ಸಾಕಷ್ಟು ವಿದ್ಯಾರ್ಥಿಗಳಿಗೆ ಉಪಯೋಗವಾಗಲಿದೆ ಎಂದರು.

# ಸಾಂಪ್ರದಾಯಿಕ ವಸ್ತ್ರಗಳಿಂದ ಸಾಂಸ್ಕೃತಿಕ ಪರಂಪರೆ ಸಾಕಾರ

**ಕಲಬುರಗಿ, ನ.8–** ಸಾಂಪ್ರದಾಯಿಕ ಬಟ್ಟೆಗಳು ನಮ್ಮ ಭವ್ಯ ಸಾಂಸ್ಕೃತಿಕ ಪರಂಪರೆಯ ಸಾರವನ್ನು ಸಾಕಾರಗೊಳಿಸುತ್ತವೆ. ಇದು ಸಂಪ್ರದಾಯಗಳು, ನಂಬಿಕೆಗಳು ಮತ್ತು ತಲೆಮಾರುಗಳ ಮೂಲಕ ಹಾದುಹೋಗುವ ಮೌಲ್ಯಗಳ ಸ್ಪಷ್ಟವಾದ ಅಭಿವ್ಯಕ್ತಿಯಾಗಿ ಕಾರ್ಯನಿರ್ವಹಿಸುತ್ತದೆ. ಪ್ರಪಂಚದಾದ್ಯಂತ, ಭಾರತದಿಂದ ಆಫ್ರಿಕಾದ ವರೆಗೆ, ಯುರೋಪ್‌ನಿಂದ ಜಪಾನ್‌ವರೆಗೆ, ಸಾಂಪ್ರದಾಯಿಕ ಉಡುಪುಗಳು ಆಳವಾದ ಮಹತ್ವವನ್ನು ಹೊಂದಿವೆ, ಇದು ಮಾನವ ಇತಿಹಾಸ ಮತ್ತು ಗುರುತಿನ ಶ್ರೀಮಂತ ವಸ್ತ್ರವನ್ನು ಪ್ರತಿಬಿಂಬಿಸುತ್ತದೆ ಎಂದು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ವಿಜ್ಞಾನ, ಕಲಾ, ವಾಣಿಜ್ಯ, ಕಾನೂನು ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಚಾಲಕ ನಾಗಣ್ಣ ಘಂಟಿ ಹೇಳಿದರು.

ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎಂ ಎಸ್ ಇರಾಣಿ ಪದವಿ ಮಹಾವಿದ್ಯಾಲಯದಲ್ಲಿ ನಡೆದ ಭಾರತೀಯ ಸಾಂಸ್ಕೃತಿಕ ಉಡುಗೆ ತೊಡುಗೆ ಕಾರ್ಯಕ್ರಮ ಉದ್ಘಾಟಿಸಿ, ಭಾರತದಲ್ಲಿ, ಸೀರೆಯು ಸ್ತ್ರೀತ್ವ ಮತ್ತು ಅನುಗ್ರಹದ ಶಾಶ್ವತ ಸಂಕೇತವಾಗಿದೆ. ಈ ಸಾಂಪ್ರದಾಯಿಕ ಉಡುಪು, ಭಾರತೀಯ ಸಂಸ್ಕೃತಿಯ ಸೌಂದರ್ಯವನ್ನು ಪ್ರತಿಬಿಂಬಿಸುತ್ತದೆ. ಉತ್ತರ ಪ್ರದೇಶದ ಮಹಿಳೆಯರಿಗೆ ಬನಾರಸಿ ರೇಷ್ಮೆ ಸೀರೆಯಿಂದ ತಮಿಳುನಾಡಿನ ರೋಮಾಂಚಕ ಕಂಜೀವರಂ ರೇಷ್ಮೆ ಸೀರೆಯವರೆಗೆ, ಪ್ರತಿಯೊಂದು ಶೈಲಿಯು ಸಂಪ್ರದಾಯ, ಕರಕುಶಲತೆ ಮತ್ತು ಪ್ರಾದೇಶಿಕ ಗುರುತಿನ ಕಥೆಯನ್ನು ಹೇಳುತ್ತದೆ.

ಮುಖ್ಯ ಅತಿಥಿಗಳಾಗಿದ್ದ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಅನೀಲಕುಮಾರ ಮರಗೋಳ ಮಾತನಾಡಿ ಭಾರತದ ವಿಶಾಲ ಮತ್ತು ವೈವಿಧ್ಯಮಯ ಖಂಡದಾದ್ಯಂತ, ಸಾಂಪ್ರದಾಯಿಕ ಉಡುಪುಗಳು ಸಂಸ್ಕೃತಿಗಳು, ಭಾಷೆಗಳು ಸಾಂಪ್ರದಾಯಿಕ ಬಟ್ಟೆಗಳ ಶ್ರೀಮಂತ ವಸ್ತ್ರವನ್ನು ಪ್ರತಿಬಿಂಬಿಸುತ್ತದೆ ಎಂದರು.

### ಭಾರತ, ಹಿಂದೂ ಧರ್ಮ ಸುರಕ್ಷಿತವಾಗಿರಲು, ಹಿಂದೂಗಳೆಲ್ಲ ಒಟ್ಟಾಗಿ ಬಿಜೆಪಿಗೆ ಮತ ಹಾಕಿ

# ಹಿಂದೂಗಳೆಲ್ಲ ಜಾತಿ ಮಾಡುತ್ತಾ ಕುಳಿತರೆ ನಿಮ್ಮ ಆಸ್ತಿ ವಕ್ಫ್‌ಗೆ ಸೇರುತ್ತದೆ: ಯತ್ನಾಳ್ ಎಚ್ಚರಿಕೆ

**ಹಾವೇರಿ (ಶಿಗ್ಗಾವಿ), ನ.6––** ಭಾರತ ದೇಶ ಹಾಗೂ ಹಿಂದೂ ಧರ್ಮ ಸುರಕ್ಷಿತವಾಗಿ ಇರಬೇಕೆಂದರೆ, ಜಾತಿ, ಮತ ಎನ್ನದೇ ಹಿಂದೂಗಳೆಲ್ಲ ಒಟ್ಟಾಗಿ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿಗೆ ಮತ ನೀಡುವಂತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮನವಿ ಮಾಡಿದ್ದಾರೆ. ಅವರು ಇಂದು ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಎನ್ ಎಂ ತಡಸ್ ಗ್ರಾಮದಲ್ಲಿ ಚುನಾವಣಾ ಪ್ರಚಾರ ಮಾಡಿ ಮಾತನಾಡಿದರು.

ಭರತ್ ಬೊಮ್ಮಾಯಿ ಯುವಕ, ಸಾಧು ಮನುಷ್ಯ, ನಮ್ಮ ಪಕ್ಷದ ಕೇಂದ್ರದ ಹಿರಿಯರು ಭರತ್ ಬೊಮ್ಮಾಯಿಯನ್ನು ಬಿಜೆಪಿ ಅಭ್ಯರ್ಥಿಯನ್ನಾಗಿ ನಿಲ್ಲಿಸಿದ್ದಾರೆ. ಕರ್ನಾಟಕದಲ್ಲಿ ಸರ್ಕಾರ ಯಾವ ರೀತಿ ಕೆಲಸ ಮಾಡುತ್ತಿದೆ ಎನ್ನುವುದನ್ನು ನೋಡಿದ್ದೀರಿ, ಲೋಕಸಭೆ ಚುನಾವಣೆಯಲ್ಲಿ ಕೇವಲ ಐವತ್ತು ಆರವತ್ತು ಸೀಟು ಕಡಿಮೆ ಆಗಿದ್ದರಿಂದ ಒಂದು ಕಾಯ್ದೆ ತಿದ್ದುಪಡಿ ಮಾಡಲು ಕಷ್ಟ ಆಗಿದೆ. ನಾವು ಅವರನ್ನು ಅಣ್ಣ ತಮ್ಮಂದಿರು ಎಂದು ತಿಳಿದುಕೊಂಡಿದ್ದೇವೆ. ಆದರೆ, ಅವರ ಧರ್ಮದಲ್ಲಿ ಬೇರೆ ಧರ್ಮದವರನ್ನು ಅಣ್ಣ ತಮ್ಮ ಎನ್ನುವ ಮಾತೇ ಇಲ್ಲ. 2019ರಲ್ಲಿ ಶೋಭಾ ಕರಂದ್ಲಾಜೆ ಅವರು ಸಂಸತ್ತಿನಲ್ಲಿ ನಮ್ಮ ದೇಶದಲ್ಲಿ ಎಷ್ಟು ವಕ್ಫ್ ಆಸ್ತಿ ಇದೆ ಎಂದು ಕೇಳಿದ್ದರು. ಆಗ ಐದು ಲಕ್ಷ ಎಕರೆ ಎಂದು ಹೇಳಿದ್ದರು. ಈಗ ಸುಮಾರು ಒಂಭತ್ತುವರೆ ಲಕ್ಷ ಎಕರೆ ವಕ್ಫ್ ಆಸ್ತಿ ಇದೆಯಂತೆ. ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಅನೇಕ ಸಂಸದರ ಒತ್ತಡದಿಂದ ವಕ್ಫ್ ಕಾಯ್ದೆ ತಿದ್ದುಪಡಿ ಮಾಡಲು ಸಂಸತ್ತಿನ ಜಂಟಿ ಸದನ ಸಮಿತಿ ರಚನೆ ಮಾಡಿದ್ದಾರೆ. ಪಾಕಿಸ್ತಾನದಲ್ಲಿ 8ಲಕ್ಷ ಎಕರೆ ಐತಿ, ಭಾರತದಲ್ಲಿ 9.5 ಲಕ್ಷ ಎಕರೆ ವಕ್ಫ್ ಆಸ್ತಿ ಇದೆ. ಕಾಂಗ್ರೆಸ್ ನವರು ಭಾರತದಲ್ಲಿ ಮತ್ತೊಂದು ಪಾಕಿಸ್ತಾನ ಮಾಡಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು.




ಶಿಗ್ಗಾವಿ ಸವಣೂರಿನಲ್ಲಿ ನವಾಬರು ಇದ್ದರು ನಿಮ್ಮ ಎಲ್ಲ ಆಸ್ತಿಗಳು ವಕ್ಫ್ ಆಸ್ತಿಯಾಗುತ್ತವೆ. ನೀವೆಲ್ಲ ಜಾತಿ ಒಳ ಪಂಗಡ ಬಿಟ್ಟು ಒಕ್ಕಟ್ಟಾಗಿ ಇಲ್ಲದಿದ್ದರೆ ನಿಮ್ ಎಲ್ಲ ಆಸ್ತಿಗಳೂ ವಕ್ಫ್ ಆಸ್ತಿ ಆಗುತ್ತವೆ. ನಮ್ಮ ಪಂಚಮಸಾಲಿ ಸಮುದಾಯಕ್ಕೆ ಬಸವರಾಜ ಬೊಮ್ಮಾಯಿ 2 ಡಿ ಮೀಸಲಾತಿ ಕೊಟ್ಟಿದ್ದಾರೆ. ಸಿದ್ದರಾಮಯ್ಯ ಅವರು ಅದನ್ನು ಜಾರಿ ಮಾಡುತ್ತಿಲ್ಲ. ಮೀಸಲಾತಿ ನೀಡುವಂತೆ ನಾವು ಡಿಸೆಂಬರ್ ನಲ್ಲಿ ವಿಧಾನಸೌಧಕ್ಕೆ ಟ್ರ್ಯಾಕ್ಟರ್ ಸಮೇತ ಮುತ್ತಿಗೆ ಹಾಕಲು ತೀರ್ಮಾನಿಸಿದ್ದೇವೆ ಎಂದು ಹೇಳಿದರು.

ತಾತ್ಕಾಲಿಕ ಸುಖಕ್ಕೆ ಕಾಂಗ್ರೆಸ್ ಗೆ ಮತ ಹಾಕಿದರೆ ಸಾಬರ ಕೈಯಲ್ಲಿ ಕೆಲಸಕ್ಕೆ ಹೋಗಬೇಕಾಗುತ್ತದೆ. ಇಲ್ಲ ಮುಸ್ಲೀಮರಾಗಬೇಕಾಗುತ್ತದೆ. ಸಿದ್ದರಾಮಯ್ಯ ಅವರು ಜಮೀರ್ ಅವರಿಗೆ ಎಲ್ಲ ವಕ್ಫ್ ಆಸ್ತಿ ಸಮೀಕ್ಷೆ ಮಾಡಲು ಹೇಳಿದ್ದರು. ಭಾರತ ದೇಶ ಉಳಿಯಬೇಕೆಂದರೆ ಹಿಂದು ಧರ್ಮ ಉಳಿಯಬೇಕೆಂದರೆ ಎಲ್ಲರೂ ಒಗ್ಗಟ್ಟಾಗಿ ಇರಬೇಕು. ಕಾಂಗ್ರೆಸ್ ನವರು ಎಸ್ಸಿ ಎಸ್ಟಿ ಸಮುದಾಯಕ್ಕೂ ಏನೂ ಮಾಡಿಲ್ಲ. ಅಂಬೇಡ್ಕರ್ ಅವರಿಗೂ ಅವಮಾನ ಮಾಡಿದ್ದರು ಅವರು ನಿಧನ ಹೊಂದಿದರೆ ದೆಹಲಿಯಲ್ಲಿ ಜಾಗ ಕೊಡಲಿಲ್ಲ. ಅವರು ಭಾರತ ಇಬ್ಭಾಗ ಆಗುವುದನ್ನು ವಿರೋಧಿಸಿದ್ದರು. ಭಾರತದಲ್ಲಿರುವ ಮುಸ್ಲೀಮರು ಪಾಕಿಸ್ತಾನಕ್ಕೆ ಹೋಗಲಿ, ಪಾಕಿಸ್ತಾನದಲ್ಲಿರುವ ಮುಸ್ಲೀಮರು ಭಾರತಕ್ಕೆ ಬರಲಿ ಎಂದು ಹೇಳಿದ್ದರು. ಆದರೆ, ನೆಹರು ಜಿನ್ನಾ ಕುತಂತ್ರದಿಂದ ದೇಶ ಇಬ್ಭಾಗವಾಯಿತು ಎಂದರು. ಲೋಕಸಭೆ ಚುನಾವಣೆಯಲ್ಲಿ ದೇಶದ ಜನರು ಮುನ್ನೂರು ಸ್ಥಾನ ಕೊಟ್ಟಿದ್ದರೆ, ಕಾಶ್ಮೀರದಲ್ಲಿ ಆರ್ಟಿಕಲ್ 370 ರದ್ದು ಮಾಡಿದಂತೆ, ವಕ್ಫ್ ಕಾಯಿದೆ ತಿದ್ದುಪಡಿ ಮಾಡಲು ಅನುಕೂಲವಾಗುತ್ತಿತ್ತು. ಸಂವಿಧಾನದ 370 ಕಾಯ್ದೆ ಜಾರಿ ಇದ್ದಾಗ ಜಮ್ಮು ಕಾಶ್ಮೀರದಲ್ಲಿ ಯಾವುದೇ ಮೀಸಲಾತಿ ಅವಕಾಶ ಇರಲಿಲ್ಲ. 370 ರದ್ದಾದ ಮೇಲೆ ಐದು ಜನ ದಲಿತರು ವಿಧಾನಸಭೆ ಪ್ರವೇಶಿಸುವಂತೆ ಆಯಿತು. ಈಗ ಗ್ರಾಮ ಪಂಚಾಯತಿಗಿಂದ ಹಿಡಿದು ಎಲ್ಲ ಹಂತದಲ್ಲೂ ದಲಿತರಿಗೆ ಮೀಸಲಾತಿ ದೊರೆಯುವಂತಾಗಿದೆ ಎಂದರು. ರಾಜ್ಯ ವಿಧಾನಸಭೆಯಲ್ಲಿ ರಾಜ್ಯ ಸರ್ಕಾರದ ಲೋಪಗಳನ್ನು ಅಂಕಿ ಅಂಶಗಳ ಸಮೇತ ವಾದ ಮಾಡಿ ಬಸವರಾಜ ಬೊಮ್ಮಾಯಿಯವರು ಒಬ್ಬರೇ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುತ್ತಿದ್ದರು. ಅವರು ಸಂಸದರಾಗಿ ದೆಹಲಿಗೆ ಹೋಗಿದ್ದಾರೆ. ನಾನು ನೇರವಾಗಿ ಮಾತನಾಡುತ್ತೇನೆ. ಅದು ಎಲ್ಲಿ ಬಳಕೆಯಾಗಬೇಕೊ ಅಲ್ಲಿ ಬಳಕೆಯಾಗುತ್ತದೆ ಎಂದು ಹೇಳಿದರು.

**ಸಿದ್ದರಾಮಯ್ಯ ಮುಸ್ಲೀಮರಾಗಿ ಹುಟ್ಟುತ್ತಾರಂತೆ:** ಸಚಿವ ಜಮೀರ ಅಹಮದ್ ಮುಸ್ಲೀಮರಿಗೆ ಗೋರಿ ತೋರಿಸಿ ವಕ್ಫ್ ಆಸ್ತಿ ಮಾಡಿಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯ ಮುಂದಿನ ಜನ್ಮದಲ್ಲಿ ಮುಸ್ಲೀಂ ಆಗಿ ಹುಟ್ಟುವುದಾಗಿ ಹೇಳುತ್ತಿದ್ದಾರೆ. ಅದಕ್ಕಾಗಿ ಈಗಲೇ ಎಲ್ಲ ಆಸ್ತಿಯನ್ನು ವಕ್ಫ್ ಆಸ್ತಿ ಮಾಡುತ್ತಿದ್ದಾರೆ. ಹಾಲುಮತದ ಸಮುದಾಯದ ಉತ್ತರ ಕರ್ನಾಟಕದಲ್ಲಿ ಅತ್ಯಂತ ಶ್ರೇಷ್ಟ ಸಮುದಾಯ, ನಾವು ಯಾವುದೇ ಶುಭ ಕಾರ್ಯ ಮಾಡಲು ಹಾಲುಮತದವರಿಂದ ಪೂಜೆ ಮಾಡಿಸುತ್ತೇವೆ. ಅಂತಹ ಶ್ರೇಷ್ಠ ಸಮುದಾಯದಲ್ಲಿ ಹುಟ್ಟಿದ ಸಿದ್ದರಾಮಯ್ಯ ಆ ಸಮುದಾಯಕ್ಕೆ ಕಳಂಕ ತರುತ್ತಿದ್ದಾರೆ ಎಂದು ಆರೋಪಿಸಿದರು. ಶಿಗ್ಗಾವಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೇಲೆ ಹದಿನೇಳು ಕೇಸ್ ಇದ್ದಾವೆ. ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಪೈಲ್ವಾನ್ ನನ್ನು ನಿಲ್ಲಿಸಿದ್ದೇವೆ ಎಂದು ಹೇಳಿದ್ದಾರೆ. ಅವರೊಂದಿಗೆ ಕುಸ್ತಿ ಹಿಡೊಯಬೇಕಾ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ನಲ್ಲಿ ಒಳ್ಳೆಯ ಮುಸ್ಲಿಮರಿಗೂ ಅವಕಾಶವಿಲ್ಲ. ನಾನು ಮುಸ್ಲೀಮರ ವಿರುದ್ಧ ಮಾತನಾಡುತ್ತೇನೆ ಎಂದು ನನ್ನ ವಿರುದ್ದ ಕೇಸ್ ಹಾಕುತ್ತಾರೆ. ನಾನು ಪ್ರತಾಪ್ ಸಿಂಹ, ಸಿ.ಟಿ ರವಿ, ಸೂಲಿಬೆಲೆ ಮೇಲೆ ಕೇಸ್ ಹಾಕುತ್ತಿದ್ದಾರೆ. ಈಗ ಬೊಮ್ಮಾಯಿ ಮೇಲೂ ಕೇಸ್ ಹಾಕಿದ್ದಾರೆ ಎಂದರು.

# ವಕ್ಫ್ ವಿವಾದ ಕುರಿತ ವಿಸ್ತೃತ ವರದಿ ಸ್ಪೀಕರ್‌ಗೆ: ಜಗದಂಬಿಕಾ ಪಾಲ್


ಹುಬ್ಬಳ್ಳಿ ನಗರದ ಖಾಸಗಿ ಹೋಟೆಲ್‌ನಲ್ಲಿ ಜಂಟಿ ಸದನ ಸಮಿತಿ ಅಧ್ಯಕ್ಷ ಜಗದಾಂಬಿಕಾ ಆಲ್ ಅವರಿಗೆ ವಕ್ಫ್ ಮಂಡಳಿ ವಿರುದ್ಧ ರೈತರು ಹಾಗೂ ದೇವಸ್ಥಾನಗಳವರು ತಮ್ಮ ದೂರುಗಳನ್ನು ಸಲ್ಲಿಸಿದರು

**ಹುಬ್ಬಳ್ಳಿ, ನ.8–** ವಕ್ಫ್ ಬೋ೯ ಆಸ್ತಿ ಕಬಳಿಸುವ ಆರೋಪ ಕೇಳಿಬಂದ ಹಿನ್ನೆಲೆ ಕರ್ನಾಟಕಕ್ಕೆ ಭೇಟಿ ನೀಡಿ ಜನರ ಸಮಸ್ಯೆಗಳ ಆಲಿಸಿ ಇದರ ವಿಸ್ತೃತ ವರದಿ ಸಿದ್ಧ ಪಡಿಸಿ ಸ್ಪೀಕರಗೆ ನೀಡಲಾಗುವುದು ಎಂದು ವಕ್ಫ್ ಬೋ೯ ಸಂಸದೀಯ ಜಂಟಿ ಸಮಿತಿಯ ಅಧ್ಯಕ್ಷ ಜಗದಂಬಿಕಾ ಪಾಲ ತಿಳಿಸಿದರು.

ದೆಹಲಿಗೆ ಣಜರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸದ ತೇಜಸ್ವಿ ಸೂರ್ಯ ಅವರು ಕರ್ನಾಟಕದ ರೈತರು ಹಾಗೂ ಜನಸಾಮಾನ್ಯರ ಆಸ್ತಿಗಳನ್ನು ಕಬಳಿಕೆ ಮಾಡಿದ್ದಾರೆ ತಿಳಿಸಿದ್ದಾರೆ. ಆದ್ದರಿಂದ ಅಹವಾಲು ಸ್ವೀಕರಿಸಲು ಬಂದಿದ್ದೇನೆ. ಉತ್ತರ ಕರ್ನಾಟಕ ಭಾಗದ ಸುಮಾರು 50–60 ವರ್ಷಗಳಿಂದ ಉಳಿಮೆ ಮಾಡಿದ ಜಮೀನು, ಐತಿಹಾಸಿ ದೇವಸ್ಥಾನಗಳ ಕಂಬಳಿಸ ಲಾಗಿದೆ ಎನ್ನಲಾಗುತ್ತಿದೆ. ಆದ್ದರಿಂದ ಹುಬ್ಬಳ್ಳಿ, ವಿಜಯಪುರ, ಬೀದರ್ ರೈತರ ಹಾಗೂ ಜನರ ಅಹವಾಲು ಸ್ವೀಕರಿಸಿ ದ್ದೇನೆ. ಸದ್ಯ ಹುಬ್ಬಳ್ಳಿಯಲ್ಲಿ ಅದ್ವೈತ್ ಪರಿಷತ ಉತ್ತರ ಕರ್ನಾಟಕ ಹಾಗೂ ರತ್ನ ಭಾರತ ರೈತ ಸಮಾಜದವರು ಮನವಿ ಸಲ್ಲಿಸಿದ್ದು, ಇದನ್ನು ಪರಿ ಗಣಿಸಲಾಗುವುದು ಎಂದು ತಿಳಿಸಿದರು.

**ಮನವಿಗಳ ಮಹಾಪೂರ:** ನ್ಯಾಯ ಕೊಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುವ ವಿಶ್ವಾಸ ವ್ಯಕ್ತಪಡಿಸಿದ ಅವರು, ಒಂದೇ ದಿನದಲ್ಲಿ ಎಲ್ಲರನ್ನೂ ಭೇಟಿ ಮಾಡಲು ಸಅಧ್ಯವಾಗಿಲ್ಲ. ಆದರೆ, ಆತಂಕಗೊಂಡ ಜನರು ನನ್ನಲ್ಲಿ ಬಂದು ಮನವಿ ಸಲ್ಲಿಸಿದ್ದಾರೆ. ಸುಮಾರು 500ಕ್ಕೂ ಹೆಚ್ಚು ಮನವಿಗಳು ನನಗೆ ಬಂದಿವೆ. ಬಹುತೇಕ ಎಲ್ಲರೂ ವಕ್ಫ್ ಬೋರ್ಡ್ ಆಸ್ತಿ ಕಬಳಿಸುವ ಆರೋಪ ಮಾಡಿದ್ದಾರೆ. ಕರ್ನಾಟಕ ಜನರ ಸಮಸ್ಯೆಗಳ ಆಲಿಸಿದ್ದೇನೆ. ಮನವಿ ಸ್ವೀಕರಿಸಿದ್ದೇನೆ. ಇದರ ವಿಸ್ತೃತ ವರದಿ ಸಿದ್ಧಪಡಿಸಿ ಸ್ಪೀಕರ್ ಅವರಿಗೆ ಸಲ್ಲಿಸುವೆ ಎಂದರು.

ಉತ್ತರ ಕರ್ನಾಟಕ ಭಾಗದ ಸುಮಾರು 50 ರಿಂದ 60 ವರ್ಷಗಳಿಂದ ಪಿತ್ರಾರ್ಜಿತವಾಗಿ ಉಳಿಮೆ ಮಾಡಿದ ಜಮೀನು, ದೇವಸ್ಥಾನಗಳನ್ನು ವಕ್ಫ್ ತನ್ನ ಹಕ್ಕು ಪ್ರತಿಪಾದಿಸುತ್ತಿದೆ. ಈ ಕುರಿತು ದಾಖಲೆಗಳನ್ನೂ ಕೂಡ ಹುಬ್ಬಳ್ಳಿ, ವಿಜಯಪುರ, ಬೀದರ್ ರೈತರ ಹಾಗೂ ಜನರು ಅಹವಾಲು ಸಲ್ಲಿಸಿದ್ದಾರೆ ಎಂದರು.

ಒಂದು ತಿಂಗಳೊಳಗೆ ಭೂ ದಾಖಲೆಗಳು ಮತ್ತು ಮ್ಯುಟೇಶನ್‌ನಲ್ಲಿ ಹೇಗೆ ಬದಲಾವಣೆಗಳನ್ನು ಮಾಡಲಾಗುತ್ತಿದೆ ಎಂದು ಪ್ರಶ್ನಿಸಿದ ಅವರು, ಅನೇಕರು ತಮ್ಮ ಜಮೀನುಗಳ ಮ್ಯುಟೇಷನ್‌ಗಾಗಿ ವರ್ಷಗಟ್ಟಲೇ ಅಲೆಯುತ್ತಿರುವಾಗ, ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು ವಕ್ಫ್ ಅದಾಲತ್ ನಡೆಸಿದ ಒಂದು ತಿಂಗಳಲ್ಲೇ ಸಾರ್ವಜನಿಕರ ಭೂಮಿ ಮತ್ತು ದೇವಾಲಯ ಅಷ್ಟೇ ಅಲ್ಲ ಐತಿಹಾಸಿಕ ಸ್ಮಾರಕಗಳ ಮೇಲೂ ವಕ್ಫ್ ತನ್ನ ಹಕ್ಕು ಪ್ರತಿಪಾದಿಸಿ ಪಹಣಿ ಸಏರಿದಂತೆ ಇತರ ದಾಖಲೆಗಳಲ್ಲಿ ತನ್ನ ಹೆಸರು ನಮೂದು ಮಾಡಿದೆ. ಇದು ಹೇಗೆ ಸಾದ್ಯ ಅಚ್ಚರಿಯಾಗುತ್ತದೆ. ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಮುಖ್ಯಮಂತ್ರಿಗಳ ಆದೇಶದ ಮೇರೆಗೆ ವಕ್ಫ್ ಅದಾಲತ್ ನಡೆಸಿರುವುದಾಗಿ ಹೇಳುತ್ತಿದ್ದಾರೆ. ಅಂದರೆ ಸರ್ಕಾರವೇ ಈ ಕುಕೃತ್ಯದಲ್ಲಿ ತೊಡಗಿದೆ. ರಾಜ್ಯ ಆಡಳಿತ ಮತ್ತು ಅಧಿಕಾರಿಗಳ ಸಹಕಾರವಿಲ್ಲದೆ ಇದು ಸಾಧ್ಯವಾಗದು. ರಾಜ್ಯದ ಈ ಪ್ರದೇಶದಲ್ಲಿ 500 ರಿಂದ 1,000 ವರ್ಷಗಳಷ್ಟು ಹಳೆಯದಾದ ಕೃಷಿ ಭೂಮಿಗಳು, ದೇವಾಲಯದ ಆಸ್ತಿಗಳು ಮತ್ತು ದಾಖಲೆಗಳನ್ನು ಹೊಂದಿರುವ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಹೇಗೆ ಘೋಷಿಸಲಾಗುತ್ತಿದೆ. ಇದು ಜನರ ವಿರುದ್ಧ ಸರ್ಕಾರದ ಕ್ರಮವಾಗಿದೆ ಎಂದೂ ಜಗದಾಂಬಿಕಾ ಪಾಲ್ ಅವರು ತಿಳಿಸಿದರು.


ರಾಜ್ಯದಲ್ಲಿ ಚಳಿಗಾಲ ಆರಂಭವಾಗಿದ್ದು, ಶುಕ್ರವಾರ ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ಮಂಜು ಮುಸುಕಿದ ವಾತಾವರಣ ಕಂಡುಬಂದಿದೆ.

# ರೈತರಿಗೆ ಅನುಕೂಲವಾಗುವಂತೆ ಖರೀದಿ ಕೇಂದ್ರಗಳನ್ನು ತೆರೆಯಿರಿ; ಡಾ.ಶರಣಪ್ರಕಾಶ್ ಪಾಟೀಲ್


ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಮಾತನಾಡಿದರು.

**ರಾಯಚೂರು, ನ.8–** ಜಿಲ್ಲೆಯ ರೈತರಿಗೆ ಅನುಕೂಲವಾಗುವಂತೆ ಬೆಳೆ ಕಟಾವು ಹಂತದಲ್ಲೇ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಕೇಂದ್ರಗಳನ್ನು ತೆರೆಯುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕೆಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ಪಾಟೀಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಲ್ಲಿ ಅಕ್ರಮ ಕುರಿತು ಯಾವುದಾದರೂ ಅರ್ಜಿಗಳು ಬಂದಲ್ಲಿ ಕೂಡಲೇ ಜಿಲ್ಲಾ ಮಟ್ಟದ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ, ಸತ್ಯವಿದ್ದರೆ ಕ್ರಮಕ್ಕೆ ಮುಂದಾಗಬೇಕು. ಅಧಿಕಾರಿಗಳು ರೈತರ ಸ್ಥಳಗಳಿಗೆ ಹೋಗಿ ವೀಕ್ಷಣೆ ಮಾಡಬೇಕು. ಅಲ್ಲದೆ ಜಿಲ್ಲೆಯ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಲ್ಲಿ ಜಾಗೃತಿ ಮೂಡಿಸಬೇಕು. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಹನಿ ನೀರಾವರಿ ಯೋಜನೆ ಪಡೆದ ರೈತರು ಜೀವನ ಪರಿ ಸೌಲಭ್ಯ ಪಡೆಯುವಂತಿಲ್ಲ. ವ್ಯವಸ್ಥೆಯನ್ನು ಬದಲಾವಣೆ ಮಾಡುವ ಸಲುವಾಗಿ ಸಂಬಂಧಿಸಿದ ಮೇಲಾಧಿಕಾರಿಗಳಿಗೆ ಪತ್ರ ಬರೆಯಲಾಗುತ್ತದೆ ಎಂದರು.

ಜಿಲ್ಲೆಯಲ್ಲಿ , ರೇಷ್ಮೆ ಬೆಳೆಯನ್ನು ವಿಸ್ತರಣೆ ಮಾಡಬೇಕು. ಅಲ್ಲದೆ ಅರಣ್ಯ ಇಲಾಖೆಯ ವತಿಯಿಂದ ನೂತನ ಜಿಲ್ಲಾಡಳಿತದ ಆವರಣದಲ್ಲಿ ಉತ್ತಮ ರೀತಿಯ ಗಿಡಗಳನ್ನು ನೆಡಬೇಕು. ಅದನ್ನು ಸರಿಯಾಗಿ ಪಾಲನೆ ಮಾಡಬೇಕು. ಜಿಲ್ಲೆಯ ಅಭಿವೃದ್ಧಿ ಕೆಲಸ ಕಾರ್ಯಗಳ ಸಲುವಾಗಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಜಿಲ್ಲಾ ಕೇಂದ್ರದಲ್ಲಿ ವಾಸವಾಗಬೇಕು. ಸರ್ಕಾರಕ್ಕೆ ಕೆಟ್ಟ ಹೆಸರು ಬಾರದ ರೀತಿಯಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ನಿರ್ದೇಶನ ನೀಡಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲಾ ಶಾಲಾ–ಕಾಲೇಜುಗಳಿಗೆ ಭೇಟಿ ಅಲ್ಲಿಯ ವ್ಯವಸ್ಥೆ ಬಗ್ಗೆ ಪರಿಶೀಲಿಸಿಕೊಳ್ಳಬೇಕು. 10 ಹಾಗೂ 12ನೇ ತರಗತಿಯ ಫಲಿತಾಂಶವನ್ನು ಉತ್ತಮಗೊಳಿಸಬೇಕೆಂದರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ 37ರೈತ ಸಂಪರ್ಕ ಕೇಂದ್ರಗಳಿಂದ ಮುಂಗಾರು ಹಂಗಾಮಿನಲ್ಲಿ ಭತ್ತ, ತೂಗರಿ, ಸಜ್ಜೆ, ಹೆಸರು, ಮೆಕ್ಕೆಜೋಳ ಹಾಗೂ ಸೂರ್ಯಕಾಂತಿ, ಬಿತ್ತನೆ ಬೀಜ ಒಟ್ಟು 5525.69 ಕ್ವಿಂಟಾಲ್ ದಾಸ್ತಾನು ಮಾಡಿ, 5052.70 ಕ್ವಿಂಟಾಲ್ ಬೀಜವನ್ನು ರೈತರಿಗೆ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗಿದೆ. ಅಲ್ಲದೆ ಹಿಂಗಾರು ಹಂಗಾಮಿನಲ್ಲಿ ಕಡಲೆ–4407.90 ಕ್ವಿಂಟಾಲ್, ಜೋಳ–33.05 ಕ್ವಿಂಟಾಲ್ ಮತ್ತು ನೆಲ ಗಡಲೆ–122.50 ಕ್ವಿಂಟಾಲ್ ಸೇರಿದಂತೆ ಒಟ್ಟು 4565.45 ಕ್ವಿಂಟಾಲ್ ಗಳಷ್ಟು ಬಿತ್ತನೆ ಬೀಜ ಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ.

2023–24ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ರಾಯಚೂರು ಹಾಗೂ ಸಹಕಾರಿ ಸಂಘಗಳಲ್ಲಿ 21009.42 ಮೆಟ್ರಿಕ್ ಟನ್ ಹಾಗೂ ಖಾಸಗಿ ಮಾರಾಟಗಾರರಲ್ಲಿ 231093.02 ಮೆಟ್ರಿಕ್ ಟನ್ ಸೇರಿದಂತೆ ಒಟ್ಟು 252102.44 ಮೆಟ್ರಿಕ್ ಟನ್ ರಸಗೊಬ್ಬರ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಪೂರೈಸಲಾಗಿದೆ. ಹಾಗೂ ಕಾಪು ದಾಸ್ತಾನು 2020.30 ಮೆಟ್ರಿಕ್ ಟನ್ ಹಾಗೂ ಖಾಸಗಿ ಮಳಿಗೆಗಳಲ್ಲಿ 72311.80 ಮೆಟ್ರಿಕ್ ಟನ್ ಸೇರಿದಂತೆ ಒಟ್ಟು ಜಿಲ್ಲೆಯಲ್ಲಿ 74332.096 ಮೆಟ್ರಿಕ್ ಟ???ನಷ್ಟು ದಾಸ್ತಾನು ಲಭ್ಯವಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಸಚಿವರಿಗೆ ಮಾಹಿತಿ ನೀಡಿದರು. ಜಿಲ್ಲೆಯ ಎಲ್ಲಾ ಜಾನುವಾರುಗಳಿಗೆ ನಿಗದಿತ ಕಾಲಕಾಲಕ್ಕೆ ರೋಗ ನಿಯಂತ್ರಣ ಲಸಿಕೆಯನ್ನು ಹಾಕಿಸಲು ರೈತರಲ್ಲಿ ಹೆಚ್ಚಿನ ಮಟ್ಟದಲ್ಲಿ ಜಾಗೃತಿ ಕೈಗೊಳ್ಳಬೇಕು. ಕೃತಕ ಗರ್ಭಧಾರಣೆ, ಮೇವು ಅಭಿವೃದ್ಧಿ ಪ್ಲಾಟುಗಳು ಸೇರಿದಂತೆ ರೋಗದ ವಿರುದ್ಧ ಲಸಿಕೆಯನ್ನು ನಿಗದಿತ ಗುರಿಗಿಂತ ಹೆಚ್ಚಿನ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಜಿಲ್ಲೆಯಲ್ಲಿ ಜೋಳ ಖರೀದಿ ಕೇಂದ್ರ ಸ್ಥಾಪಿಸಲು ತ್ವರಿತವಾಗಿ ನಿರ್ಧಾರ ಕೈಕೊಳ್ಳಬೇಕು. ಕಳೆದ ವರ್ಷ ಖರೀದಿ ಕೇಂದ್ರ ವಿಳಂಬವಾಗಿದ್ದರಿಂದ ರೈತರು ತೊಂದರೆ ಅನುಭವಿಸುವಂತಾಯಿತು. ಕೂಡಲೇ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

# ಸದನ ಸಮಿತಿ ಪ್ರವಾಸ ರಾಜಕೀಯ ಪ್ರೇರಿತ: ಪ್ರಿಯಾಂಕ್ ಖರ್ಗೆ



**ಕಲಬುರಗಿ, ನ.8–** ವಕ್ಫ್ ತೆಗಿಯಬೇಕೆಂದು ಬಿಜೆಪಿಯವರು ಹೇಳ್ತಾರಲ್ಲ, ಒಂದೂವರೆ ವರ್ಷದ ಹಿಂದೆ ಬಿಜೆಪಿ ಸರ್ಕಾರವೇ ಇತ್ತು. ಆಗ ಇವರೇನು ಮಾಡಿದರು ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೇ ಇದೆಲ್ಲಾ ನೆನಪಾಗುತ್ತಾ ಸದನ ಸಮಿತಿಯ ಸದಸ್ಯರಿಲ್ಲದೇ, ಅಧ್ಯಕ್ಷರು ಮಾತ್ರ ಪ್ರವಾಸ ಕೈಕೊಂಡಿದ್ದು, ಈ ಪ್ರವಾಸವೇ ರಾಜಕೀಯ ಪ್ರೇರಿತವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಗುಡುಗಿದರು.

ನಗರದ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಚೆಯಿಂದಲೂ ಅಂದರೆ ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗಿಂದಲೂ ರೈತರಿಗೆ ವಕ್ಫ್ ನೋಟಿಸ್ ಬಂದಿವೆ. ಆಗ ಯಾರೊಬ್ಬರೂ ಮಾತನಾಡಲಿಲ್ಲ. ಈಗ ಉಪಚುನಾವಣೆ ಬಂದಾಗ ಇದನ್ನ ದೊಡ್ಡ ಇಶ್ಯು ಮಾಡಿದ್ದಾರೆ. ವಕ್ಫ್ ಆಸ್ತಿಯನ್ನು ಜಿಐಎಸ್ ಮ್ಯಾಪ್ ಮಾಡಿಸುತ್ತಿರುವುದು ಯಾರು ಬಿಜೆಪಿಯವರೇ ಮಾಡುತ್ತಿರುವುದು. ಇದಕ್ಕೆ ಶೋಭಾ ಕರಂದ್ಲಾಜೆ ಎನು ಹೇಳುತ್ತಾರೆ ಅವಾಗ ಯಾಕೆ ಶೋಭಾ ಅವರು ಪ್ರತಿಭಟನೆ ಮಾಡಲಿಲ್ಲ. ಜಿಐಎಸ್ ಮ್ಯಾಪಿಂಗ್‌ಗೆ 330 ಕೋಟಿ ಖರ್ಚು ಮಾಡಿದ್ದು ಬಿಜೆಪಿಯ ಕೇಂದ್ರ ಸರ್ಕಾರ. ಆಗ ಇವರಿಗೆ ಇದರ ಅರಿವಿತ್ತಲ್ಲ. ಈಗ್ಯಾಕೆ ಇಂತಹ ಡ್ರಾಮಾಗಳನ್ನು ಮಾಡಿ ರೈತರನ್ನು, ಜನರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ಪ್ರಶ್ನಿಸಿದರು.

ವಕ್ಫ್ ಆಸ್ತಿ ಸಂರಕ್ಷಣೆಗೆ ಹಣ ಖರ್ಚು ಮಾಡಿದ್ದು ಬಿಜೆಪಿಯವರು. ಕೇಂದ್ರದಲ್ಲಿ ಬಿಜೆಪಿ ಸರ್ಕಾರಕ್ಕೆ 11 ವರ್ಷವಾಯಿತು, ಇನ್ನೂ ಯಾಕೆ ವಕ್ಫ್ ಬ್ಯಾನ್ ಮಾಡಿಲ್ಲ ಕಾಂಗ್ರೆಸ್ ಆಧಿಕಾರದಲ್ಲಿದ್ದ ರಾಜ್ಯಗಳಲ್ಲಿ ಮಾತ್ರವೇ ನಿಮಗೆ ವಕ್ಫ್ ರದ್ದು ವಿಚಾರ ಹೊಳೆಯುತ್ತದೇನು ಎಂದು ಕುಟುಕಿದರು.

ವಕ್ಫ್ ವಿಚಾರವಾಗಿ ರಾಜ್ಯ ಜೆಪಿಸಿ ಸಮಿತಿ ಭೇಟಿಗೆ ಖಾರವಾಗಿ ಪ್ರತಿಕ್ರಿಯಿಸಿದ ಅವರು, ಜಂಟಿ ಪಾರ್ಲಿಮೆಂಟ್ ಸಮಿತಿ ಎಂದರೇನು ಕಮಿಟಿಯ ಎಲ್ಲಾ ಸದಸ್ಯರು ಬರಬೇಕಲ್ವಾ ಬರೀ ಅಧ್ಯಕ್ಷರು ಮಾತ್ರ ಬಂದಿದ್ದಾರೆ. ಅವರ ಜೊತೆ ಯಾರಿದ್ದಾರೆ ಬಿಜೆಪಿಯ ಮಾಜಿ ಎಂಪಿ ಇದ್ದಾರೆ. ಅವರಿಗೂ ಸಮಿತಿಗೂ ಏನು ಸಂಬಂಧ ನಿಮ್ಮ ನಾಟಕ ಅರ್ಥವಾಗುವುದಿಲ್ಲವೆ ಉಪ ಚುನಾವಣೆಗಳಲ್ಲಿ ನೀವು ಹೀಗೆ ಅರ್ಥಹೀನವಾಗಿ ನಡೆದು ಕೊಂಡರೆ ನಿಮ್ಮ ಸಿದ್ಧಾಂತಕ್ಕೇನು ಅರ್ಥ ಎಂದು ವಾಗ್ದಾಳಿ ನಡೆಸಿದರು.

## ಗ್ರಾಮೀಣ ಶಾಲೆಗೆ ಡಿಸಿ ಭೇಟಿ

# ಶಾಲಾ ಮಕ್ಕಳೊಂದಿಗೆ ಸಂವಾದ, ಅಧಿಕಾರಿಗಳೊಂದಿಗೆ ಸಭೆ


ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಗ್ರಾಮೀಣ ಶಾಲೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

**ಕಲಬುರಗಿ, ನ.8–** ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲೆಯ ಆಳಂದ ತಾಲೂಕಿಗೆ ಭೇಟಿ ನೀಡಿ ತಾಲೂಕಾ ಅಧಿಕಾರಿಗಳೊಂದಿಗೆ ಸಭೆ ನಡೆಸುವುದರ ಜೊತೆಗೆ ಆಳಂದ ಪಟ್ಟಣದ ಸರ್ಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ ಮಕ್ಕಳೊಂದಿಗೆ ಕೆಲ ಹೊತ್ತು ಕಳೆದು ಅವರೊಂದಿಗೆ ಸಂವಾದ ನಡೆಸಿದರು.

ಜಿಲ್ಲಾಧಿಕಾರಿಗಳು ಕಳೆದ ವರ್ಷದಿಂದ ಜಿಲ್ಲೆಯಲ್ಲಿ ಐ.ಎ.ಎಸ್., ಐ.ಪಿ.ಎಸ್, ಐ.ಎಫ್.ಎಸ್, ಕೆ.ಎ.ಎಸ್ ಸೇರಿದಂತೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಆಗಾಗ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿ ಮಕ್ಕಳ ಅಹವಾಲು ಆಲಿಸುವುದಲ್ಲದೆ ಅವರ ಮುಂದಿನ ಶೈಕ್ಷಣಿಕ ಭವಿಷ್ಯ ಉತ್ತಮವಾಗಿಸಲು ಹುರಿದುಂಬಿಸುವ ಸಲುವಾಗಿ ನೇರಾನೇರ ಚರ್ಚಿಸುವ "ಸ್ಫೂರ್ತಿ ಕಿರಣ" ಎಂಬ ವಿನೂತನ ಕಾರ್ಯಕ್ರಮ ಆರಂಭಿಸಿದ್ದು, ಅದರಂತೆ ಬುಧವಾರ ಶಾಲಾ ಮಕ್ಕಳೊಂದಿಗೆ ಅವರು ಬೆರೆತರು. ಮಕ್ಕಳೊಂದಿಗೆ ಮಾತುಕತೆ ನಡೆಸುತ್ತಾ ಅವರ ಮುಂದಿನ ಶಿಕ್ಷಣ, ಗುಣಮಟ್ಟದ ಕಲಿಕೆ, ಜ್ಞಾನ ಸಂಗ್ರಹಣೆ ಸೇರಿದಂತೆ ವಿವಿಧ ವಿಷಯಗಳು ಮಕ್ಕಳೊಂದಿಗೆ ಮುಕ್ತವಾಗಿ ಚರ್ಚಿಸಿ ಜೀವನದಲ್ಲಿ ಏನಾದರೂ ಸಾಧಿಸಿಬೇಕಾದರೆ ಕಠಿಣ ಪರಿಶ್ರಮ ಅಗತ್ಯ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ, ಬಿ.ಇ.ಓ ಸಿ.ಜಿ. ಹಳ್ಳದ, ಶಾಲಾ ಮುಖ್ಯೋಪಾದ್ಯಾಯರು, ಶಿಕ್ಷಕರು ಸಾತ್ ನೀಡಿದರು. ಇದಕ್ಕು ಮುನ್ನ ಆಳಂದ ತಹಶೀಲ್ದಾರ ಕಚೇರಿಯಲ್ಲಿ ತಾಲೂಕಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖಾವಾರು ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ, ಕಾಲಮಿತಿಯಲ್ಲಿ ಭೌತಿಕ ನತ್ತು ಆರ್ಥಿಕ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು.

ನಂತರ ಜಿಲ್ಲಾಧಿಕಾರಿಗಳು ಆಳಂದ ಪಟ್ಟಣದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿ ರೈತರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು ವಿಚಾರಿಸಿದರು. ಪಟ್ಟಣದ ಬಿ.ಸಿ.ಎಂ. ಇಲಾಖೆಯ ಮೆಟ್ರಿಕ್ ನಂತರ ವಸತಿ ನಿಲಯಕ್ಕೆ ಭೇಟಿ ನೀಡಿ ಅಲ್ಲಿ ನಿಲಯಾರ್ಥಿಗಳೊಂದಿದೆ ಚಹಾ ಸವಿದ ಅವರು, ಹಾಸ್ಟೆಲ್ ನಲ್ಲಿ ನೀಡಲಾಗುತ್ತಿರುವ ಊಟ, ವಸತಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಂದ ಮಾಹಿತಿ ಪಡೆದರು. ವಸತಿ ನಿಲಯದಲ್ಲಿ ಶುಚಿತ್ವ ಮತ್ತು ನೈರ್ಮಲ್ಯದಿಂದ ಕಾಪಾಡಿಕೊಳ್ಳುವಂತೆ ವಾರ್ಡನ್ ಅವರಿಗೆ ನಿರ್ದೇಶನ ನೀಡಿದರು.

ಪಟ್ಟಣದಲ್ಲಿರುವ ಪುರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕಕ್ಕೂ ಡಿ.ಸಿ. ಭೇಟಿ ನೀಡಿ ಪರಿಶೀಲಿಸಿದರು.

## ಒಂದೇ ರಾತ್ರಿ ಮೂರು ಮನೆಗಳಿಗೆ ಕನ್ನ

# 40 ಲಕ್ಷಕ್ಕೂ ಅಧಿಕ ಮೌಲ್ಯದ ಸೊತ್ತು ಕಳ್ಳತನ: ಜನ ಕಂಗಾಲು



**ಬೀದರ್, ನ.8–** ಮನೆಯಲ್ಲಿ ಯಾರೂ ಇಲ್ಲದ್ದನ್ನು ಗಮನಿಸಿ ಒಂದೇ ರಾತ್ರಿ ಮೂರು ಮನೆಗಳ ಬೀಗ ಮುರಿದು ಬಂಗಾರ–ನಗದು ಹಣ ಸೇರಿ 40 ಲಕ್ಷಕ್ಕೂ ಹೆಚ್ಚು ಮೌಲ್ಯದ ಸ್ವತ್ತು ಕಳ್ಳತನ ಮಾಡಲಾದ ಘಟನೆ ಜಿಲ್ಲೆಯ ಹುಮನಾಬಾದ ಪಟ್ಟಣದ ಅತೀ ಮುಖ್ಯರಸ್ತೆಯ ಪುಟಾಣಿ ಓಣಿ ಹಾಗೂ ಮಲ್ಲಿಕಾರ್ಜುನ ರಸ್ತೆ ಸೈಯದ್ ಓಣಿಯಲ್ಲಿ ಬುಧವಾರ ಬೆಳಗಿನ ಜಾವ 4ರ ಆಸುಪಾಸಲ್ಲಿ ಸಂಭವಿಸಿದೆ.

ಕಳ್ಳತನವಾಗಿರುವ ಮನೆ ಪುಟಾಣಿ ಓಣಿಯಲ್ಲಿನ ಡಯ ಜೋಡೆ ಮತ್ತು ಅವರ ಪಕ್ಕದ ಅಶೋಕ ಕ್ಷೀರಸಾಗರ್ ಹಾಗೂ ಸೈಯದ್ ಓಣಿಯ ಸೈಯದ್ ಇಬ್ರಾಹಿಂ ಅವರಿಗೆ ಸೇರಿದ ಮನೆಗಳೆಂದು ತಿಳಿದುಬಂದಿದೆ. ಈ ಪೈಕಿ ಅಭಿಷೇಕ್ ಡಯಜೋಡೆ ಅವರ ವ ನೆಯಲ್ಲಿದ್ದ 1 ಡೈಮಂಡ್ ನೆಕಲೆಸ್, 42 ತೊಲಾ ಬಂಗಾರ, 500ಗ್ರಾಂ ಬೆಳ್ಳಿ, 1ಲಕ್ಷ ನಗದು, ಅಶೋಕ ಕ್ಷೀರಸಾಗರ ಅವರ ಮನೆಯ ಲ್ಲಿದ್ದ 15ಗ್ರಾಮ ಬಂಗಾರದ ಒಡವೆ, 25 ಸಾವಿರ ನಗದು ಕಳ್ಳತನ ಆಗಿದೆ. ಇನ್ನೂ ಸೈಯದ್ ಓಣಿಯ ಸೈಯದ್ ಇಬ್ರಾಹಿಂ ಅವರ ಮನೆ ಬೀಗ ಮುರಿದ ಕಳ್ಳರು ಮನೆಯಲ್ಲಿದ್ದ 50ಗ್ರಾಂ ಬಂಗಾರ, 400ಗ್ರಾಂ ಬೆಳ್ಳಿ, 30ಸಾವಿರ ನಗದು ಮತ್ತಿತರ ವಸ್ತು ಸೇರಿ ಅಂದಾಜು 4 ಲಕ್ಷ ಮೌಲ್ಯದ ಸ್ವತ್ತು ಕಳ್ಳತನ ಆಗಿರುವುದಾಗಿ ಸಂತ್ರಸ್ತರು ತಿಳಿಸಿದ್ದಾರೆ. ಪೊಲೀಸರ ಭೇಟಿ' : ಘಟನೆ ಹಿನ್ನೆಲೆಯಲ್ಲಿ ಡಿವೈಎಸ್ಪಿ ಜೆ.ಎಸ್.ನ್ಯಾಮಗೌಡರ್, ಪಿಎಸ್ಐ ಸುರೇಶಕುಮಾರ ಚವ್ಹಾಣ್, ಜಿಲ್ಲಾ ಶ್ವಾನದಳ, ಬೆರಳಚ್ಚು ತಂಡ ಭೇಟಿ ನೀಡಿ ಪರಿಶೀಲಿಸಿದ್ದು ಸಿಸಿ ಕ್ಯಾಮೆರಾಗಳ ಸಾಕ್ಷಿಯನ್ನಾಧರಿಸಿ, ತನಿಖೆ ಚುರುಕ ಗೊಳಿಸಿದ್ದಾರೆ. ಪಟ್ಟಣ ಸೇರಿದಂತೆ ಉಪ ವಿಭಾಗ ವ್ಯಾಪ್ತಿಯಲ್ಲಿ ನಡೆದ ದರೋಡೆ, ಕಳ್ಳತನ ಪ್ರಕರಣ ಬೇಧಿಸಿ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠ ಮಹೇಶ ಮೇಘಣ್ಣನವರ ಅವರು ಸಂತ್ರಸ್ತರಿಗೆ ಸ್ವತ್ತು ಮರಳಿಸಿ, ಡಿವೈಎಸ್‌ಪಿ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ, ಪ್ರತಿಯೊಬ್ಬರೂ ಕಡ್ಡಾಯವಾಗಿ ಸಿಸಿ ಕ್ಯಾಮೆರಾ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು.

'ನಿದ್ದೆಗೆಡಿಸಿದ ಕಳ್ಳತನ ಪ್ರಕರಣ' ಪಟ್ಟಣದಲ್ಲಿ ಕಳೆದ ಕೆಲವು ದಿನಗಳಿಂದ ಮೇಲಿಂದ ಮೇಲೆ ಮನೆ ಬೀಗ ಮುರಿದು ಕಳ್ಳತನ ಪ್ರಕರಣ ನಡೆಯುತ್ತಿರುವುದು ಪಟ್ಟಣದ ನಿವಾಸಿಗಳ ನಿದ್ದೆಗೆಡಿಸಿದೆ. ಪಟ್ಟಣದ ಅತೀ ಮುಖ್ಯರಸ್ತೆ ಎಂದೇ ಹೇಳಲಾಗುವ ಶಿವಚಂದ್ರ ರಸ್ತೆಯ ಜನನಿಭಿಡ ಪ್ರದೇಶದಲ್ಲಿ ಒಂದಾದ ಪುಟಾಣಿ ಓಣಿಯಲ್ಲೇ ಕಳ್ಳತನ ನಡೆದಿದೆ ಎಂದರೇ ನಮ್ಮ ಗತಿ ಏನು ಎಂಬ ಚಿಂತೆ ಪಟ್ಟಣದ ಇತರೆ ನಿವಾಸಿಗಳನ್ನು ಕಾಡುತ್ತಿದೆ.

# ನೀರಿನ ಮೂಲಗಳ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಶಿವಾನಂದ


ಜಿಲ್ಲೆಯಲ್ಲಿ ನ.06ರಿಂದ 20ವರೆಗೆ ಜಲ ಜೀವನ ಮಿಷನ್ ಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಲೋತ್ಸವ ಆಂದೋಲನಕ್ಕೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಚಾಲನೆ ನೀಡಿದರು.

**ರಾಯಚೂರು, ನ.8–** ನೀರು ಅಮೂಲ್ಯ ವಸ್ತು ಅದನ್ನು ಪೋಲಾಗದಂತೆ ಮಿತಬಳಕೆ ಮಾಡಬೇಕು. ಹಾಗೂ ನೀರಿನ ಮೂಲಗಳನ್ನು ಸಂರಕ್ಷಣೆಯು ಪ್ರತಿಯೊಬ್ಬರ ಜವಾಬ್ದಾರಿ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ನೀತಿ ಆಯೋಗ ಕಾರ್ಯಕ್ರಮದಡಿಯಲ್ಲಿ ಜಲಶಕ್ತಿ ಮಂತ್ರಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಭಾಗಿತ್ವದಲ್ಲಿ ಜಿಲ್ಲೆಯಲ್ಲಿ ನ.06ರಿಂದ 20ವರೆಗೆ ಜಲಜೀವನ ಮಿಷನ್ ಯೋಜನೆಯಡಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಲೋತ್ಸವ ಆಂದೋಲನಕ್ಕೆ ಚಾಲನೆ ನೀಡಿ, ಮಾತನಾಡಿದರು.

ಮಹತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರು ಹಾಗೂ ತಾಲೂಕಗಳಲ್ಲಿ ಜಲಮೂಲಗಳ ಜಲ ಸುಸ್ಥಿರತೆಯ ಕುರಿತು ಸಾರ್ವಜನಿಕರಲ್ಲಿ ವ್ಯಾಪಕವಾದ ಅರಿವು ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು. ನೀತಿ ಆಯೋಗವು ರಾಯಚೂರು ಜಿಲ್ಲೆಯನ್ನು ಮಹತ್ವಾಕಾಂಕ್ಷಿ ಜಿಲ್ಲೆಯನ್ನಾಗಿ ಆಯ್ಕೆ ಮಾಡಿದ್ದು, ಈ ನಿಟ್ಟಿನಲ್ಲಿ ನಮಗೆ ನೀಡಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು ಎಂದರು.

# ಯುವಜನೋತ್ಸವ–ಅರ್ಥಪೂರ್ಣ ಆರಂಭ: ಹೊಸತನವಿಲ್ಲದ ರಿಯಾಲಿಟಿ ಶೋ: ಗುರುರಾಜ ಹೊಸಕೋಟಿ


ಬೀದರ್‌ನಲ್ಲಿ ಆಯೋಜಿಸಲಾದ 15ನೇ ಅಂತರ್ ತೋಟಗಾರಿಕೆ ಮಹಾವಿದ್ಯಾಲಯಗಳ ಯುವಜನೋತ್ಸವ–ಕಲಾ ಬಿದರಿ ಸಂಗಮವನ್ನು ಖ್ಯಾತ ಜಾನಪದ ಕಲಾವಿದ ಗುರುರಾಜ ಹೊಸಕೋಟಿ ಉದ್ಘಾಟಿಸಿದರು.

**ಬೀದರ್, ನ.8–** ರಿಯಾಲಿಟಿ ಷೋ ಕಾರ್ಯಕ್ರಮಗಳ ಮೂಲಕ ಪ್ರೇಕ್ಷಕರಿಗೆ ಹಳಸಿದ್ದನ್ನು ಉಣಬಡಿಸಲಾಗುತ್ತಿದೆ' ಎಂದು ಖ್ಯಾತ ಜಾನಪದ ಕಲಾವಿದ ಮತ್ತು ಚಿತ್ರನಟ ಗುರುರಾಜ ಹೊಸಕೋಟಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮೂರು ದಿನಗಳವರೆಗೆ ಇಲ್ಲಿಯ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿರುವ 15ನೇ ಅಂತರ್ ತೋಟಗಾರಿಕೆ ಮಹಾ ವಿದ್ಯಾಲಯಗಳ ಯುವಜನೋತ್ಸವ–ಕಲಾ ಬಿದರಿ ಸಂಗಮ 2024 ಉದ್ಘಾಟಿಸಿ ಅವರು ಮಾತನಾಡಿದರು. ರಿಯಾಲಿಟಿ ಷೋ ಕಾರ್ಯಕ್ರಮಗಳಲ್ಲಿ ಹೊಸತೇನೂ ಇಲ್ಲ, ರಿಯಾಲಿಟಿ ಷೋ ಕಾರ್ಯಕ್ರಮಗಳಲ್ಲಿನ ತೀರ್ಪುಗಾರರಿಗಿಂತ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಕಲಾವಿದರು ಗಳೇ ಹೆಚ್ಚು ವಿಷಯ ಪರಿಣಿತರಾಗಿರುತ್ತಾರೆ. ಕಲಾ ಪ್ರದರ್ಶನದ ವ್ಯವಸ್ಥೆ ಮತ್ತು ವಿಧಾನ ಕೆಟ್ಟುಹೋಗಿದೆ ಎಂದು ರಿಯಾಲಿಟಿ ಷೋಗಳ ವೈಖರಿಯನ್ನು ಟೀಕಿಸಿದ ಅವರು, ರಿಯಾಲಿಟಿ ಷೋ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಐಲು ಯುವವೃಂದಕ್ಕೆ ಆವರಿಸಿದೆ. ಇದಕ್ಕೆ ತದ್ವಿರುದ್ಧ ಎಂಬಂತೆ ಯುವಜನೋತ್ಸವದಂಥ ಕಾರ್ಯಕ್ರಮಗಳು ಯುವವೃಂದದಲ್ಲಿನ ಪ್ರತಿಭೆಗಳನ್ನು ಸಾಣೆ ಹಿಡಿಯುತ್ತವೆ ಮತ್ತು ಯುವವೃಂದದಲ್ಲಿನ ಸುಪ್ತ ಪ್ರತಿಭೆಯನ್ನು ಗುರುತಿಸಿ ಹೊರತರುವುದಕ್ಕೆ ಉತ್ತಮ ವೇದಿಕೆಯಾಗಿವೆ ಎಂದು ಜಾನಪದ ಕಲಾವಿದ ಗುರುರಾಜ ಹೊಸಕೋಟೆ ಮೆಚ್ಚುಗೆಯ ಧ್ವನಿಯಲ್ಲಿ ನುಡಿದರು.

**ಸೃಜನಶೀಲತೆ :** ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಮಾತನಾಡಿದ ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಯುವಜನೋತ್ಸವ ದಂಥ ಕಾರ್ಯಕ್ರಮಗಳು ಯುವವೃಂದದ ಸೃಜನಶೀಲತೆಗೆ ಸಹಕಾರಿಯಾಗುತ್ತವೆ ಎಂದು ನುಡಿದರು.

ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ವಿಷ್ಣುವರ್ಧನ್ ಮಾತನಾಡಿ, ಇಂದಿನ ದಿನಗಳಲ್ಲಿ ಶೈಕ್ಷಣಿಕವಾಗಿ ಕೌಶಲ್ಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಲಿದೆ. ಕೌಶಲ್ಯ ಅಭಿವೃದ್ಧಿ ಬೇಡ ಎಂದು ಹೇಳಲಾಗದು. ಕೌಶಲ್ಯದ ಜೊತೆಗೆ ಸಾಮಾನ್ಯ ಜ್ಞಾನ ಕೂಡ ಅಗತ್ಯ ಎಂದು ಮಾರ್ಮಿಕವಾಗಿ ನುಡಿದರು. ಈ ನಿಟ್ಟಿನಲ್ಲಿ ಪಠ್ಯಕ್ರಮ ಸೀಮಿತ ಚೌಕಟ್ಟಿಗೆ ಸೀಮಿತವಾಗಿರಲಾರದೇ ವಿಷಯ ವೈವಿಧ್ಯತೆ ಹೊಂದಿರಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಆತಿಥೇಯ ಬೀದರ್ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಮತ್ತು ಯುವಜನೋತ್ಸವದ ಸಂಘಟನಾ ಕಾರ್ಯ ದರ್ಶಿ ಡಾ. ಎಸ್.ವಿ. ಪಾಟೀಲ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಪ್ರಸನ್ನ ಕಾರ್ಯಕ್ರಮ ನಿರೂಪಿಸಿದರು. ಜಾನಪದ ಕಲಾವಿದ ಗುರುರಾಜ ಹೊಸಕೋಟೆ ಮತ್ತು ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಸನ್ಮಾನಿಸಲಾಯಿತು.

# ವಲಸಿಗರಿಗೆ ಪೌರತ್ವ–ಬೈಡನ್ ಆಡಳಿತದ ನೀತಿ ರದ್ದು: ಫೆಡರಲ್ ನ್ಯಾಯಾಧೀಶರ ತೀರ್ಪು



**ವಾಷಿಂಗ್ಟನ್,ನ.8:** ಅಮೆರಿಕದ ಪ್ರಜೆಗಳನ್ನು ಮದುವೆಯಾಗಿರುವ ವಲಸಿಗರಿಗೆ ಪೌರತ್ವ ನೀಡುವ ಪ್ರಕ್ರಿಯೆಯನ್ನು ಸರಾಗಗೊಳಿಸುವ ಉದ್ದೇಶದೊಂದಿಗೆ ಜೋ ಬೈಡನ್ ಆಡಳಿತವು ಜಾರಿಗೆ ತಂದಿದ್ದ ನೀತಿಯೊಂದನ್ನು ಫೆಡರಲ್ ನ್ಯಾಯಾಧೀಶರು ಗುರುವಾರ ರದ್ದುಗೊಳಿಸಿದ್ದಾರೆ. ಅಮೆರಿಕದ ಪ್ರಜೆಗಳನ್ನು ಮದುವೆಯಾಗಿರುವ ವಲಸಿಗರು ತಮ್ಮ ಬಳಿ ಸೂಕ್ತ ದಾಖಲೆಗಳು ಇಲ್ಲದಿದ್ದರೂ, ದೇಶವನ್ನು ತೊರೆಯದೆಯೇ 'ಗ್ರೀನ್ ಕಾರ್ಡ್'ಗೆ ಅರ್ಜಿ ಸಲ್ಲಿಸಲು ಈ ನೀತಿ ಅವಕಾಶ ಮಾಡಿಕೊಟ್ಟಿತ್ತು. ವಲಸಿಗ ಕುಟುಂಬಗಳಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಅಮೆರಿಕದ ಅಧ್ಯಕ್ಷರು ಜಾರಿಗೊಳಿಸಿರುವ ಅತಿದೊಡ್ಡ ಕಾರ್ಯಕ್ರಮ ಇದು ಎಂದು ಈ ನೀತಿಯನ್ನು ಬಣ್ಣಿಸಲಾಗಿತ್ತು. ಗಡೀಪಾರು ಆತಂಕ ಎದುರಿಸುತ್ತಿದ್ದ ಸುಮಾರು 5 ಲಕ್ಷ ವಲಸಿಗರು ಇದರಿಂದ ತಾತ್ಕಾಲಿಕವಾಗಿ ನಿರಾಳರಾಗಿದ್ದರು. ಆದರೆ, ಈ ನೀತಿಗೆ ಆಕ್ಷೇಪ ವ್ಯಕ್ತಪಡಿಸಿ ಅರ್ಜಿಗಳು ಸಲ್ಲಿಕೆಯಾದ್ದರಿಂದ ಫೆಡರಲ್ ನ್ಯಾಯಾಧೀಶ ಕೆ.ಕ್ಯಾಂಪ್ಬೆಲ್ ಬಾರ್ಕರ್ ಅವರು ಆಗಸ್ಟ್ ತಿಂಗಳಲ್ಲಿ ತಡೆ ನೀಡಿದ್ದರು. ಗುರುವಾರ ಅಂತಿಮ ತೀರ್ಪು ನೀಡಿರುವ ಬಾರ್ಕರ್, ಈ ನೀತಿಯನ್ನು ರದ್ದುಗೊಳಿಸುವುದಾಗಿ ಪ್ರಕಟಿಸಿದರು. 'ಈ ಕಾರ್ಯಕ್ರಮ ಅನುಷ್ಠಾನಗೊಳಿಸುವ ಮೂಲಕ ಬೈಡನ್ ಆಡಳಿತವು ತನ್ನ ಅಧಿಕಾರದ ವ್ಯಾಪ್ತಿಯನ್ನು ಮೀರಿದೆ' ಎಂದು ತೀರ್ಪಿನಲ್ಲಿ ತಿಳಿಸಿದರು. 'ಕುಟುಂಬಗಳನ್ನು ಒಟ್ಟಿಗೆ ಇಟ್ಟುಕೊಳ್ಳುವುದು' ಎಂಬ ಘೋಷವಾಕ್ಯದೊಂದಿಗೆ ಬೈಡನ್ ಆಡಳಿತ ಜಾರಿಗೊಳಿಸಿರುವ ಈ ಅಲ್ಪಾವಧಿ ನೀತಿಯು, ಡೊನಾಲ್ಡ್ ಟ್ರಂಪ್ ಅವರು ಅಧಿಕಾರ ವಹಿಸಿಕೊಂಡ ಬಳಿಕ ಮುಂದುವರಿಯುವುದು ಅನುಮಾನ ಎನಿಸಿತ್ತು. ಇದೀಗ ಅದಕ್ಕೂ ಮೊದಲೇ ರದ್ದಾಗಿರುವುದರಿಂದ ಸಾವಿರಾರು ವಲಸಿಗ ಕುಟುಂಬಗಳ ಮೇಲೆ ಅನಿಶ್ಚಿತತೆಯ ಕಾರ್ಮೋಡ ಕವಿದಿದೆ. ಬೈಡನ್ ಜಾರಿಗೆ ತಂದಿರುವ ನೀತಿಯು ದೇಶದ ಆರ್ಥಿಕ ಹೊರೆಯನ್ನು ಹೆಚ್ಚಿಸಿದೆಯಲ್ಲದೆ, ಇನ್ನಷ್ಟು ವಲಸಿಗರನ್ನು ಅಮೆರಿಕದತ್ತ ಸೆಳೆಯಬಹುದು ಎಂದು ರಿಪಬ್ಲಿಕನ್ ಪಕ್ಷದವರು ಟೀಕಿಸಿದ್ದರು.

# ಸೂಸಿ ವೈಲ್ಸ್ ಶ್ವೇತಭವನ ಮುಖ್ಯಸ್ಥೆ



**ಅಮೆರಿಕ,ನ.8:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ವರ್ಷ ತಮ್ಮ ಚುನಾವಣಾ ಪ್ರಚಾರ ಸಮಯದಲ್ಲಿ ಸಾಥ್ ನೀಡಿದ್ದ ಸೂಸಿ ವೈಲ್ಸ್ ಅವರನ್ನು ಶ್ವೇತಭವನದ ಮುಖ್ಯಸ್ಥರೆಂದು ಘೋಷಿಸಿದ್ದು, ಅಮೆರಿಕದಲ್ಲಿ ಈ ಪ್ರಭಾವಿ ಹುದ್ದೆಯನ್ನು ವಹಿಸುತ್ತಿರುವ ಮೊದಲ ಮಹಿಳೆಯಾಗಿದ್ದಾರೆ.

ಟ್ರಂಪ್ ಅವರ ಚುನಾವಣಾ ಪ್ರಚಾರವನ್ನು ಅತ್ಯಂತ ಶಿಸ್ತುಬದ್ಧವಾಗಿ ಮತ್ತು ಉತ್ತಮವಾಗಿ ಕಾರ್ಯಗತಗೊಳಿಸಿದ್ದಕ್ಕಾಗಿ ವೈಲ್ಸ್ ಅವರ ಆಂತರಿಕ ವಲಯದ ಒಳಗೆ ಮತ್ತು ಹೊರಗೆ ವ್ಯಾಪಕವಾಗಿ ಮನ್ನಣೆ ಪಡೆದಿದ್ದಾರೆ. ಅಮೆರಿಕವನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಲು ಸೂಸಿ ದಣಿವರಿಯಿಲ್ಲದೆ ಕೆಲಸ ಮಾಡುವುದನ್ನು ಮುಂದುವರಿಸುತ್ತಾರೆ ಎನ್ನಲಾಗಿದೆ. ಅಮೆರಿಕದ ಇತಿಹಾಸದಲ್ಲಿ ಸೂಸಿ ಅವರು ಮೊದಲ ಮಹಿಳಾ ಸಿಬ್ಬಂದಿ ಮುಖ್ಯಸ್ಥರಾಗುವುದು ಅರ್ಹವಾದ ಗೌರವವಾಗಿದೆ. ಅವರು ನಮ್ಮ ದೇಶ ಹೆಮ್ಮೆಪಡುವಂತೆ ಕೆಲಸ ಮಾಡುತ್ತಾರೆ ಎಂಬುದರಲ್ಲಿ ನನಗೆ ಸಂದೇಹವಿಲ್ಲ ಎಂದು ಟ್ರಂಪ್ ಹೇಳಿದ್ದಾರೆ. ಅಮೆರಿಕದ ಇತಿಹಾಸದಲ್ಲಿ ಶ್ರೇಷ್ಠ ರಾಜಕೀಯ ಜಯ ಸಾಧಿಸಲು ಸೂಸಿ ವೈಲ್ಸ್ ನನಗೆ ಸಹಾಯ ಮಾಡಿದರು. ಅವರು ನನ್ನ 2016 ಮತ್ತು 2020 ರ ಯಶಸ್ವಿ ಪ್ರಚಾರಗಳ ಅವಿಭಾಜ್ಯ ಅಂಗವಾಗಿದ್ದರು ಎಂದು ಟ್ರಂಪ್ ಹೇಳಿದ್ದಾರೆ. ಸೂಸಿ ಕಠಿಣ, ಬುದ್ಧಿವಂತಿಕೆಯ, ನವೀನ, ಮತ್ತು ಸಾರ್ವತ್ರಿಕವಾಗಿ ಮೆಚ್ಚುಗೆ ಮತ್ತು ಗೌರವಾನ್ವಿತ ವ್ಯಕ್ತಿ ಎಂದು ಟ್ರಂಪ್ ಶ್ಲಾಘಿಸಿದ್ದಾರೆ. ಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜುಲೈ 27, 2024 ರಂದು ನ್ಯಾಶ್ವಿಲ್ಲೆಗೆ ಆಗಮಿಸುತ್ತಿದ್ದಂತೆ ನ್ಯಾಶ್ವಿಲ್ಲೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಟ್ರಂಪ್ ಸಹ–ಪ್ರಚಾರ ನಿರ್ವಾಹಕಿಯಾಗಿ ಸೂಸಿ ವೈಲ್ಸ್ ಕಾಣಿಸಿಕೊಂಡಿದ್ದರು.

# ಶಾಂತಿಯುತವಾಗಿ ಅಧಿಕಾರ ಹಸ್ತಾಂತರ: ಜೋ ಬೈಡನ್



**ಅಮೆರಿಕ,ನ.8:** ಅಮೆರಿಕ ಅಧ್ಯಕ್ಷೀಯ ಚುನಾವಣೆ ಫಲಿತಾಂಶದ ಬಳಿಕ ಮೊದಲ ಬಾರಿಗೆ ಪ್ರತಿಕ್ರಿಯಿಸಿದ ಹಾಲಿ ಅಧ್ಯಕ್ಷ ಜೋ ಬೈಡನ್ ದೇಶದ 47ನೇ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅಧಿಕಾರ ಸ್ವೀಕರಿಸುವ ದಿನ ಶಾಂತಿಯುತವಾಗಿ ಅಧಿಕಾರ ಹಸ್ತಾಂತರಿಸವುದಾಗಿ ಭರವಸೆ ನೀಡಿದ್ದಾರೆ.

ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಗೆಲುವಿನ ಬಳಿಕ ಮೊದಲ ಬಾರಿಗೆ ಮಾತನಾಡಿದ ಜೋ ಬೈಡನ್, ಕಮಲಾ ಹ್ಯಾರಿಸ್ ಅವರನ್ನು ಕೂಡ ಪ್ರಶಂಸಿಸಿದ್ದು,ಅವರು ಸಂಪೂರ್ಣವಾದ ಪ್ರಯತ್ನವನ್ನು ಮಾಡಿದ್ದಾರೆ. ಅವರು ಮತ್ತು ಅವರ ಸಂಪೂರ್ಣ ತಂಡದ ಅಭಿಯಾನದ ಬಗ್ಗೆ ಹೆಮ್ಮೆ ಪಡಬೇಕು ಎಂದು ಹೇಳಿದ್ದಾರೆ. ನಿನ್ನೆ, ನಾನು ಅಧ್ಯಕ್ಷರಾಗಿ ಚುನಾಯಿತರಾದ ಟ್ರಂಪ್ ಅವರ ಜೊತೆ ಮಾತನಾಡಿ ಅಭಿನಂದನೆ ಸಲ್ಲಿಸಿದ್ದೇನೆ, ಶಾಂತಿಯುತ ಮತ್ತು ಕ್ರಮಬದ್ಧವಾದ ಅಧಿಕಾರದ ಹಸ್ತಾಂತರದ ಬಗ್ಗೆ ನಾನು ಅವರಿಗೆ ಭರವಸೆ ನೀಡಿದ್ದೇನೆ ಎಂದು ಜೋ ಬೈಡನ್ ಹೇಳಿದ್ದಾರೆ. ದೇಶದ ಜನರು ಮಾಡಿದ ಆಯ್ಕೆಯನ್ನು ನಾವು ಒಪ್ಪಿಕೊಳ್ಳುತ್ತೇವೆ. ನಾನು ಅಧ್ಯಕ್ಷನಾಗಿ ನನ್ನ ಕರ್ತವ್ಯವನ್ನು ನಿಭಾಯಿಸುತ್ತೇನೆ. ನಾನು ಸಂವಿಧಾನವನ್ನು ಗೌರವಿಸುತ್ತೇನೆ. ಜನವರಿ 20ರಂದು ಅಮೆರಿಕದಲ್ಲಿ ಶಾಂತಿಯುತವಾಗಿ ಅಧಿಕಾರ ಹಸ್ತಾಂತರವಾಗಲಿದೆ ಎಂದು ಜೋ ಬೈಡನ್ ಹೇಳಿದ್ದಾರೆ.

ಅಮೆರಿಕದ ಅಧ್ಯಕ್ಷೀಯ ಚುನಾವಣೆಯಲ್ಲಿ 295 ಮತಗಳನ್ನು ಪಡೆಯುವ ಮೂಲಕ ಡೊನಾಲ್ಡ್ ಟ್ರಂಪ್ ಬಹುಮತದ 270ರ ಅಂಕವನ್ನು ದಾಟಿದ್ದಾರೆ. ಕಮಲಾ ಹ್ಯಾರಿಸ್ ಅವರು 226 ಅಂಕಗಳಿಗೆ ತೃಪ್ತಿ ಪಡುವಂತಾಗಿದೆ.

# ಉಕ್ರೇನ್ ಯುದ್ಧ ಕೊನೆಗೊಳಿಸುವ ಟ್ರಂಪ್ ಯೋಜನೆ ತಿಳಿದಿಲ್ಲ: ಝೆಲೆನ್ಸ್ಕಿ




**ಕೀವ್,ನ.8:** ರಷ್ಯಾ–ಉಕ್ರೇನ್ ಯುದ್ಧವನ್ನು ತಕ್ಷಣವೇ ಕೊನೆಗೊಳಿಸುವ ನಿಟ್ಟಿನಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೊಂದಿರುವ ಯೋಜನೆಯ ವಿವರಗಳ ಬಗ್ಗೆ ತಿಳಿದಿಲ್ಲ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಹೇಳಿದ್ದಾರೆ.

ಹಂಗೇರಿಯ ಬುಡಾಪೆಸ್ಟ್‌ನಲ್ಲಿ ನಡೆಯುತ್ತಿರುವ 'ಯುರೋಪಿಯನ್ ರಾಜಕೀಯ ಸಮುದಾಯ ಸಮಾವೇಶ'ದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿರುವ ಝೆಲೆನ್ಸ್ಕಿ, ಟ್ರಂಪ್ ಅವರು ಯುದ್ಧವನ್ನು ಸಾಧ್ಯವಾದಷ್ಟು ಬೇಗನೆ ಕೊನೆಗೊಳಿಸುವ ವಿಶ್ವಾಸವಿದೆ. ಆದರೆ, ಅವರು ತಮ್ಮ ಯೋಜನೆ ಬಗ್ಗೆ ಚರ್ಚಿಸಿಲ್ಲ ಎಂದಿದ್ದಾರೆ.

ಯುದ್ಧ ಕೊನೆಗೊಳಿಸುವ ಪ್ರಕ್ರಿಯೆ ಕೇವಲ ಕ್ಷಿಪ್ರವಾಗಿಯಷ್ಟೇ ಇದ್ದರೆ ಉಕ್ರೇನ್‌ಗೆ ನಷ್ಟವೂ ಉಂಟಾಗಬಹುದು. ಆದರೆ, ಯಾವ ರೀತಿಯಲ್ಲಿ ಪ್ರಕ್ರಿಯೆ ಸಾಗಲಿದೆ ಎಂಬುದು ಇನ್ನೂ ಅರ್ಥವಾಗಿಲ್ಲ ಎಂದು ಹೇಳಿದ್ದಾರೆ. ರಷ್ಯಾ ಒಂದು ತಿಂಗಳಿನಿಂದ ಸೇನಾ ಕಾರ್ಯಾಚರಣೆಯನ್ನು ತೀವ್ರಗೊಳಿಸಿದೆ. ಉತ್ತರ ಕೊರಿಯಾ ಸಹ ತನ್ನ ಪಡೆಗಳನ್ನು ರಷ್ಯಾದ ಕರ್ಸ್ಕ್ ಪ್ರಾಂತ್ಯದಲ್ಲಿ ನಿಯೋಜಿಸಿರುವುದು ಉಕ್ರೇನ್ನ ಆತಂಕವನ್ನು ಹೆಚ್ಚಿಸಿದೆ. ಇಂತಹ ಹೊತ್ತಿನಲ್ಲೇ ಟ್ರಂಪ್ ಅವರು ಅಮೆರಿಕದ ಅಧ್ಯಕ್ಷರಾಗಿ ಚುನಾಯಿತರಾಗಿದ್ದಾರೆ. ಟ್ರಂಪ್ ಅವರು ಚುನಾವಣೆ ಪ್ರಚಾರದ ಸಂದರ್ಭದಲ್ಲಿ, ಅಮೆರಿಕವು ಉಕ್ರೇನ್‌ಗೆ ನೀಡುತ್ತಿರುವ ಭಾರಿ ಶಸ್ತ್ರಾಸ್ತ್ರ ಹಾಗೂ ಹಣಕಾಸಿನ ನೆರವಿನ ಬಗ್ಗೆ ಟೀಕಿಸಿದ್ದರು. ಹಾಗೆಯೇ, ಅಧಿಕಾರಕ್ಕೇರಿದರೆ ಯುದ್ಧವನ್ನು ಸಾಧ್ಯವಾದಷ್ಟು ಬೇಗನೆ ಕೊನೆಗೊಳಿಸುವುದಾಗಿ ಭರವಸೆ ನೀಡಿದ್ದರು.

# ಡೊನಾಲ್ಡ್ ಟ್ರಂಪ್ ಜೊತೆಗೆ ರಷ್ಯಾ ಮಾತುಕತೆಗೆ ಸಿದ್ಧ– ಪುಟಿನ್



**ಮಾಸ್ಕೋ,ನ.8:** ಎರಡನೇ ಬಾರಿಗೆ ಅಮೆರಿಕದ ಶ್ವೇತಭವನದ ಗದ್ದುಗೆ ಏರಿದ ಡೊನಾಲ್ಡ್ ಟ್ರಂಪ್‌ಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶುಭಾಶಯ ತಿಳಿಸಿದ್ದಾರೆ.


ಮಂಗಳವಾರದ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮಾಕ್ರಟಿಕ್ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರನ್ನು ಟ್ರಂಪ್ ಸೋಲಿಸಿದ ನಂತರ ದಕ್ಷಿಣ ನಗರವಾದ ಸೋಚಿಯಲ್ಲಿ ವಾಲ್ಡೈ ಫೋರಂಗೆ ನೀಡಿದ ಹೇಳಿಕೆಯಲ್ಲಿ, ನಾನು ಅವರನ್ನು ಅಭಿನಂದಿಸುತ್ತೇನೆ ಎಂದು ಪುಟಿನ್ ಹೇಳಿದ್ದಾರೆ.

ಟ್ರಂಪ್ ಅವರೊಂದಿಗೆ ಮಾತುಕತೆ ನಡೆಸಲು ನೀವು ಮುಕ್ತರಾಗಿದ್ದೀರಾ ಎಂಬ ಪ್ರಶ್ನೆಗೆ, ರಷ್ಯಾದ ನಾಯಕ ಹೌದು, ನಾನು ಸಿದ್ಧ ಎಂದು ಉತ್ತರಿಸಿದ್ದಾರೆ. ಬುಧವಾರ ಬೆಳಗ್ಗೆಯಿಂದ ಬಹುಶಃ 70 ವಿಶ್ವ ನಾಯಕರೊಂದಿಗೆ ಮಾತನಾಡಿದ್ದೇನೆ. ಆದರೆ, ಪುಟಿನ್ ಅವರೊಂದಿಗೆ ಮಾತನಾಡಲಿಲ್ಲ. ಅವರು ಹ್ಯಾರಿಸ್ ಗೆಲ್ಲಲು ಬಯಸುತ್ತಾರೆ ಎಂದು ನಗು ಬೀರುತ್ತಾ ಟ್ರಂಪ್ ಪ್ರತಿಕ್ರಿಯಿಸಿದ್ದರು.

ಅಮೆರಿಕದ ತನಿಖಾ ವರದಿಗಾರ ಬಾಬ್ ವುಡ್ವರ್ಡ್ ಅವರ ಹೊಸ ಪುಸ್ತಕದಲ್ಲಿ, ಜೋ ಬೈಡೆನ್ ಅವರ ಅಧ್ಯಕ್ಷತೆಯಲ್ಲಿ ಟ್ರಂಪ್ ಮತ್ತು ಪುಟಿನ್ ಏಳು ಬಾರಿ ಮಾತನಾಡಿರಬಹುದು ಎಂದು ಪ್ರತಿಪಾದಿಸಿದ್ದಾರೆ.

ಹಿಲರಿ ಕ್ಲಿಂಟನ್ ವಿರುದ್ಧ ಟ್ರಂಪ್ ಪ್ರಚಾರವನ್ನು ಹೆಚ್ಚಿಸಲು ಮಾಸ್ಕೋ 2016 ರ ಅಧ್ಯಕ್ಷೀಯ ಚುನಾವಣೆಯಲ್ಲಿ ಮಧ್ಯಪ್ರವೇಶಿಸಿತ್ತು ಎಂಬ ಆರೋಪಗಳೂ ಇವೆ.

# ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ನಾಲ್ಕರ ಘಟ್ಟಕ್ಕೆ ಕಿರಣ್ ಜಾರ್ಜ್



**ಕೊರಿಯಾ,ನ.8:** ಯಶಸ್ಸಿನ ಓಟ ಮುಂದುವರಿಸಿರುವ ಭಾರತದ ಕಿರಣ್ ಜಾರ್ಜ್ ಅವರು ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಐದನೇ ಶ್ರೇಯಾಂಕದ ಜಪಾನ್ ಆಟಗಾರನ ಮೇಲೆ ನೇರ ಸೆಟ್ಗಳ ಗೆಲುವು ಪಡೆದು ಸೆಮಿಫೈನಲ್‌ಗೆ ಲಗ್ಗೆಯಿಟ್ಟರು.

ವಿಶ್ವ ಕ್ರಮಾಂಕದಲ್ಲಿ 41ನೇ ಸ್ಥಾನದಲ್ಲಿರುವ ಕಿರಣ್, ಶುಕ್ರವಾರ ನಡೆದ ಕ್ವಾರ್ಟರ್ಫೈನಲ್ ಪಂದ್ಯದಲ್ಲಿ ತಕುಮಾ ಒಬಾಯಾಶಿ ಅವರನ್ನು ಕೇವಲ 39 ನಿಮಿಷಗಳಲ್ಲಿ 21–14, 21–16 ರಿಂದ ಸೋಲಿಸಿದರು. 24 ವರ್ಷ ವಯಸ್ಸಿನ ಕಿರಣ್ ಜಾರ್ಜ್, ಸೂಪರ್ 300 ಮಟ್ಟದ ಈ ಟೂರ್ನಿಯ ಸೆಮಿಫೈನಲ್‌ನಲ್ಲಿ ಅಗ್ರ ಶ್ರೇಯಾಂಕದ ಕುನ್ಲಾವುತ್ ವಿಟಿಡ್ಸರ್ನ್ ಅವರನ್ನು ಎದುರಿಸಲಿದ್ದಾರೆ.

ವಿಶ್ವ ಕ್ರಮಾಂಕದಲ್ಲಿ ಐದನೇ ಸ್ಥಾನದಲ್ಲಿರುವ ಥಾಯ್ಲೆಂಡ್‌ನ ಆಟಗಾರ ಕುನ್ಲಾವುತ್ ಇನ್ನೊಂದು ಕ್ವಾರ್ಟರ್‌ಫೈನಲ್‌ನಲ್ಲಿ ಚೀನಾದ ಲಿಯು ಲಿಯಾಂಗ್ ಅವರನ್ನು 21–15, 21–11 ರಿಂದ ಹಿಮ್ಮೆಟ್ಟಿಸಿದರು.

# ಸ್ಯಾಮ್ಸನ್ ಸಿಡಿಲಬ್ಬರದ ಶತಕಕ್ಕೆ ಬೆದರಿದ ಹರಿಣ ಮೊದಲ ಟಿ20 ಪಂದ್ಯದಲ್ಲಿ ಭಾರತಕ್ಕೆ ಜಯ



ಆರಂಭಿಕ ಸಂಜು ಸ್ಯಾಮ್ಸನ್ ಶತಕ ಹಾಗೂ ಸ್ಪಿನ್ನರ್ ಗಳ ಮಾರಕ ದಾಳಿ ನೆರವಿನಿಂದ ಭಾರತ ತಂಡ 61 ರನ್ ಗಳ ಭಾರೀ ಅಂತರದಿಂದ ಆತಿಥೇಯ ದಕ್ಷಿಣ ಆಫ್ರಿಕಾ ತಂಡವನ್ನು ಸೋಲಿಸಿ ಟಿ–20 ಸರಣಿಯಲ್ಲಿ 1–0 ಮುನ್ನಡೆ ಸಾಧಿಸಿದೆ.

ಡರ್ಬನ್ ನಲ್ಲಿ ಶುಕ್ರವಾರ ನಡೆದ ಮೊದಲ ಟಿ–20 ಪಂದ್ಯದಲ್ಲಿ ಟಾಸ್ ಸೋತರೂ ಮೊದಲು ಬ್ಯಾಟ್ ಮಾಡುವ ಅವಕಾಶ ಪಡೆದ ಭಾರತ ತಂಡ 20 ಓವರ್ ಗಳಲ್ಲಿ 8 ವಿಕೆಟ್ ಕಳೆದುಕೊಂಡು 202 ರನ್ ಗಳ ಬೃಹತ್ ಮೊತ್ತ ಪೇರಿಸಿತು.

ಕಠಿಣ ಗುರಿ ಬೆಂಬತ್ತಿದ ದಕ್ಷಿಣ ಆಫ್ರಿಕಾ ತಂಡ 17.5 ಓವರ್ ಗಳಲ್ಲಿ 141 ರನ್ ಗೆ ಆಲೌಟಾಯಿತು.

ಪೈಪೋಟಿಯ ಮೊತ್ತ ಬೆಂಬತ್ತಿದ ದಕ್ಷಿಣ ಆಫ್ರಿಕಾ ತಂಡ ಸ್ಪಿನ್ನರ್ ವರುಣ್ ಚಕ್ರವರ್ತಿ ದಾಳಿಗೆ ತತ್ತರಿಸಿ ಆರಂಭಿಕ ಆಘಾತಕ್ಕೆ ಒಳಗಾಯಿತು. ಒಂದು ಹಂತದಲ್ಲಿ ತಂಡ 44 ರನ್ ಗೆ 3 ವಿಕೆಟ್ ಕಳೆದುಕೊಂಡು ಒತ್ತಡಕ್ಕೆ ಸಿಲುಕಿದ್ದಾಗ ಐಪಿಎಲ್ ನಲ್ಲಿ ಅತೀ ದೊಡ್ಡ ಮೊತ್ತ (23 ಕೋಟಿ ರೂ.ಗೆ) ತಂಡದಲ್ಲಿ ಉಳಿದ ದಾಖಲೆ ಬರೆದ ಹೆನ್ರಿಚ್ ಕ್ಲಾಸೆನ್ 22 ಎಸೆತಗಳಲ್ಲಿ 2 ಬೌಂಡರಿ ಮತ್ತು 1 ಸಿಕ್ಸರ್ ಒಳಗೊಂಡ 25 ರನ್ ಬಾರಿಸಿ ಹೋರಾಟ ನಡೆಸಿದರು.

ಹೆನ್ರಿಚ್ ಔಟಾಗುತ್ತಿದ್ದಂತೆ ತಂಡ ರವಿ ಬಿಶ್ನೋಯಿ ದಾಳಿಗೆ ಸಿಲುಕಿ ಮತ್ತೊಮ್ಮೆ ಕುಸಿತ ಕಂಡಿತು. ಇದರಿಂದ ತಂಡ 114 ರನ್ ಗೆ 8 ವಿಕೆಟ್ ಕಳೆದುಕೊಂಡು ಸೋಲಿನ ಹಾದಿ ಹಿಡಿಯಿತು. ಈ ಹಂತದಲ್ಲಿ ಗೆರಾಲ್ಡ್ ಕೊಯೆಟಿಜ್ 11 ಎಸೆತಗಳಲ್ಲಿ 3 ಸಿಕ್ಸರ್ ಒಳಗೊಂಡ 23 ರನ್ ಬಾರಿಸಿದ್ದಾಗ ಸೂರ್ಯಕುಮಾರ್ ಯಾದವ್ ಮಿಂಚಿನ ಕ್ಷೇತ್ರರಕ್ಷಣೆ ಹಾಗೂ ನೇರ ಎಸೆತದಿಂದ ರನೌಟ್ ಆದರು.

### ಸ್ಯಾಮ್ಸನ್ ಸತತ 2ನೇ ಶತಕ

ಇದಕ್ಕೂ ಮುನ್ನ ಬ್ಯಾಟ್ ಮಾಡಿದ ಭಾರತ ತಂಡ ಟಿ–20ಯಲ್ಲಿ ಸಂಜು ಸ್ಯಾಮ್ಸನ್ ಸಿಡಿಸಿದ ಸತತ 2ನೇ ಶತಕದ ನೆರವಿನಿಂದ ಬೃಹತ್ ಮೊತ್ತ ಪೇರಿಸಿತು.

47 ಎಸೆತಗಳಲ್ಲಿ ಶತಕ ಪೂರೈಸಿದ ಸ್ಯಾಮ್ಸನ್ 50 ಎಸೆತಗಳಲ್ಲಿ 7 ಬೌಂಡರಿ ಮತ್ತು 10 ಸಿಕ್ಸರ್ ಗಳ ನೆರವಿನಿಂದ 107 ರನ್ ಗಳಿಸಿದರು. ತವರಿನಲ್ಲಿ ನಡೆದ ನ್ಯೂಜಿಲೆಂಡ್ ಸರಣಿಯಲ್ಲಿ ಶತಕ ಸಿಡಿಸಿದ್ದ ಸ್ಯಾಮ್ಸನ್ ಗೆ ಇದು ಎರಡನೇ ಶತಕವಾಗಿದೆ.

ತಿಲಕ್ ವರ್ಮಾ (33), ಸೂರ್ಯಕುಮಾರ್ ಯಾದವ್ (21) ಮತ್ತು ರಿಂಕು ಸಿಂಗ್ (11) ತಂಡದ ಮೊತ್ತ 200ರ ಗಡಿ ತಲುಪಿಸಲು ನೆರವಾದರು. ದಕ್ಷಿಣ ಆಫ್ರಿಕಾ ಪರ ಗೆರಾಲ್ಡ್ ಕೊಯಿಟೆಜ್ 3 ವಿಕೆಟ್ ಪಡೆದು ಮಿಂಚಿದರು.

# ಐಸಿಸಿ ಚಾಂಪಿಯನ್ಸ್ ಟ್ರೋಫಿ: ಪಾಕಿಸ್ತಾನಕ್ಕೆ ತೆರಳದಿರಲು ನಿರ್ಧರಿಸಿದ ಭಾರತ




**ನವದೆಹಲಿ,ನ.8:** ಮುಂದಿನ ವರ್ಷ ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗಾಗಿ ಟೀಮ್ ಇಂಡಿಯಾ ಪಾಕಿಸ್ತಾನಕ್ಕೆ ಪ್ರಯಾಣಿಸುವುದಿಲ್ಲ ಎಂದು ಬಿಸಿಸಿಐ ಹೇಳಿದೆ. ಬದಲಿಗೆ ಭಾರತೀಯ ಕ್ರಿಕೆಟ್ ಮಂಡಳಿ ತಮ್ಮ ಎಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡುವ ಬಯಕೆಯನ್ನು ವ್ಯಕ್ತಪಡಿಸಿದೆ. "ಇದು ನಮ್ಮ ನಿಲುವಾಗಿದೆ ಮತ್ತು ಅದನ್ನು ಬದಲಾಯಿಸಲು ಯಾವುದೇ ಕಾರಣವಿಲ್ಲ. ನಾವು ಅವರಿಗೆ ಪತ್ರ ಬರೆದಿದ್ದೇವೆ ಮತ್ತು ನಮ್ಮ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸುವಂತೆ ಕೇಳಿಕೊಂಡಿದ್ದೇವೆ, "ಎಂದು ಬೆಳವಣಿಗೆಗೆ ಹತ್ತಿರದ ಮೂಲವೊಂದು ಮಾಧ್ಯಮಕ್ಕೆ ತಿಳಿಸಿದೆ. ಫೆಬ್ರವರಿ 19 ರಿಂದ ಮಾರ್ಚ್ 5 ರವರೆಗೆ ನಡೆಯಲಿರುವ ಎಲೈಟ್ ಸ್ಪರ್ಧೆಯಲ್ಲಿ ವಿಶ್ವದ ಅಗ್ರ ಎಂಟು ತಂಡಗಳು ಭಾಗವಹಿಸಲಿವೆ. ಕರಾಚಿ, ಲಾಹೋರ್ ಮತ್ತು ರಾವಲ್ಪಿಂಡಿ ಆತಿಥ್ಯ ವಹಿಸುವ ನಗರಗಳಾಗಿ ಕಾರ್ಯನಿರ್ವಹಿಸಲಿವೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಸರ್ಕಾರದೊಂದಿಗೆ ಸಮಾಲೋಚಿಸಿ ತಂಡವನ್ನು ಪಾಕಿಸ್ತಾನಕ್ಕೆ ಕಳುಹಿಸದಿರುವ ನಿರ್ಧಾರವನ್ನು ಬಿಸಿಸಿಐ ತೆಗೆದುಕೊಂಡಿದೆ ಎಂದು ವರದಿ ಹೇಳಿದೆ. ಆರಂಭದಲ್ಲಿ ಪಾಕಿಸ್ತಾನದ ಆತಿಥ್ಯ ವಹಿಸಲು ಪ್ರಸ್ತಾಪಿಸಲಾಗಿದ್ದ ಏಷ್ಯಾ ಕಪ್ 2023 ಅನ್ನು ಹೈಬ್ರಿಡ್ ಮಾದರಿಯಲ್ಲಿ ಆಡಲಾಯಿತು, ಪಂದ್ಯಗಳು ಪಾಕಿಸ್ತಾನ ಮತ್ತು ಶ್ರೀಲಂಕಾದಲ್ಲಿ ನಡೆದವು. ಆಗ ಭಾರತವು ತನ್ನ ಎಲ್ಲಾ ಪಂದ್ಯಗಳನ್ನು ದ್ವೀಪ ರಾಷ್ಟ್ರದಲ್ಲಿ ಆಡಿತ್ತು. ಕಳೆದ ತಿಂಗಳು ಇಸ್ಲಾಮಾಬಾದ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆಯ ಸಭೆಯ ಹೊರತಾಗಿ ಭಾರತದ ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಪಾಕಿಸ್ತಾನದ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಮುಹಮ್ಮದ್ ಇಶಾಕ್ ದರ್ ನಡುವಿನ ಸಭೆಯ ನಂತರ ತೀವ್ರ ಪ್ರತಿಸ್ಪರ್ಧಿಗಳ ನಡುವಿನ ಕ್ರಿಕೆಟ್ ಸಂಬಂಧಗಳು ನವೀಕರಿಸಲ್ಪಡುತ್ತವೆ ಎಂದು ನಿರೀಕ್ಷಿಸಲಾಗಿತ್ತು.

ಈಗ ಪಿಸಿಬಿ ಅಧ್ಯಕ್ಷರಾಗಿರುವ ಪಾಕಿಸ್ತಾನದ ಆಂತರಿಕ ಸಚಿವ ಸೈಯದ್ ಮೊಹ್ಸಿನ್ ರಾಜಾ ನಖ್ವಿ ಕೂಡ ಈ ಪಟ್ಟಿಯಲ್ಲಿದ್ದಾರೆ ಎಂದು ವರದಿಯಾಗಿದೆ. ಪ್ರತಿ ಪಂದ್ಯದ ನಂತರ ಭಾರತವನ್ನು ತಮ್ಮ ದೇಶಕ್ಕೆ ಮರಳಿ ಕಳುಹಿಸುವ ಆಲೋಚನೆಯನ್ನು ಪಿಸಿಬಿ ಪ್ರಸ್ತಾಪಿಸಿದೆ ಎಂದು ಮಾಧ್ಯಮ ವರದಿ ಮಾಡಿದೆ. ಆದಾಗ್ಯೂ, ಉಭಯ ದೇಶಗಳ ಕ್ರಿಕೆಟ್ ಮಂಡಳಿಗಳ ನಡುವಿನ ಹಗ್ಗಜಗ್ಗಾಟ ಮುಂದುವರೆದಿರುವುದರಿಂದ ಐಸಿಸಿ ಇನ್ನೂ ಅಂತಿಮ ನಿರ್ಧಾರ ತೆಗೆದುಕೊಂಡಿಲ್ಲ. 2009 ರಲ್ಲಿ ಶ್ರೀಲಂಕಾ ಆಟಗಾರರ ಮೇಲೆ ನಡೆದ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನದಲ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ ಅನ್ನು ಸ್ಥಗಿತಗೊಳಿಸಲಾಯಿತು.

ಆದಾಗ್ಯೂ, ಇತ್ತೀಚಿನ ದಿನಗಳಲ್ಲಿ ಪಾಕಿಸ್ತಾನವು ಇಂಗ್ಲೆಂಡ್ ಮತ್ತು ಬಾಂಗ್ಲಾದೇಶದಂತಹ ಅಂತರರಾಷ್ಟ್ರೀಯ ತಂಡಗಳಿಗೆ ಆತಿಥ್ಯ ವಹಿಸಿದೆ. 2006ರಲ್ಲಿ ರಾಹುಲ್ ದ್ರಾವಿಡ್ ನಾಯಕತ್ವದ ಭಾರತ ತಂಡ ಪಾಕಿಸ್ತಾನ ವಿರುದ್ಧ 5 ಪಂದ್ಯಗಳ ಏಕದಿನ ಸರಣಿಯನ್ನು 4–1 ಅಂತರದಿಂದ ಗೆದ್ದುಕೊಂಡಿತ್ತು.

# ಜೈಪುರ್ ಮೇಲೆ ಪಟನಾ ಪೈರೇಟ್ಸ್ ಸವಾರಿ



**ಹೈದರಾಬಾದ್, ನ.8:** ಶುಕ್ರವಾರದ ಜಿದ್ದಾಜಿದ್ದಿ ಪ್ರೊ ಕಬಡ್ಡಿ ಮೇಲಾಟದಲ್ಲಿ ಪಟನಾ ಪೈರೇಟ್ಸ್ 43–41 ಅಂತರದಿಂದ ಜೈಪುರ್ ಪಿಂಕ್ ಪ್ಯಾಂಥರ್‌ಗೆ ಸೋಲುಣಿಸಿತು.

ಕೊನೆಯ ನಿಮಿಷದಲ್ಲಿ ದೇವಾಂಕ್ ಡು ಆರ್ ಡೈ ರೈಡ್‌ನಲ್ಲಿ ಬೋನಸ್ ಅಂಕ ತಂದುಕೊಡುವುದರೊಂದಿಗೆ ಪಟನಾ ಮೇಲೇರಿತು.

ಕೊನೆಯಲ್ಲಿ ಸೋಮ್‌ಬೀರ್ ಅವರನ್ನು ಬಲೆಗೆ ಬೀಳಿಸುವಲ್ಲಿ ಯಶಸ್ವಿಯಾದ ಪಟನಾ 2 ಅಂಕಗಳ ಮೇಲುಗೈ ಸಾಧಿಸಿತು.

ಪಟನಾ ಪರ್ರೈಡರ್‌ಗಳಾದ ಅಯಾನ್ 14, ದೇವಾಂಕ್ 11 ಅಂಕ ತಂದಿತ್ತರು. ಇದು 7 ಪಂದ್ಯಗಳಲ್ಲಿ ಪಟನಾ ಸಾಧಿಸಿದ 4ನೇ ಜಯ. ಜೈಪುರ್ ಪರ ನಾಯಕ ಅರ್ಜುನ್ ದೇಶ್ವಾಲ್ ಅದ್ಭುತ ಪ್ರದರ್ಶನ ನೀಡಿ 20 ಅಂಕ ಗಳಿಸಿ ಕೊಟ್ಟರು. ಇದು 7 ಪಂದ್ಯಗಳಲ್ಲಿ ಜೈಪುರ್ ಅನುಭವಿಸಿದ 3ನೇ ಸೋಲು.

### ಡೆಲ್ಲಿಗೆ 4ನೇ ಗೆಲುವು

ದ್ವಿತೀಯ ಪಂದ್ಯದಲ್ಲಿ ದಬಾಂಗ್ ಡೆಲ್ಲಿ 39–26 ಅಂತರದಿಂದ ತಮಿಳ್ ತಲೈವಾಸ್‌ಗೆ ಸೋಲುಣಿಸಿತು. ಇದು 9 ಪಂದ್ಯಗಳಲ್ಲಿ ಡೆಲ್ಲಿ ಸಾಧಿಸಿದ 4ನೇ ಜಯ. ನಾಯಕ ಆಶು ಮಲಿಕ್ 12 ಅಂಕ ಗಳಿಸಿ ಡೆಲ್ಲಿ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು.

**ಶನಿವಾರದ ಪಂದ್ಯ**

**1. ತೆಲುಗು ಟೈಟಾನ್ಸ್– ಪುಣೇರಿ ಪಲ್ಟನ್: ಆರಂಭ: ರಾತ್ರಿ 8 ಗಂಟೆ**

**2. ಬೆಂಗಳೂರು ಬುಲ್ಸ್ – ಬೆಂಗಾಲ್ ಟೈಗರ್ಸ್: ಆರಂಭ: ರಾತ್ರಿ 9 ಗಂಟೆ**

**ಪ್ರಸಾರ: ಸ್ಟಾರ್ ಸ್ಪೋರ್ಟ್ಸ್**